24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 60 | ನವದೆಹಲಿ | ಬೆಲೆ ₹ 10 | ಆಗಸ್ಟ್ 26, 2026, ಬುಧವಾರ






ಶಿವಲಿಂಗಯ್ಯ
ಸಮಾಜ ಸೇವಕರು

ವಿಜಯನಗರ ವಿಧಾನಸಭಾ ಕ್ಷೇತ್ರದ ಯುವನಾಯಕರಾದ

ಶ್ರೀ ಪ್ರದೀಪ್ ಕೃಷ್ಣಪ್ಪ ಅವರಿಗೆ

ಜನುಮದಿನದ ಶುಭಾಶಯಗಳು

26 ಆಗಸ್ಟ್ 2026

ಶುಭಕೋರುವವರು:
ಪಿ.ಎಲ್. ವೆಂಕಟರಾಮರೆಡ್ಡಿ
ವ್ಯವಸ್ಥಾಪಕ ನಿರ್ದೇಶಕರು,
ವಿ2 ಹೋಲ್ಡಿಂಗ್ಸ್, ಬೆಂಗಳೂರು

**ನಿತ್ಯ ಪಂಚಾಂಗ 26.08.2026 ಬುಧವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

**ಈದ್-ಮಿಲಾದ್, ಋಗುಪಾಕರ್ಮ, ತಿರು ಓಣಂ, ಲಕ್ಷ್ಮೀಮಿನಾಥ ತೀರ್ಥ ಆರಾಧನೆ, ಭಗವಾನ್ ಜಿವ್ಹೇಶ್ವರ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# 1.5 ಕೋಟಿ ಮತದಾರರು ಹೊರಗುಳಿಯುವ ಆತಂಕ: ಆಕ್ಷೇಪಣೆ ವಿಚಾರಣೆಗೆ ಹೆಚ್ಚಿನ ಸಮಯ ನೀಡಲು ಮುಖ್ಯಮಂತ್ರಿ ಡಿಕೆಶಿ ಒತ್ತಾಯ

**ಬೆಂಗಳೂರು,ಆ.25:** ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಎಸ್‌ಐಆರ್ ಪ್ರಕ್ರಿಯೆಯಿಂದಾಗಿ ಸುಮಾರು 1.5 ಕೋಟಿ ಮತದಾರರು ಪಟ್ಟಿಯಿಂದ ಕೈಬಿಟ್ಟು ಹೋಗುವ ಭೀತಿ ಎದುರಾಗಿದೆ. ಈ ಹಿನ್ನೆಲೆಯಲ್ಲಿ, ಆಕ್ಷೇಪಣೆ ಸಲ್ಲಿಕೆ ಹಾಗೂ ವಿಚಾರಣೆಗೆ ಸೂಕ್ತ ಸಮಯಾವಕಾಶ ನೀಡುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್‌ಗೆ ಪತ್ರ ಬರೆದಿದ್ದಾರೆ.

ರಾಜ್ಯದ ಒಟ್ಟು 5.54 ಕೋಟಿ ಮತದಾರರ ಪೈಕಿ ಸುಮಾರು 1.08 ಕೋಟಿ ಜನರನ್ನು ಎಎಸ್‌ಡಿಓ (ಗೈರುಹಾಜರು, ಸ್ಥಳಾಂತರ, ಮರಣ, ನಕಲು ಹಾಗೂ ಇತರೆ) ಪಟ್ಟಿಗೆ ಸೇರಿಸಲಾಗಿದೆ. ರಾಜಧಾನಿ ಬೆಂಗಳೂರು ಒಂದರಲ್ಲೇ 46.88 ಲಕ್ಷ ಮತದಾರರು ಈ ಪಟ್ಟಿಯಲ್ಲಿದ್ದಾರೆ. ಇದರ ಜೊತೆಗೆ, ತಾರ್ಕಿಕ ದೋಷಗಳ ಹೆಸರಿನಲ್ಲಿ 43.8 ಲಕ್ಷ ಮತದಾರರಿಗೆ ಪರಿಶೀಲನಾ ನೋಟಿಸ್ ನೀಡಲಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಉದ್ಯೋಗ, ಅನಾರೋಗ್ಯ ಅಥವಾ ಇತರೆ ಕಾರಣಗಳಿಗಾಗಿ ಸ್ಥಳಾಂತರಗೊಂಡ ನೈಜ ಮತದಾರರು ಇದರಿಂದಾಗಿ ಮತದಾನದ ಹಕ್ಕಿನಿಂದ ವಂಚಿತರಾಗುವ ಅಪಾಯವಿದೆ. ಅದರಲ್ಲೂ



ಬಡವರು ಮತ್ತು ವಲಸೆ ಕಾರ್ಮಿಕರಿಗೆ ಇದು ತೀವ್ರ ತೊಂದರೆಯಾಗಲಿದ್ದು, ತಮ್ಮ ಅರ್ಹತೆಯನ್ನು ಸಾಬೀತುಪಡಿಸಲು ಅಗತ್ಯವಿರುವ ದಾಖಲೆ ಗಳನ್ನು ಒದಗಿಸಲು ಅವರ ಬಳಿ ಸಮಯದ ಕೊರತೆಯಿದೆ ಎಂದು ಮುಖ್ಯಮಂತ್ರಿ ವಿವರಿಸಿದ್ದಾರೆ. ಮತದಾರರಿಗೆ ನೋಟಿಸ್ ನೀಡಿದ ಕೇವಲ ಒಂದು ವಾರದೊಳಗೆ ಉತ್ತರ ಕೇಳುವುದು ದುಸ್ತರವಾಗಲಿದ್ದು, ದಾಖಲೆಗಳನ್ನು ಒದಗಿಸಲು ಪ್ರತಿಯೊಬ್ಬರಿಗೂ ಕನಿಷ್ಠ 3 ರಿಂದ 4 ವಾರಗಳ ಕಾಲಾವಕಾಶ ನೀಡಬೇಕು. ಸದ್ಯ ರಾಜ್ಯದಲ್ಲಿ ಯಾವುದೇ ಚುನಾವಣೆಗಳು ನಿಗದಿಯಾಗದ ಕಾರಣ, ಕರಡು ಪಟ್ಟಿಯಲ್ಲಿ ಹೆಸರಿಲ್ಲದವರು ಹೊಸದಾಗಿ ಸೇರ್ಪಡೆಗೊಳ್ಳಲು ಆಕ್ಷೇಪಣೆ ಮತ್ತು ಹಕ್ಕು ಮಂಡನೆ ಸಲ್ಲಿಕೆಯ ಗಡುವನ್ನು ವಿಸ್ತರಿಸಬೇಕು ಎಂದು ಆಗ್ರಹಿಸಲಾಗಿದೆ. ಮತದಾರರ ಪಟ್ಟಿಯ ಕರಡನ್ನು ಕಡ್ಡಾಯವಾಗಿ ನಗರಾಭಿವೃದ್ಧಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಗಳಲ್ಲಿ ಹಾಗೂ ಗ್ರಾಮೀಣ ಭಾಗದಲ್ಲಿ ಗ್ರಾಮ ಸಭೆಗಳಲ್ಲಿ ಓದಿ ಹೇಳುವಂತೆ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಬೇಕು. ಕೇವಲ ನಿಯಮಗಳ ಪಾಲನೆಯಷ್ಟೇ ಅಲ್ಲದೆ, ಪ್ರಾಯೋಗಿಕವಾಗಿ ತಪ್ಪುಗಳನ್ನು ಗುರುತಿಸಿ ಸರಿಪಡಿಸುವ ಕೆಲಸವಾಗಬೇಕು ಎಂದು ಸಿಎಂ ಒತ್ತಾಯಿಸಿದ್ದಾರೆ. ಬೃಹತ್ ಪ್ರಮಾಣದ ಆಕ್ಷೇಪಣೆಗಳನ್ನು ಹಾಗೂ ವಿಚಾರಣೆಗಳನ್ನು ನಿರ್ದಿಷ್ಟ ಸಮಯದಲ್ಲಿ ಪೂರ್ಣಗೊಳಿಸಲು ಪ್ರಸ್ತುತ ಇರುವ ಸಿಬ್ಬಂದಿ ವರ್ಗ ಸಾಲದು. ಹಾಗಾಗಿ, ತಾರ್ಕಿಕ ದೋಷಗಳು ಹೆಚ್ಚಿರುವ ಜಿಲ್ಲೆಗಳಲ್ಲಿ ಹೆಚ್ಚುವರಿ ಎಇಆರ್‌ಓ ಹಾಗೂ ಹೆಚ್ಚುವರಿ ಜಿಲ್ಲಾ ಚುನಾವಣಾಧಿಕಾರಿಗಳನ್ನು ನೇಮಕ ಮಾಡಬೇಕು ಎಂದು ಸಿಎಂ ಡಿ.ಕೆ.ಶಿವಕುಮಾರ್ ಚುನಾವಣಾ ಆಯೋಗವನ್ನು ಕೋರಿದ್ದಾರೆ.

# ಪರ-ವಿರೋಧಿಗಳು ಯಾರೆಂದು ಮೊದಲು ತಿಳಿದುಕೊಳ್ಳಿ: ಶೋಷಿತ ಸಮುದಾಯಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿವಿಮಾತು

**ಬೆಂಗಳೂರು, ಆ.25:** ನಾನೀಗ ಸರ್ಕಾರದ ಮುಖ್ಯಸ್ಥನಲ್ಲ, ನನ್ನ ಬಳಿ ಅಧಿಕಾರವಿಲ್ಲ. ಆದರೆ ಒಳಮೀಸಲಾತಿ, ಮೀಸಲಾತಿ ವ್ಯವಸ್ಥೆ, ಸಾಮಾಜಿಕ ನ್ಯಾಯದ ಪರ ಇರುವವನು. ಈ ವಿಚಾರದಲ್ಲಿ ಹಿಂದೆಯೂ ರಾಜಿಯಾಗಿಲ್ಲ, ಮುಂದೆಯೂ ರಾಜಿಯಾಗಲ್ಲ. ಜಾತಿ ವ್ಯವಸ್ಥೆ ಪರಿಣಾಮವಾಗಿ ಶೋಷಣೆಗೆ ಒಳಗಾದವರಿಗೆ, ಅವಕಾಶ ವಂಚಿತರಿಗೆ ಮೀಸಲಾತಿ ಸಿಗಲೇಬೇಕು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಪ್ರತಿಪಾದಿಸಿದರು.

ಸಾಮಾಜಿಕ ನ್ಯಾಯಕ್ಕಾಗಿ ಒಳ ಮೀಸಲಾತಿ ಹೋರಾಟ ಸಮಿತಿ ಆಯೋಜಿಸಿದ್ದ ಒಳ ಮೀಸಲಾತಿ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾವ್ಯಾರು ದಡ್ಡರಲ್ಲ, ಅವಕಾಶ ವಂಚಿತರು. ನಮ್ಮ ಬುದ್ಧಿವಂತಿಕೆ ಪ್ರದರ್ಶನಕ್ಕೆ ಅವಕಾಶ ಸಿಕ್ಕಿರಲಿಲ್ಲ.



ಈ ಅವಕಾಶವನ್ನು ಮೀಸಲಾತಿ ವ್ಯವಸ್ಥೆ ನೀಡುತ್ತಿದೆ. ಎಲ್ಲಿಯವರೆಗೆ ಸಮಾನ ಅವಕಾಶಗಳು ಸಿಗುವುದಿಲ್ಲ, ಅಲ್ಲಿಯವರೆಗೆ ಅಸಮಾನತೆ ಹೋಗುವುದಿಲ್ಲ. ಈ ಅಸಮಾನತೆ ಹೋಗಬೇಕಾದರೆ ಎಲ್ಲರಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ಶಕ್ತಿ ಬರಬೇಕು ಎಂದು ಬಾಬಾ ಸಾಹೇಬರು ಹೇಳಿದ್ದರು. ಬುದ್ಧನ ಕಾಲದಿಂದಲೂ ಇಲ್ಲಿ ಜಾತಿ ವ್ಯವಸ್ಥೆ ಇದೆ, ಅದರ ವಿರುದ್ಧ ಸುಧಾರಣಾ ಚಳವಳಿಗಳು ನಡೆಯುತ್ತಿದೆ, ಇದು ಹೋಗಬೇಕು ಎಂದು ಎಲ್ಲರೂ ಹೇಳುತ್ತಾರೆ, ಆದರೂ ಇನ್ನೂ ಜಾತಿ ಜೀವಂತವಿದೆ ಎನ್ನುವುದು ವಿಪರ್ಯಾಸ ಎಂದು ಬೇಸರ ಹೊರಹಾಕಿದರು.

ಸಾಮಾಜಿಕವಾಗಿ, ಆರ್ಥಿಕವಾಗಿ ಸಮಾನತೆ ಇನ್ನೂ ಸಾಧ್ಯವಾಗಿಲ್ಲ. ಇದು ಸರಿಹೋಗದಿದ್ದರೆ ಮುಂದೊಂದು ದಿನ ಶೋಷಣೆಗೆ ಒಳಗಾದ ಜನರೇ ಪ್ರಭುತ್ವದ ಸೌಧವನ್ನು ಧ್ವಂಸ ಮಾಡುತ್ತಾರೆ ಎಂದು ಬಸವಣ್ಣನವರ ಮಾತುಗಳನ್ನು ಸ್ಮರಿಸಿದರು. ವರ್ಣ ವ್ಯವಸ್ಥೆ ನಾಶವಾಗಬೇಕು. ಇದಕ್ಕೆ ಶೋಷಿತ ಜಾತಿಗಳಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಶಕ್ತಿಯನ್ನು ತುಂಬುವುದೇ ಪರಿಹಾರವಾಗಿದೆ. ಭಾರತೀಯ ಜಾತಿ ವ್ಯವಸ್ಥೆಗೆ ಚಲನೆ ಇಲ್ಲ ಎಂದು ಲೋಹಿಯಾ ಅವರು ಹೇಳಿದ್ದರು. ಈ ಚಲನೆ ಬರಬೇಕಾದರೆ ತಳಸಮುದಾಯಗಳ ಜನರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಶಕ್ತಿ ಬರಬೇಕು ಎಂದು ವಾದಿಸಿದರು.

ದೇಶದಲ್ಲಿರುವ ಅಸಮಾನತೆ ಹೋಗುವವರೆಗೂ ಮೀಸಲಾತಿ ಇರಲೇಬೇಕು. ಎಲ್ಲರಿಗೂ ಸಮಾನ ಅವಕಾಶಗಳು ಸಿಗಲೇಬೇಕು. ಓದಿದವರೆ ಜಾತಿ ವ್ಯವಸ್ಥೆಯನ್ನು ಹೆಚ್ಚು ಪಾಲಿಸುವುದು. ಅಂಬೇಡ್ಕರ್ ಅವರು ಒಂದು ಮಾತು ಹೇಳಿದ್ದಾರೆ, ನಾನು ಇಲ್ಲಿಯವರೆಗೂ ಸಾಮಾಜಿಕ ನ್ಯಾಯದ ರಥವನ್ನು ಎಳೆದುಕೊಂಡು ಬಂದಿದ್ದೇನೆ. ಸಾಧ್ಯವಾದರೆ ಅದನ್ನು ಮುಂದಕ್ಕೆ ಕೊಂಡೊಯ್ಯಿರಿ, ಹಿಂದಕ್ಕೆ ಮಾತ್ರ ತಳ್ಳಬೇಡಿ ಎಂದಿದ್ದಾರೆ. ಅದರಂತೆ ನಾವು ನಡೆದುಕೊಳ್ಳಬೇಕು ಎಂದರು.



**ರಾಜ್ಯ ಸಹಕಾರಿ ಒಕ್ಕೂಟದ ನಿರ್ದೇಶಕರು ಮುಖ್ಯಮಂತ್ರಿ ಡಿ.ಕೆ.ಶಿವಕವಮಾರ್ ಅವರನ್ನು ಸದಾಶಿವನಗರದ ನಿವಾಸದಲ್ಲಿ ಮಂಗಳವಾರ ಭೇಟಿಮಾಡಿ ಚರ್ಚಿಸಿದರು. ಸಹಕಾರ ಸಚಿವ ಸಚಿವ ಲಕ್ಷ್ಮಣ್ ಸವದಿ, ಶಾಸಕರಾದ ಜಿ.ಟಿ.ದೇವೇಗೌಡ, ಶಿವರಾಮ್ ಹೆಬ್ಬಾರ್, ವಿನಯ ಕುಲಕರ್ಣಿ, ಎಸ್.ಟಿ ಸೋಮಶೇಖರ್, ಶರತ್ ಬಚ್ಚೆಗೌಡ ಮುಂತಾದವರು ಉಪಸ್ಥಿತರಿದ್ದರು.**

# ಸತ್ಸಂಗ ಕಾರ್ಯಕ್ರಮ: ಸಚಿವ ಮುನಿಯಪ್ಪ ರಣದೀಪ್ ಸುರ್ಜೇವಾಲಾ ಭಾಗಿ

**ವಿಜಯಪುರ, ಆ.25:** ಹೋಬಳಿಯ ವೆಂಕಟಗಿರಿಕೋಟೆಯಲ್ಲಿ "ರಾಧಾಸ್ವಾಮಿ ಸತ್ಸಂಗ್ ಬಿಯಾಸ್' ಸಂಸ್ಥೆಯಿಂದ ಆಯೋಜಿಸಿದ್ದ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಕೆ.ಎಚ್.ಮುನಿಯಪ್ಪ ಹಾಗೂ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಭೇಟಿ ನೀಡಿದರು. ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ, ರಾಧಾಸ್ವಾಮಿ ಸತ್ಸಂಗ್ ಬಿಯಾಸ್ ಸಂಸ್ಥೆ ನೂರು ವರ್ಷಗಳಿಂದ ಜಾತಿ, ಧರ್ಮ ಮೀರಿ ಮಾನವೀಯತೆ ಸಂದೇಶ ಸಾರುತ್ತಿದೆ. ಇಂತಹ ಸತ್ಸಂಗಗಳು ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ನೈತಿಕ ಮೌಲ್ಯ ಬೆಳೆಸುತ್ತವೆ. ಆಧ್ಯಾತ್ಮಿಕತೆಯಿಂದ ಮಾತ್ರ ಮನಸ್ಸಿಗೆ ನೆಮ್ಮದಿ ಸಿಗುತ್ತದೆ ಎಂದು ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಮಾತನಾಡಿ, ಬಿಯಾಸ್ ಕೇಂದ್ರದಿಂದ ಹೊರಹೊಮ್ಮುತ್ತಿರುವ ಆಧ್ಯಾತ್ಮಿಕ ಚಳವಳಿ ದೇಶದ ಏಕತೆಗೆ ಮಾದರಿ. ಯಾವುದೇ ಭೇದ–ಭಾವವಿಲ್ಲದೆ ಎಲ್ಲರೂ ಒಂದೇ ಪಂಗಡದಲ್ಲಿ ಕುಳಿತು ಪ್ರಾರ್ಥಿಸುವುದು ದೇಶದ ಜಾತ್ಯತಿತ ಪರಂಪರೆಯ ಪ್ರತಿಕ. ಗುರುಗಳ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಸೇವಾ ಕಾರ್ಯಗಳು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಕೆಪಿಸಿಸಿ ಸದಸ್ಯ ಎ.ಚಿನ್ನಪ್ಪ, ರಾಮಪ್ರಸಾದ್, ಗ್ಯಾಸ್ ಶ್ರೀನಿವಾಸ್, ಜಗನ್ನಾಥ್, ಗ್ರಾಪಂ ಮಾಜಿ ಅಧ್ಯಕ್ಷ ಆರ್.ಅಮರನಾಥ್, ಹುರುಳುಗುರ್ಕಿ ಸಜ್ಜದ್, ಸದಸ್ಯರು, ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಭಾಗವಹಿಸಿದ್ದರು.

# ಕೇಂದ್ರ ಸರ್ಕಾರದ ಎಥೆನಾಲ್ ನೀತಿ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ

**ಬೆಂಗಳೂರು, ಆ.25:** ತೆರಿಗೆದಾರರ ಹಣದಲ್ಲಿ ಖರೀದಿಸಿದ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ಶೇ.40ರಷ್ಟು ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವುದೇಕೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಕೇಂದ್ರ ಸರ್ಕಾರದ ಎಥೆನಾಲ್ ನೀತಿಯ ಬಗ್ಗೆ ಹಲವು ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ.

ಆಹಾರ ಭದ್ರತೆಗಾಗಿ ತೆರಿಗೆದಾರರ ಹಣದಲ್ಲಿ ರೈತರಿಂದ ಭತ್ತ ಖರೀದಿಸಿ, ಅದನ್ನು ಸಂಗ್ರಹಿಸಿ, ಸಾಗಣೆ ವೆಚ್ಚ ಭರಿಸಿದ ಬಳಿಕ ಭಾರತೀಯ ಆಹಾರ ನಿಗಮ (ಎಫ್‌ಸಿಐ) ಮೂಲಕ ಎಥೆನಾಲ್ ಉತ್ಪಾದಕರಿಗೆ ಅದರ ಸ್ವಾಧೀನ ವೆಚ್ಚಕ್ಕಿಂತ ಸುಮಾರು ಶೇ.40ರಷ್ಟು ಕಡಿಮೆ ದರದಲ್ಲಿ ಅಕ್ಕಿಯನ್ನು ಮಾರಾಟ ಮಾಡುತ್ತಿರುವ ಕೇಂದ್ರ ಸರ್ಕಾರದ ನೀತಿ ಸರಿಯಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಭಾರತದ ಎಥೆನಾಲ್ ಗಣಿತವೇ ಸರಿಯಾಗಿ ಹೊಂದಿಕೆಯಾಗುತ್ತಿಲ್ಲ. ಆಹಾರ ಭದ್ರತೆಗಾಗಿ ಸರ್ಕಾರ ರೈತರಿಂದ ಭತ್ತವನ್ನು ಖರೀದಿಸುತ್ತದೆ. ಇದಕ್ಕಾಗಿ ತೆರಿಗೆದಾರರ ಹಣ ಬಳಸಲಾಗುತ್ತದೆ. ಬಳಿಕ ಖರೀದಿಸಿದ ಧಾನ್ಯವನ್ನು ಸಂಗ್ರಹಿಸುವುದು, ಸಾಗಣೆ ಮಾಡುವುದು ಸೇರಿದಂತೆ ಸರ್ಕಾರದ ಮೇಲೆ ಮತ್ತಷ್ಟು ವೆಚ್ಚದ ಹೊರೆ ಬೀಳುತ್ತದೆ. ಬಳಿಕ ಅದೇ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ಸ್ವಾಧೀನ ವೆಚ್ಚಕ್ಕಿಂತ ಶೇ.40ರಷ್ಟು ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವುದು ಯಾವ ರೀತಿಯ ಆರ್ಥಿಕ ನೀತಿ ಎಂದು ಅವರು ಪ್ರಶ್ನಿಸಿದ್ದಾರೆ.

ಈ ಸಂಪೂರ್ಣ ವ್ಯವಸ್ಥೆಯಿಂದ ನಿಜವಾಗಿ ಲಾಭ ಪಡೆಯುತ್ತಿರುವವರು ಯಾರು? ಎಂದು ಪ್ರಶ್ನಿಸಿರುವ ಸಚಿವರು, ತುರ್ತಾಗಿ ಸೃಷ್ಟಿಸಲಾದ ಎಥೆನಾಲ್ ಉತ್ಪಾದನಾ ಸಾಮರ್ಥ್ಯಕ್ಕೆ ಅಗತ್ಯವಾದ ಕಚ್ಚಾ ವಸ್ತು ಒದಗಿಸುವ ಉದ್ದೇಶದಿಂದ ಆಹಾರ ಧಾನ್ಯವನ್ನು ದೊಡ್ಡ ಪ್ರಮಾಣದಲ್ಲಿ ಎಥೆನಾಲ್ ಉತ್ಪಾದನೆಗೆ ಒದಗಿಸಲಾಗುತ್ತಿದೆಯೇ ಎಂದು ಕೇಳಿದ್ದಾರೆ.

ಇನ್ನೊಂದೆಡೆ, ಸರ್ಕಾರವೇ ಉತ್ಪಾದಕರಿಂದ ಹೆಚ್ಚಿನ ಬೆಲೆಗೆ ಎಥೆನಾಲ್ ಖರೀದಿಸಿ, ಅದನ್ನು ಪೆಟ್ರೋಲ್‌ನಲ್ಲಿ ಮಿಶ್ರಣ ಮಾಡುತ್ತಿದೆ. ಹೀಗಿರುವಾಗ ಧಾನ್ಯವನ್ನು ಕಡಿಮೆ ದರದಲ್ಲಿ ನೀಡಿ, ಬಳಿಕ ಅದೇ ಉದ್ಯಮದಿಂದ ಹೆಚ್ಚಿನ ಬೆಲೆಗೆ ಎಥೆನಾಲ್ ಖರೀದಿಸುವುದರಿಂದ ಅಂತಿಮವಾಗಿ ಸಾಮಾನ್ಯ ಗ್ರಾಹಕನಿಗೆ ಆಗುವ ಲಾಭವೇನು? ಎಂದು ಅವರು ಕಿಡಿಕಾರಿದ್ದಾರೆ.

ಎಥೆನಾಲ್ ಮಿಶ್ರಣದ ಪರಿಣಾಮವಾಗಿ ಪೆಟ್ರೋಲ್ ಬೆಲೆ ಸಾಮಾನ್ಯ ಜನರಿಗೆ ಕಡಿಮೆಯಾಗಿದೆಯೇ? ವಾಹನಗಳ ಮೈಲೇಜ್ ಮತ್ತು ನಿರ್ವಹಣಾ ವೆಚ್ಚದ ಮೇಲೆ ಉಂಟಾಗುವ ಪರಿಣಾಮವನ್ನು ಯಾರು ಪರಿಗಣಿಸುತ್ತಿದ್ದಾರೆ? ಎಂದು ಅವರು ಪ್ರಶ್ನಿಸಿದ್ದಾರೆ.

ಯಾರನ್ನು ಯಾರು ಸಬ್ಸಿಡಿ ಮಾಡುತ್ತಿದ್ದಾರೆ ಈ ವ್ಯವಸ್ಥೆಯಲ್ಲಿ ನಿಜವಾದ ಲಾಭ ಯಾರಿಗೆ? ಎಂಬುದಕ್ಕೆ ಕೇಂದ್ರ ಸರ್ಕಾರ ಸ್ಪಷ್ಟವಾಗಿ ಉತ್ತರಿಸಬೇಕಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.ಆಹಾರ ಭದ್ರತೆಗಾಗಿ ಮೀಸಲಿಟ್ಟಿರುವ ಧಾನ್ಯವನ್ನು ಎಥೆನಾಲ್ ಉತ್ಪಾದನೆಗೆ ಬಳಸುವ ನೀತಿಯ ಆರ್ಥಿಕ, ಸಾಮಾಜಿಕ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಪರಿಣಾಮಗಳ ಕುರಿತು ಕೇಂದ್ರ ಸರ್ಕಾರ ಪಾರದರ್ಶಕವಾಗಿ ಲೆಕ್ಕ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಮಂಗಳೂರು ರೈಲುಜಾಲ ಮೈಸೂರು ವಿಭಾಗಕ್ಕೆ ಸೇರ್ಪಡೆ

**ಮಂಗಳೂರು,ಆ.25:** ಮಂಗಳೂರು ವ್ಯಾಪ್ತಿಯ ರೈಲುಜಾಲವನ್ನು ನೈರುತ್ಯ ರೈಲ್ವೆ ವಲಯಕ್ಕೆ ಸೇರ್ಪಡೆಗೊಳಿಸುವ ಕೇಂದ್ರ ಸರ್ಕಾರವು ಐತಿಹಾಸಿಕ ನಿರ್ಧಾರವನ್ನು ಕೈಗೊಂಡಿದ್ದು, ಈ ಬಗ್ಗೆ ರೈಲ್ವೆ ಮಂಡಳಿ ಹೊರಡಿಸಿರುವ ಅಧಿಸೂಚನೆಯನ್ನು ಕಾರ್ಯರೂಪಕ್ಕೆ ತರುವುದಕ್ಕೆ ರಾಜ್ಯ ಸರ್ಕಾರವು ಪೂರ್ಣ ರೀತಿಯ ಆಡಳಿತಾತ್ಮಕ ಸಹಕಾರ ನೀಡಬೇಕೆಂದು ಕೋರಿ ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಸಿಎಂ ಡಿಕೆ ಶಿವಕುಮಾರ್ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ. ಮುಖ್ಯಮಂತ್ರಿಗೆ ಬರೆದಿರುವ ಈ ಸುದೀರ್ಘ ಪತ್ರದಲ್ಲಿ ಕ್ಯಾ. ಚೌಟ ಹಲವಾರು ವಿಚಾರಗಳನ್ನು ಉಲ್ಲೇಖಿಸಿದ್ದು, ಮಂಗಳೂರು ರೈಲು ಜಾಲವನ್ನು ಪಾಲ್ಘಾಟ್ ವಿಭಾಗದಿಂದ ಬೇರ್ಪಡಿಸಿ ಮೈಸೂರು ವಿಭಾಗಕ್ಕೆ ಸೇರಿಸುವುದಕ್ಕೆ ರೈಲ್ವೆ ಸಚಿವಾಲಯವು ಈಗಾಗಲೇ ಅಗತ್ಯ ಕ್ರಮ ಕೈಗೊಂಡು ಈ ಬಗ್ಗೆ ಅಧಿಸೂಚನೆ ಕೂಡ ಹೊರಡಿಸಿದೆ. ಕರಾವಳಿ ರೈಲು ಪ್ರಯಾಣಿಕರ ಬಹು ವರ್ಷಗಳ ಈ ಬೇಡಿಕೆ ಈಡೇರಿರುವುದಿಂದ ಈ ಭಾಗಕ್ಕೆ ಮಾತ್ರವಲ್ಲ ಸಮಗ್ರ ಕರ್ನಾಟಕದ ರೈಲುಜಾಲ ಬಲವರ್ಧನೆಗೂ ಇದೊಂದು ಮಹತ್ವದ ಹೆಜ್ಜೆಯಾಗಿದೆ. ಹೀಗಿರುವಾಗ, ಆದಷ್ಟು ಬೇಗ ಮಂಗಳೂರು ರೈಲುಭಾಗವನ್ನು ಮೈಸೂರು ವಿಭಾಗದ ಜತೆಗೆ ಸೇರಿಸುವ ಪ್ರಕ್ರಿಯೆ ಪೂರ್ಣಗೊಳಿಸುವುದಕ್ಕೆ ಹೆಚ್ಚಿನ ಮುತುವರ್ಜಿ ವಹಿಸಬೇಕು. ಜತೆಗೆ, ಈ ನಿಟ್ಟಿನಲ್ಲಿ ಯಾವುದೇ ರೀತಿಯ ಗೊಂದಲ ಅಥವಾ ಆಡಳಿತಾತ್ಮಕ ವಿಳಂಬ ಆಗದ ರೀತಿ ಸೂಕ್ತಕ್ರಮ ಕೈಗೊಳ್ಳಬೇಕೆಂದು ಕ್ಯಾ. ಚೌಟ ಅವರು ಸಿಎಂಗೆ ಮನವಿ ಮಾಡಿದ್ದಾರೆ. ರೈಲ್ವೆ ಮಂಡಳಿ ಹೊರಡಿಸಿರುವ ಮಹತ್ವದ ಈ ಆದೇಶ ಮರುಪರಿಶೀಲಿಸುವಂತೆ ಕೇರಳ ಮುಖ್ಯಮಂತ್ರಿಗಳಿಂದ ಹಿಡಿದು ಅಲ್ಲಿನ ರಾಜಕೀಯ ಪಕ್ಷಗಳು ಕೇಂದ್ರಕ್ಕೆ ಪತ್ರ ಬರೆದಿರುವುದಾಗಿ ವರದಿಯಾಗಿದೆ. ಈ ಎಲ್ಲ ಬೆಳವಣಿಗೆ ಗಮನಿಸಿ ಸಂಸದ ಕ್ಯಾ.ಬ್ರಿಜೇಶ್ ಚೌಟ ಮಂಗಳೂರು ರೈಲು ಭಾಗ ಮೈಸೂರು ವಿಭಾಗಕ್ಕೆ ಸೇರಿಸುವ ಮೂಲಕ ಕರ್ನಾಟಕದ ಹಿತ ಕಾಪಾಡುವುದಕ್ಕೆ ಡಿ.ಕೆ. ಶಿವಕುಮಾರ್ ಅವರು ಬಹಳ ತುರ್ತಾಗಿ ಈ ವಿಚಾರದಲ್ಲಿ ಮಧ್ಯಪ್ರವೇಶಿಸಬೇಕು. ಆ ಮೂಲಕ, ಯಾವುದೇ ಕಾರಣಕ್ಕೂ ರೈಲ್ವೆ ಸಚಿವಾಲಯದ ಈ ಆದೇಶ ಜಾರಿಗೆ ಅಡ್ಡಿ–ಆತಂಕ ಎದುರಾಗದಂತೆ ನೋಡಿಕೊಳ್ಳಬೇಕೆಂದು ಕ್ಯಾ. ಚೌಟ ಅವರು ಕೋರಿದ್ದಾರೆ.



**ವೈದ್ಯಕೀಯ ಶಿಕ್ಷಣ ಮತ್ತು ಉದ್ಯಮಶೀಲತಾ ಸಚಿವ ಡಾ.ಶರಣಪ್ರಕಾಶ್ ಅವರನ್ನು ವಿಕಾಸಸೌಧದ ಕಚೇರಿಯಲ್ಲಿ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರು ಭೇಟಿಮಾಡಿದ್ದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಸಂಘದ ಅಧ್ಯಕ್ಷರನ್ನು ಇಲಾಖೆ ವ್ಯಾಪ್ತಿಯ ಸರ್ಕಾರಿ ಆಸ್ಪತ್ರೆಗಳ ಸಂದರ್ಶಕ ಸಮಿತಿಗೆ ನಾಮನಿರ್ದೇಶನ ಮಾಡಬೇಕೆಂದು ಮನವಿ ಮಾಡಲಾಯಿತು. ಈ ಸಂದರ್ಭದಲ್ಲಿ ನಗರ ಜಿಲ್ಲಾಧ್ಯಕ್ಷ ಎಸ್ ಸೋಮಶೇಖರ ಗಾಂಧಿ. ಪ್ರದಾನಕಾರ್ಯದರ್ಶಿ ಆರ್ ಜಯಕುಮಾರಗೌಡ, ರಾಜ್ಯಕಾರ್ಯಕಾರಿ ಸಮಿತಿ ಸದಸ್ಯರಾದ ಎಚ್.ಆರ್.ರವೀಶ್, ನಗರ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಕೆ.ವಿ.ಪರಮೇಶ್, ಬಿ.ಕೆ.ಹನುಮಂತರಾಜು, ಎನ್.ಶಿವಾನಂದ, ಟಿ.ಮಂಜುನಾಥ್ ಹಾಜರಿದ್ದರು.**

# ನಾ ಕಂಡ ಬಸವಲಿಂಗ ಪಟ್ಟದ್ದೇವರು

## ಪೂಜ್ಯಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು

ಮನುಕುಲದ ರೂವಾರಿ, ಅಣ್ಣ ಬಸವಣ್ಣ ಮತ್ತು ಸ್ತ್ರೀಕುಲದ ಚೈತನ್ಯರೂಪಿ ಅಕ್ಕಮಹಾದೇವಿಯ, ಮೊದಲಾದ ಶಿವಶರಣರ ವಿಚಾರಗಳನ್ನು ಅಕ್ಷರ ಸಹ ಪರಿ ಪಾಲಿಸಿಕೊಂಡು ಕರ್ನಾಟಕದ ರಕ್ಷಣಾ ಕವಚ ವಾಗಿ ಕನ್ನಡವೇ ಸತ್ಯ ಕನ್ನಡವೇ ನಿತ್ಯ ಎಂಬ ಮಂತ್ರವನ್ನು ಸಾಕಾರ ಮಾಡಿದ ಮಹಾಪುರುಷರು. ಭಾಲ್ಕಿ ಹಿರೆ ಮಠದ ಪೀಠಾಧಿಪತಿ ಯಾಗಿ ಗುರುಕುಲ ಶಿಕ್ಷಣ ಸಂಸ್ಥೆ ಸ್ಥಾಪಿಸಿ, ದೀನ ದಲಿತರ ಏಳಿಗೆಗಾಗಿ ಹಗಲಿರುಳು ದುಡಿದವರು, ಕಾಯಕದಲ್ಲಿ ಕೈಲಾಸ ಕಂಡವರು. ಹಿರೇಮಠದ ಪೂಜ್ಯ ಶ್ರೀ ಲಿಂಗೈಕ್ಯ ಡಾಕ್ಟರ್ ಚನ್ನಬಸವೇಶ್ವರ ರವರ ಪರಮ ಶಿಷ್ಯರು ,ಸರಳ ಸಜ್ಜನ ಬಸವ ಭಕ್ತರು ನಿರ್ಮಲ ಮನಸ್ಸಿನ ಬಿಚ್ಚು ಹೃದಯ ಸ್ವಭಾವದವರು, ಅನ್ನದಾನದ ದಾಸೋಹಿಗಳು ಅನಾಥ ಮಕ್ಕಳ ಸಂರಕ್ಷಕರು ನೂತನ ಅನುಭವ ಮಂಟಪದ ಅಧ್ಯಕ್ಷರು ಆದ ಪೂಜ್ಯ ಬಸವಲಿಂಗಪಟ್ಟದ್ದೇವರು ಪಟ್ಟಾಧಿಕಾರ ವಹಿಸಿಕೊಂಡ ನಂತರ ಅನೇಕ ಜನಪರ ಸೇವಾ ಕಾರ್ಯಕ್ರಮಗಳು ನಿರಂತರವಾಗಿ ನಡೆಸಿಕೊಂಡು ಬರುತ್ತಿದ್ದಾರೆ.

ಶ್ರೀಗಳು ದಿನಾಂಕ 25–8–1950 ರಂದು ತೆಲಂಗಣಾ ರಾಜ್ಯದ ನಾರಾಯಣ ಖೇಡ ತಾಲೂಕಿನ ಮೆದಕ್ ಜಿಲ್ಲೆಯ ನಾಗೂರು ಗ್ರಾಮದಲ್ಲಿ ತಂದೆ ರಾಚಪ್ಪ ತಾಯಿ ಭಾಗೀರಥಿಯವರ ಪ್ರೀತಿಯ ಮಗನಾಗಿ ಜನಿಸಿದರು. ಇವರಿಗೆ ಮೂವರು ಪುತ್ರರು. ಹಿರಿಯರಾದ ಇವರು ಮನೆಯ ಎಲ್ಲ ಬಾರವನ್ನು ಹೊಂದುಕೊಂಡು ತಂದೆ ತಾಯಿಯವರ ಆಜ್ಞೆಯನ್ನು ಪರಿಪಾಲಿಸಿಕೊಂಡು ಬರುತ್ತಿದ್ದರು. ಕಡು ಬಡವರಾದ ಇವರ ತಂದೆ ತಾಯಿಗಳು ಮಗನ ಮುಂದಿನ ವಿದ್ಯಾಭ್ಯಾಸಕ್ಕೆಂದು ಭಾಲ್ಕಿ ಹಿರೇಮಠಕ್ಕೆ ಬಂದರು. ಪೂಜ್ಯ ಚನ್ನಬಸವ ಪಟ್ಟದ್ದೇವರು ಆಜ್ಞೆಯಂತೆ ಹಾನಗಲ್ಲ ಕುಮಾರ ಸ್ವಾಮಿಜಿಯವರ ಪ್ರಸಾದ ನಿಲಯದಲ್ಲಿ ಪ್ರವೇಶ ಪಡೆದರು. ಹಿರೆಮಠದ ಮ್ಯಾನೇಜರ ಹನುಮಂತ ಸಾಹೇಬರು ನನ್ನ ಪರಿಚಯ ವೈಜಿನಾಥ ಬಿರಾದಾರ ಮುಚಳಂಬದ ನಿವಾಸಿ ಎಂದು ತಿಳಿಸಿದರು.

ಕಡುಬಡತನದಿಂದ ನಮಗೆ ತಿಂಗಳಿಗೆ 10 ರೂ. ಕೊಡಲು ಆಗದ ಕಾರಣ ದಿನಾಲು 10 ಕೊಡ ನೀರು,ತರುವುದು, ಪ್ರತಿ ಸೋಮವಾರ ಮಠ ಸಾರಿಸುವುದು ಉಡುಗುವ ಕೆಲಸ ಮಾಡಿಕೊಂಡು ಹೋಗಬೇಕೆಂದು ತಿಳಿಸಿದರು. ಇಬ್ಬರು ಕೆಲಸ ಮಾಡಿಕೊಂಡು ನಮ್ಮ ಅಭ್ಯಾಸ ಮುಂದುವರಿಸಿದೆವು. ಮುಂದೆ ಬಿ.ಎ. ಪದವಿಯಲ್ಲಿ ಓದುವಾಗಲೇ ಗುರುಗಳ ಹಸ್ತದಿಂದ ಅನುಭವ ಮಂಟಪದ ಆವರಣದಲ್ಲಿ ನನ್ನ ಮದುವೆ ಕಾರ್ಯಕ್ರಮ ನೇರವೇರಿಸಿದರು. ನಂತರ ಗುರುಗಳ ಆಶೀರ್ವಾದದಿಂದ ಭಾರತದ ಉಪರಾಷ್ಟ್ರಪತಿಯಾಗಿದ್ದ ಬಿ.ಡಿ.ಜತ್ತಿಯವರ ಆಪ್ತ ಸಹಾಯಕನಾಗಿ ಸೇವೆ ಸಲ್ಲಿಸಿ, ರಾಜ್ಯ ಸಭಾ ಸಚಿವಾಲಯದಿಂದ ನಿವೃತ್ತಿ ಯಾಗಿ ಈಗ ಲೋಕಸಭೆಯ ಸದಸ್ಯರಾದ ರಮೇಶ್ ಜಿಗಜಿಣಗಿ ಹಾಗು ಪಿ.ಸಿ.ಗದ್ದಿಗೌಡರ ಜೊತೆಯಲ್ಲಿ ಆಪ್ತ ಸಹಾಯಕ ನಾಗಿ ಸೇವೆ ಸಲ್ಲಿಸುತಿರುವುದು ಪೂಜ್ಯ ಗುರುಗಳ ಸ್ಪರ್ಶದ ಫಲವೆನ್ನಬಹುದು.



ಪೂಜ್ಯಶ್ರೀ ಚನ್ನಬಸವ ಪಟ್ಟದ್ದೇವರು ಇವರ ಅಪ್ಪಟ ಬಸವ ಭಕ್ತಿ, ಸರಳತನ, ಪರಿಶ್ರಮ ಕಂಡು 1977 ರಲ್ಲಿ ಮಠದ ಉತ್ತರಾಧಿಕಾರಿಯಾಗಿ ನೇಮಿಸುತ್ತಾರೆ.ನಂತರ ಭಾಲ್ಕಿ ಹಿರೇಮಠದ ಪೀಠಾಧ್ಯಕ್ಷರಾಗಿ ಸಾಮಾಜಿಕ ಧಾರ್ಮಿಕ ಶೈಕ್ಷಣಿಕ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದ್ದಾರೆ. ಶರಣರ ಮೌಲಿಕ ತತ್ವ ಸಿದ್ಧಾಂತಗಳನ್ನು ಕರ್ನಾಟಕ ಮಹಾರಾಷ್ಟ್ರ ಆಂಧ್ರ ತೆಲಂಗಣ ಹಾಗೂ ದೇಶ ವಿದೇಶದಲ್ಲಿ ಬಸವ ಪರಿಷತ್ತು ಸ್ಥಾಪಿಸಿ ಅಪಾರವಾದ ಪ್ರೀತಿಗೆ ಕಾರಣರಾಗಿದ್ದಾರೆ. ಹಿರೇಮಠ ಸಂಸ್ಥಾನದ ಅಡಿಯಲ್ಲಿ ಸುಮಾರು ಐವತ್ತಕ್ಕೂ ಹೆಚ್ಚು ಸಂಸ್ಥೆಗಳು ಸ್ಥಾಪಿಸಿ 1000 ಮೇಲ್ಪಟ್ಟು ಮಕ್ಕಳು ಓದುತ್ತಿದ್ದಾರೆ ನಾಡಿನ ಹಾಗೂ ದೀನ ದಲಿತರ ಓಣಿಯ ಮಕ್ಕಳಿಗೆ ಉಚಿತ ಶಿಕ್ಷಣ ನೀಡಿ ಅವರ ಭಾಗ್ಯದ ಬೆಳಕಾಗಿದ್ದಾರೆ ಪೂಜ್ಯರು 60ಕ್ಕೂ ಹೆಚ್ಚು ಗ್ರಂಥಗಳನ್ನು ರಚಿಸಿ ಭಾವಿ ಜನಾಂಗಕ್ಕೆ ಕಳಸಪ್ರಾಯರಾಗಿದ್ದಾರೆ . ಶಿವ ಭಾವದಿಂದ ದುಡಿದು ಶ್ರಮಪಟ್ಟು ಜನೋಪಕಾರಿ ಸೇವೆ ಸಲ್ಲಿಸಿದ ಶ್ರೀ ಗಳಿಗೆ ಅನೇಕ ಪ್ರಶಸ್ತಿಗಳು ಗೌರವ ಪುರಸ್ಕಾರಗಳು ನಾಡಿನ ಗಣ್ಯರು ಸಂಘ ಸಂಸ್ಥೆಗಳು ಮಠಾಧೀಶರು ಹಾಗೂ ಕರ್ನಾಟಕ ಸರ್ಕಾರವು ಗೌರವಿಸಿದೆ. ಕನ್ನಡ ವಿಶ್ವವಿದ್ಯಾಲಯದ ಹಂಪಿಯಿಂದ ನಾಡೋಜ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಗುಲ್ಬರ್ಗ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರ್ ಬಸವ ಪುರಸ್ಕಾರ ಹೀಗೆ 30ಕ್ಕೂ ಹೆಚ್ಚು ಪ್ರಶಸ್ತಿಗಳು ದೊರಕಿವೆ. ಪುರಸ್ಕೃತರಾದ ಬಸವ ಶ್ರೀಗಳಿಗೆ ದೇಶದ ವಿವಿಧ ಸಭೆ ಸಮಾರಂಭಗಳಲ್ಲಿ ಸನ್ಮಾನಿಸಿರುವುದು ಶ್ಲಾಘನೀಯ ವಿಷಯವಾಗಿದೆ. ಮಹಿಳಾ ಮತ್ತು ಮಕ್ಕಳ ಇಲಾಖೆ ಅಧಿಕಾರಿಗಳಿಂದ ದತ್ತು ಸಂಸ್ಥೆಯ ಅನುಮತಿ ಪಡೆದು ಸರ್ಕಾರದ ಆದೇಶದಂತೆ ಸುಮಾರು 80 ಮಕ್ಕಳನ್ನು ಅನೇಕ ಮನೆಗಳಲ್ಲಿ ಅನ್ನದೀಪವಾಗಿ ಆಚರಿಸುತ್ತಿದ್ದಾರೆ. ಅನ್ಯಾಯ ಅತ್ಯಾಚಾರದಿಂದ ಅಮಾನವೀಯ ಘಟನೆಗಳಿಂದ ಅನೈತಿಕ ಸಂಬಂಧದಿಂದ ಕಸದ ಗುಂಡೆ, ನದಿ ತೀರಗಳಲ್ಲಿ ಬಿಸಾಡಿದ ಮಕ್ಕಳನ್ನು ರಕ್ಷಿಸಿದ್ದಾರೆ ಇಂದು 10 ಹೆಣ್ಣು ಮಕಳು ಏಳು ಗಂಡು ಮಕ್ಕಳಿಗೆ ಉಚಿತ ಉನ್ನತ ಶಿಕ್ಷಣ ನೀಡುತ್ತಿದ್ದಾರೆ. ಇವರ ಶೈಕ್ಷಣಿಕ ಸಾಮಾಜಿಕ ಧಾರ್ಮಿಕ ಸಾಹಿತ್ಯದಲ್ಲಿ ಒಂದು ಹೊಸ ಆಯಾಮವನ್ನು ನೀಡಿದ್ದಾರೆ. ನೂತನ ಅನುಭವ ಮಂಟಪದ ಪ್ರಪ್ರಥಮ ಅಧ್ಯಕ್ಷರಾಗಿ, ಅನುಭವ ಮಂಟಪ ಉತ್ಸವ, ವಚನ ವಿಶ್ವವಿದ್ಯಾಲಯದ ಸ್ಥಾಪನೆ, ಸಂಶೋಧನಾ ಕೇಂದ್ರ, ಜಂಗಮ ತರಬೇತಿ ಗ್ರಂಥಾಲಯ ಪ್ರಶಸ್ತಿ ವಿಜೇತರ ಈ ಮುಂತಾದ ಕಾರ್ಯಕ್ರಮಗಳನ್ನು ವಿಶ್ವದ ಮಾದರಿಯಲ್ಲಿ ತರುವ ಚಿಂತನೆಯಲ್ಲಿದ್ದಾರೆ. ಕಲ್ಯಾಣ ಕರ್ನಾಟಕದ ಕಿರೀಟಪ್ರಾಯರಾದ ತಮಗೆ ಬಸವರತ್ನ ನೀಡಿ ಗೌರವಿಸಿದ್ದು ಕಲ್ಯಾಣ ನಾಡಿನ ಜನತೆಗೆ ಪರಮ ಸಂತೋಷವನ್ನುಂಟು ಮಾಡಿದೆ. ಡಾಕ್ಟರ್ ಲಿಂಗೈಕ್ಯ ಚನ್ನಬಸವೇಶ್ವರ ಪುಣ್ಯ ಪುರುಷರ ಸಮರ್ಥ ಉತ್ತರಾಧಿಕಾರಿಯಾಗಿ ವಿಶ್ವಕ್ಕೆ ಮಾದರಿಯಾಗುವಂತ ಅಣ್ಣ ಬಸವಣ್ಣನವರ ವಚನಗಳನ್ನು ಹಾಸುಹೋಕ್ಕಾಗಿ ನಡೆಸಿಕೊಂಡು ಬರುತ್ತಿದ್ದಾರೆ. ಅನುಭವ ಮಂಟಪದ ಅಧ್ಯಕ್ಷರಾಗಿ ಆಯ್ಕೆಯಾದ ತಾವುಗಳು ಮತ್ತೆ ದೇಶವಿದೇಶಗಳಿಂದ ಶರಣರು ಆಗಮಿಸುವ ಹೊಸ ಯೋಜನೆಗೆ ಕಾರಣರಾಗಿದ್ದಾರೆ. ಗುರುಗಳ ಆಚಾರ ವಿಚಾರ ನಡೆ–ನುಡಿ ಸಿದ್ಧಾಂತ ಎಲ್ಲವೂ ಸದಾ ತಮ್ಮನ್ನು ಕಾಪಾಡಲಿ ತಮಗೆ ದೇವರು ಆಯುಷ್ಯ ಆರೋಗ್ಯ ಮತ್ತು ಶಕ್ತಿ ನೀಡಲಿ ದೇವರಲ್ಲಿ ಪ್ರಾರ್ಥನೆ ಸಲ್ಲಿಸುತ್ತೇವೆ. ತಮ್ಮ ಹುಟ್ಟು ಹಬ್ಬವು ವಿಜೃಂಭಣೆಯಿಂದ ಸಾಗಲಿ ಮತ್ತೊಮ್ಮೆ ತಮ್ಮ ಹುಟ್ಟು ಹಬ್ಬದ ಹಾರ್ದಿಕ ಶುಭಾಶಯಗಳು.

– **ವಿ.ವಿ.ಬಿರಾದಾರ** । ಗೌರವ ಅಧ್ಯಕ್ಷರು, ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್, ನವದೆಹಲಿ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಆಗಸ್ಟ್ 26, 2026, ಬುಧವಾರ

## ಒಳಪುಟಗಳಲ್ಲಿ

ಸೆ.1ರಿಂದ 10ರವರೆಗೆ ರಾಯಚೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ಪು.4

ನೈಸ್ ಹಗರಣ: ಜೆಡಿಎಸ್ ನಿಯೋಗದಿಂದ ರಾಜ್ಯಪಾಲರಿಗೆ ದೂರು ಪು.4

ಆರ್ಥಿಕವಾಗಿ ಇರಾನ್ ಪ್ರತ್ಯೇಕಿಸಲು ಅಮೆರಿಕದ ವ್ಯಾಪಕ ಅಭಿಯಾನ: ಆಪರೇಷನ್ ಎಕನಾಮಿಕ್ ಔಟ್‌ಕಾಸ್ಟ್ ಪು.8

# ಕಾವೇರಿ: ಕರ್ನಾಟಕಕ್ಕೆ ಮತ್ತೆ ಶಾಕ್, 9,000 ಕ್ಯೂಸೆಕ್ ನೀರು ಹರಿಸಲು ಆದೇಶ

**ನವದೆಹಲಿ, ಆ.25: ಕಾವೇರಿ ಜಲಾನಯನ ಪ್ರದೇಶದಲ್ಲಿ ತೀವ್ರ ಜಲಕ್ಷಾಮವಿದ್ದು, ಈಗಾಗಲೇ ಕರ್ನಾಟಕ ಪಾಲಿಸಿರುವ ನೀರು ಬಿಡುಗಡೆ ಪ್ರಮಾಣವನ್ನು ಪರಿಗಣಿಸಿ ಮುಂದಿನ ಆದೇಶ ನೀಡಬೇಕು ಎಂಬ ಕರ್ನಾಟಕದ ವಾದವನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಒಪ್ಪಿಲ್ಲ. ಕಾವೇರಿ ನೀರು ನಿಯಂತ್ರಣ ಸಮಿತಿ ಆಗಸ್ಟ್ 24ರಂದು ನೀಡಿದ್ದ ಶಿಫಾರಸನ್ನೇ CWMA ಅಂಗೀಕರಿಸಿದ್ದು, ಬಿಳಿಗುಂಡ್ಲುವಿನಲ್ಲಿ ಪ್ರತಿದಿನ 9,000 ಕ್ಯೂಸೆಕ್ ನೀರು ಹರಿಸುವಂತೆ ಕರ್ನಾಟಕಕ್ಕೆ ಸೂಚಿಸಿದೆ.**

ಆಗಸ್ಟ್ 25ರ ಬೆಳಗ್ಗೆ 8 ಗಂಟೆಯಿಂದ ಮುಂದಿನ 15 ದಿನಗಳವರೆಗೆ ಈ ಆದೇಶ ಜಾರಿಯಲ್ಲಿರಲಿದೆ. ಈ ಅವಧಿಯಲ್ಲಿ ಬಿಳಿಗುಂಡ್ಲುವಿನಲ್ಲಿ ಒಟ್ಟು 11.66 ಟಿಎಂಸಿ ನೀರು ಹರಿಯುವಂತೆ ಕರ್ನಾಟಕ ಖಚಿತಪಡಿಸಬೇಕು ಎಂದು ಪ್ರಾಧಿಕಾರ ಆದೇಶಿಸಿದೆ

ಕರ್ನಾಟಕವು ಕಾವೇರಿ ಜಲಾನಯನ ಪ್ರದೇಶದ ತೀವ್ರ ಜಲಕ್ಷಾಮ, ಜಲಾಶಯಗಳಲ್ಲಿನ ನೀರಿನ ಲಭ್ಯತೆ ಹಾಗೂ ಮುಂದಿನ ದಿನಗಳಲ್ಲಿ ಈಶಾನ್ಯ ಮುಂಗಾರು ಪರಿಸ್ಥಿತಿ ಹೇಗೆ ಬದಲಾಗಲಿದೆ ಎಂಬುದನ್ನು ಪರಿಗಣಿಸಬೇಕು ಎಂದು ವಾದಿಸಿತ್ತು. ಮುಂಬರುವ 15 ದಿನಗಳಿಗೆ ಬಿಳಿಗುಂಡ್ಲುವಿನ ನಿಗದಿತ ಹರಿವನ್ನು 9,000 ಕ್ಯೂಸೆಕ್‌ನಿಂದ 6,000 ಕ್ಯೂಸೆಕ್‌ಗೆ ಇಳಿಸಬೇಕು ಎಂದು ಮನವಿ ಮಾಡಿತ್ತು.

### ಸಿಡಬ್ಲ್ಯುಆರ್‌ಸಿ ಆದೇಶ ಎತ್ತಿಹಿಡಿದ ಸಿಡಬ್ಲ್ಯುಎಂಎ



ಮತ್ತೊಂದೆಡೆ, ತಮಿಳುನಾಡು ಆಗಸ್ಟ್ 23ರವರೆಗೆ ಬಾಕಿ ಉಳಿದಿರುವ 17.49 ಟಿಎಂಸಿ ನೀರನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿತು. KRS ಹಾಗೂ ಕಬಿನಿ ಜಲಾಶಯಗಳಿಂದ ನೀರು ಬಿಡುಗಡೆ ಮಾಡಿ ಬಿಳಿಗುಂಡ್ಲುವಿನಲ್ಲಿ ನಿಗದಿತ ಹರಿವು ಕಾಯ್ದುಕೊಳ್ಳಬೇಕು ಎಂದು ಆಗ್ರಹಿಸಿತು. ಆಗಸ್ಟ್ 24ರಿಂದ ಸೆಪ್ಟೆಂಬರ್ 7ರವರೆಗೆ ಒಟ್ಟು 28.386 ಟಿಎಂಸಿ ನೀರು ಬಿಳಿಗುಂಡ್ಲುವಿನಲ್ಲಿ ಹರಿಯುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ಬೇಡಿಕೆ ಇಟ್ಟಿತ್ತು.

ಆದರೆ, CWMA ಅಂತಿಮವಾಗಿ CWRC ನಿರ್ಧಾರವನ್ನೇ ಅಂಗೀಕರಿಸಿದೆ. ಹವಾಮಾನ ಇಲಾಖೆ ಉತ್ತಮ ಮಳೆಯಾಗುವ ನಿರೀಕ್ಷೆ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ 9,000 ಕ್ಯೂಸೆಕ್ ನೀರು ಹರಿಸುವುದರಲ್ಲಿ ತೊಂದರೆ ಇಲ್ಲ ಎಂಬ ಅಭಿಪ್ರಾಯವೂ ಪ್ರಾಧಿಕಾರ ವ್ಯಕ್ತಪಡಿಸಿದೆ.

ದೆಹಲಿಯಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಕಚೇರಿಯಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ರಾಜ್ಯದಿಂದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಹಾಗೂ ಕಾವೇರಿ ನೀರಾವರಿ ನಿಗಮ ಎಂಡಿ ಮಹೇಶ್ ಭಾಗಿಯಾಗಿದ್ದರು. ತಮಿಳುನಾಡಿನಿಂದ ನೀರಾವರಿ ಕಾರ್ಯದರ್ಶಿ ಪ್ರಶಾಂತ್, ಕಾವೇರಿ ತಾಂತ್ರಿಕ ಸಮಿತಿ ಅಧ್ಯಕ್ಷ ಸುಬ್ರಹ್ಮಣ್ಯಂ ಅವರು ಭಾಗಿಯಾಗಿದ್ದರು.

### ನಮ್ಮ ವಾದ ಒಪ್ಪದ ಪ್ರಾಧಿಕಾರ



ಸಭೆಯ ಬಳಿಕ ಮಾತನಾಡಿದ ಗೌರವ್ ಗುಪ್ತಾ, ಸಮಿತಿ ಶಿಫಾರಸನ್ನು ಪಾಲಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚಿಸಿದೆ. ತಮಿಳುನಾಡು 28 ಟಿಎಂಸಿ ನೀರಿನ ಬೇಡಿಕೆ ಇಟ್ಟಿತ್ತು. ಆದರೆ, ಪ್ರಾಧಿಕಾರ ಅದನ್ನು ಒಪ್ಪಿಲ್ಲ. ಮುಂದೆ ಉತ್ತಮ ಮಳೆಯಾಗಬಹುದು ಎಂದು ಹವಾಮಾನ ಇಲಾಖೆ ಆಶಯ ವ್ಯಕ್ತಪಡಿಸಿದೆ. ಈ ಹಿನ್ನೆಲೆಯಲ್ಲಿ ನೀರು ಹರಿಸಲು ಸೂಚಿಸಿದೆ. ಇಂದಿನ ಇವತ್ತಿನ ಬೆಳವಣಿಗೆಗಳ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಮನಕ್ಕೆ ತರಲಾಗುವುದು. ಕಾನೂನು ಹೋರಾಟದ ಬಗ್ಗೆ ಕಾನೂನು ತಂಡ ನಿರ್ಧಾರ ಮಾಡಲಿದೆ ಎಂದು ಹೇಳಿದರು.

# ಸಣ್ಣಮಟ್ಟದಲ್ಲಿ ಸಂಪುಟ ವಿಸ್ತರಣೆ ಸಾಧ್ಯತೆ: ನಾಳೆ ದೆಹಲಿಗೆ ಸಿಎಂ

**ಬೆಂಗಳೂರು, ಆ.25:** ಹಿರಿಯ ಶಾಸಕರು ಬಂಡಾಯದ ಬಾವುಟ ಹಿಡಿದಿರುವ ಹಿನ್ನೆಲೆಯಲ್ಲಿ ಕೆಲವರನ್ನು ಸಮಾಧಾನಪಡಿಸಲು ಸಂಪುಟದಲ್ಲಿರುವ ಕೆಲವು ಹಿರಿಯ ಸಚಿವರನ್ನು ಕೈಬಿಟ್ಟು ಅಸಮಾಧಾನಿತರಿಗೆ ಅವಕಾಶ ಕಲ್ಪಿಸುವ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಂಭೀರ ಚಿಂತನೆ ನಡೆಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುರುವಾರ ದೆಹಲಿಗೆ ತೆರಳುವ ಸಾಧ್ಯತೆಯಿದ್ದು, ಹೈಕಮಾಂಡ್ ನಾಯಕರೊಂದಿಗೆ ಸಚಿವ ಸಂಪುಟ ಪುನಾರಚನೆ, ವಿಧಾನ ಪರಿಷತ್‌ನ ನಾಲ್ಕು ಸ್ಥಾನಗಳಿಗೆ ಸದಸ್ಯರ ನಾಮನಿರ್ದೇಶನ, ನಿಗಮ–ಮಂಡಳಿಗಳ ಅಧ್ಯಕ್ಷರು ಹಾಗೂ ನಿರ್ದೇಶಕರ ಆಯ್ಕೆ, ಜಿಲ್ಲಾಧ್ಯಕ್ಷರ ನೇಮಕ ಮತ್ತು 100 ಕಾಂಗ್ರೆಸ್ ಕಚೇರಿಗಳ ಶಂಕುಸ್ಥಾಪನೆ ಸೇರಿದಂತೆ ಹಲವು ಮಹತ್ವದ ವಿಚಾರಗಳ ಕುರಿತು ಚರ್ಚೆ ನಡೆಸಲಿದ್ದಾರೆ ಎಂದು ತಿಳಿದುಬಂದಿದೆ.



ಸದ್ಯ ಸಂಪುಟದಲ್ಲಿ 33 ಸಚಿವರಿದ್ದು, ಒಂದು ಸ್ಥಾನ ಖಾಲಿ ಉಳಿದಿದೆ. ಈ ಸ್ಥಾನ ಭರ್ತಿ ಮಾಡುವುದು ಕಗ್ಗಂಟಾಗಿದೆ. ಕಾಂಗ್ರೆಸ್‌ನ ಶಾಸಕರಾದ ಲಕ್ಷ್ಮೀ ಹೆಬ್ಬಾಳ್ಕರ್, ಖನೀಜ್ ಫಾತಿಮಾ, ನಯನಾ ಮೋಟಮ್ಮ, ಅನ್ನಪೂರ್ಣ ತುಕಾರಾಂ ಹಾಗೂ ವಿಧಾನ ಪರಿಷತ್ ಸದಸ್ಯರಾದ ಗಾಯತ್ರಿ ಶಾಂತೇಗೌಡ, ಆರತಿಕೃಷ್ಣ, ಬಿಲ್ಕೀಸ್ ಬಾನು ಸೇರಿದಂತೆ ಹಲವರು ಮಹಿಳಾ ಕೋಟಾದಡಿ ಸಚಿವ ಸ್ಥಾನಕ್ಕಾಗಿ ಪೈಪೋಟಿ ನಡೆಸುತ್ತಿದ್ದಾರೆ.

ಈ ನಡುವೆ ವಿಜಯನಗರದ ಶಾಸಕ ಎಂ.ಕೃಷ್ಣಪ್ಪ, ಗೋವಿಂದರಾಜನಗರ ಶಾಸಕ ಪ್ರಿಯಕೃಷ್ಣ, ಶಿರಾ ಶಾಸಕ ಟಿ.ಬಿ.ಜಯಚಂದ್ರ ಸೇರಿದಂತೆ ಹಲವರು ಸಚಿವ ಸ್ಥಾನಕ್ಕಾಗಿ ಬಿಗಿಪಟ್ಟು ಹಿಡಿದಿದ್ದಾರೆ. ಈ ಬಾರಿ ಸಂಪುಟದಲ್ಲಿ ಸ್ಥಾನ ಸಿಗದಿದ್ದರೆ, ಮುಂದಿನ ಚುನಾವಣೆಯಲ್ಲಿ ತಮ್ಮದೇ ದಾರಿ ನೋಡಿಕೊಳ್ಳುವುದಾಗಿ ಕೆಲವರು ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ. ಅಸಮಾಧಾನಿತರನ್ನು ಸಮಾಧಾನಪಡಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಾನಾ ರೀತಿಯ ಕಸರತ್ತು ನಡೆಸಿದ್ದಾರೆ. ಟಿ.ಬಿ.ಜಯಚಂದ್ರ ಅವರು ದೆಹಲಿ ವಿಶೇಷ ಪ್ರತಿನಿಧಿ ಸ್ಥಾನದಿಂದ ತೃಪ್ತರಾಗಿಲ್ಲ ಎನ್ನಲಾಗಿದ್ದು, ಮುಂದಿನ ಚುನಾವಣೆಯಲ್ಲಿ ತಾವು ಸ್ಪರ್ಧಿಸುವ ಸಾಧ್ಯತೆ ಕಡಿಮೆ ಇರುವ ಹಿನ್ನೆಲೆಯಲ್ಲಿ ಪ್ರಸಕ್ತ ಅವಧಿಯಲ್ಲೇ ಸಚಿವ ಸ್ಥಾನ ನೀಡಬೇಕೆಂದು ಬಿಗಿಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ. ಇದಕ್ಕೆ ಪರ್ಯಾಯವಾಗಿ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಅವರ ಪುತ್ರನಿಗೆ ಬಿ–ಫಾರಂ ನೀಡುವುದರ ಜೊತೆಗೆ ಪ್ರಸಕ್ತ ಅವಧಿಯಲ್ಲಿ ನಿಗಮ–ಮಂಡಳಿ ಸೇರಿ ಸೂಕ್ತ ಹುದ್ದೆ ನೀಡುವ ಪ್ರಸ್ತಾಪ ಮಾಡಲಾಗಿದೆ ಎನ್ನಲಾಗಿದೆ. ಮತ್ತೊಂದೆಡೆ ಎಂ.ಕೃಷ್ಣಪ್ಪ ಅವರು ಸಚಿವ ಸ್ಥಾನ ಹೊರತುಪಡಿಸಿ ಬೇರೆ ಆಯ್ಕೆ ಬೇಡ ಎಂಬ ನಿಲುವು ತಳೆದಿದ್ದಾರೆ. ಪುತ್ರ ಹಾಗೂ ಶಾಸಕ ಪ್ರಿಯಕೃಷ್ಣ ಅವರಿಗೆ ನಿಗಮ–ಮಂಡಳಿಯಲ್ಲಿ ಅವಕಾಶ ನೀಡುವ ಪ್ರಸ್ತಾಪವನ್ನೂ ತಳ್ಳಿಹಾಕಿದ್ದಾರೆ. ಬೆಂಗಳೂರಿನಲ್ಲಿ ಕಾಂಗ್ರೆಸ್‌ಗೆ ಎಂ.ಕೃಷ್ಣಪ್ಪ ಮತ್ತು ಪ್ರಿಯಕೃಷ್ಣ ಅವರ ಬೆಂಬಲ ಆನೆಬಲದಂತಿದೆ. ಅವರು ವ್ಯತಿರಿಕ್ತ ನಿರ್ಧಾರ ತೆಗೆದುಕೊಂಡರೆ ಕಾಂಗ್ರೆಸ್‌ಗೆ ನಷ್ಟವಾಗಲಿದೆ ಎಂಬ ಆತಂಕ ರಾಜ್ಯ ನಾಯಕರಲ್ಲಿದೆ. ಇದರೊಂದಿಗೆ ಇನ್ನೂ ಕೆಲವು ಹಿರಿಯ ಶಾಸಕರು ಸಚಿವ ಸ್ಥಾನಕ್ಕಾಗಿ ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ.

### ಸಂಪುಟ ಪುನಾರಚನೆ ಚರ್ಚೆ ಮತ್ತೆ ಮುನ್ನೆಲೆಗೆ

ಮೂಲಗಳ ಪ್ರಕಾರ, ಈಗ ರಚನೆಯಾಗಿರುವ 33 ಮಂದಿಯ ಸಂಪುಟದಲ್ಲಿ ಯಾವುದೇ ಬದಲಾವಣೆ ಮಾಡದಂತೆ ಹೈಕಮಾಂಡ್ ಈಗಾಗಲೇ ಖಡಕ್ ಸಂದೇಶ ರವಾನಿಸಿದೆ. ಆದರೆ ಸದ್ಯದ ರಾಜಕೀಯ ಪರಿಸ್ಥಿತಿಯ ಒತ್ತಡಕ್ಕೆ ಮಣಿದು ಕೆಲವು ಬದಲಾವಣೆಗಳನ್ನು ಮಾಡುವುದು ಸೂಕ್ತ ಎಂದು ಹೈಕಮಾಂಡ್ ಮನವೊಲಿಸಲು ರಾಜ್ಯ ನಾಯಕರು ಪ್ರಯತ್ನಿಸುತ್ತಿದ್ದಾರೆ ಎನ್ನಲಾಗಿದೆ. ಸಂಪುಟದಲ್ಲಿರುವ ಕೆಲವು ತಟಸ್ಥ ಹಾಗೂ ಹಿರಿಯ ಸಚಿವರನ್ನು ಕೈಬಿಟ್ಟು ಜನಪ್ರಿಯ ನಾಯಕರಿಗೆ ಮಣೆ ಹಾಕಬೇಕು ಎಂಬುದು ರಾಜ್ಯ ನಾಯಕರ ಒತ್ತಾಯವಾಗಿದೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಚರ್ಚೆ ನಡೆಸಲು ಡಿ.ಕೆ.ಶಿವಕುಮಾರ್ ದೆಹಲಿಯತ್ತ ಮುಖ ಮಾಡಿದ್ದಾರೆ. ವಿಧಾನಸಭಾ ಅಧಿವೇಶನ ಮುಕ್ತಾಯಗೊಂಡ ಬೆನ್ನಲ್ಲೇ ಸಿಎಂ ದೆಹಲಿ ಪ್ರವಾಸ ಕುತೂಹಲ ಕೆರಳಿಸಿದ್ದು, ಸಂಪುಟ ಪುನಾರಚನೆ ನಡೆಯಲಿದೆಯೇ ಎಂಬ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ.

# ಜಾತಿಗಣತಿ ಪ್ರಶ್ನಾವಳಿ ಬಗ್ಗೆ ಖರ್ಗೆ–ರಾಹುಲ್ ಆಕ್ಷೇಪ: ಪ್ರಧಾನಿಗೆ ಪತ್ರ

### ಮುಕ್ತಪ್ರಶ್ನೆಗಳಿಂದ ನಿಖರ ಮಾಹಿತಿ ಸಿಗದು, ಜಾತಿ ದತ್ತಾಂಶ ತಪ್ಪಾಗಿ ದಾಖಲಾಗುವ ಸಾಧ್ಯತೆ

**ನವದೆಹಲಿ, ಆ.25:** ಮುಂಬರುವ ಜನಗಣತಿಯಲ್ಲಿ ಜಾತಿ ಮಾಹಿತಿಯನ್ನು ಸಂಗ್ರಹಿಸುವ ವಿಧಾನಕ್ಕೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಜಾತಿಯ ಹೆಸರನ್ನು ಜನರೇ ಸ್ವತಃ ನಮೂದಿಸುವ ಮುಕ್ತಪ್ರಶ್ನೆ ಪದ್ಧತಿ ತಪ್ಪು ಹಾಗೂ ದಾರಿ ತಪ್ಪಿಸುವ ದತ್ತಾಂಶಕ್ಕೆ ಕಾರಣವಾಗಬಹುದು ಎಂದು ಆರೋಪಿಸಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ.

ಜಾತಿ ಮಾಹಿತಿಗಾಗಿ ನಿಗದಿತ ಹಾಗೂ ಅಧಿಕೃತ ಜಾತಿಪಟ್ಟಿಯನ್ನು ಬಳಸುವ ಬದಲು ಮುಕ್ತವಾಗಿ ಉತ್ತರಿಸುವ ಅವಕಾಶ ನೀಡಿರುವುದು ಗಂಭೀರ ಸಮಸ್ಯೆ ಎಂದು ಕಾಂಗ್ರೆಸ್ ನಾಯಕರು ಹೇಳಿದ್ದಾರೆ. ಒಂದೇ ಜಾತಿಗೆ ವಿವಿಧ ಹೆಸರುಗಳು, ಉಪಜಾತಿಗಳ ಹೆಸರುಗಳು ಅಥವಾ ಸ್ಥಳೀಯವಾಗಿ ಬಳಕೆಯಲ್ಲಿರುವ ಹೆಸರುಗಳು ದಾಖಲಾಗುವುದರಿಂದ ಸಾವಿರಾರು ವಿಭಿನ್ನ ನಮೂದುಗಳು ಸೃಷ್ಟಿಯಾಗುವ ಸಾಧ್ಯತೆ ಇದೆ. ಇದರಿಂದ ಒಬಿಸಿ ಸೇರಿದಂತೆ ವಿವಿಧ ಸಾಮಾಜಿಕ ವರ್ಗಗಳ ನೈಜ ಜನಸಂಖ್ಯೆ ಅಂದಾಜು ತಪ್ಪಾಗಬಹುದು ಎಂದು ಅವರು ಹೇಳಿದ್ದಾರೆ.





ಈ ರೀತಿಯ ದತ್ತಾಂಶವು ಭವಿಷ್ಯದಲ್ಲಿ ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ನೀತಿಗಳು, ಮೀಸಲಾತಿ ಹಾಗೂ ಸರ್ಕಾರಿ ಯೋಜನೆಗಳ ರೂಪರೇಷೆ ಮೇಲೆ ಪರಿಣಾಮ ಬೀರಬಹುದು ಎಂದು ಖರ್ಗೆ ಮತ್ತು ರಾಹುಲ್ ಗಾಂಧಿ ಎಚ್ಚರಿಸಿದ್ದಾರೆ. ಹೀಗಾಗಿ ಪ್ರಸ್ತುತ ಪ್ರಶ್ನಾವಳಿಯನ್ನು ಹಿಂಪಡೆದು, ಜಾತಿ ಮಾಹಿತಿಯನ್ನು ಹೆಚ್ಚು ವೈಜ್ಞಾನಿಕ ಹಾಗೂ ನಿಖರವಾಗಿ ಸಂಗ್ರಹಿಸುವಂತೆ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ನಾಯಕರು ತೆಲಂಗಾಣ ಮತ್ತು ಬಿಹಾರದಲ್ಲಿ ನಡೆದ ಜಾತಿ ಸಮೀಕ್ಷೆಗಳ ಅನುಭವವನ್ನು ಉಲ್ಲೇಖಿಸಿ, ಜಾತಿಗಳ ಪಟ್ಟಿಯನ್ನು ಪೂರ್ವನಿರ್ಧರಿತವಾಗಿ ಹೊಂದಿರುವ ವ್ಯವಸ್ಥೆ ಹೆಚ್ಚು ಪರಿಣಾಮಕಾರಿ ಎಂದು ಪ್ರತಿಪಾದಿಸಿದ್ದಾರೆ.

2027ರ ಜನಗಣತಿಯಲ್ಲಿ ಜಾತಿ ಗಣತಿಯನ್ನು ಸೇರಿಸಲು ಕೇಂದ್ರ ಸರ್ಕಾರ 2025ರ ಏಪ್ರಿಲ್‌ನಲ್ಲಿ ನಿರ್ಧರಿಸಿತ್ತು. ಈ ಹಿನ್ನೆಲೆಯಲ್ಲಿ ಪ್ರಶ್ನಾವಳಿಯ ಸ್ವರೂಪದ ಕುರಿತು ಕಾಂಗ್ರೆಸ್ ಮತ್ತು ಕೇಂದ್ರ ಸರ್ಕಾರದ ನಡುವಿನ ರಾಜಕೀಯ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ.

### ಆಕ್ಷೇಪಗಳೇನು?

- ಜಾತಿ ಹೆಸರನ್ನು ಮುಕ್ತವಾಗಿ ನಮೂದಿಸುವ ವಿಧಾನದಿಂದ ದತ್ತಾಂಶದಲ್ಲಿ ಗೊಂದಲ ಉಂಟಾಗುವ ಸಾಧ್ಯತೆ
- ಒಂದೇ ಜಾತಿಗೆ ಹಲವು ಹೆಸರುಗಳು ಮತ್ತು ಉಪಜಾತಿಗಳ ಹೆಸರುಗಳು ದಾಖಲಾಗಬಹುದು
- ಇದರಿಂದ ಓಬಿಸಿ ಸೇರಿದಂತೆ ವಿವಿಧ ಸಮುದಾಯಗಳ ಜನಸಂಖ್ಯೆ ತಪ್ಪಾಗಿ ಅಂದಾಜಾಗುವ ಸಾಧ್ಯತೆ
- ತಪ್ಪಾದ ದತ್ತಾಂಶವು ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ನೀತಿಗಳ ಮೇಲೆ ಪರಿಣಾಮ ಬೀರಬಹುದು
- ನಿಖರ ದತ್ತಾಂಶಕ್ಕಾಗಿ ಅಧಿಕೃತ ಹಾಗೂ ನಿಗದಿತ ಜಾತಿಪಟ್ಟಿಯನ್ನು ಬಳಸಬೇಕು
- ಪ್ರಸ್ತುತ ಪ್ರಶ್ನಾವಳಿಯನ್ನು ಮರುಪರಿಶೀಲಿಸಿ, ಜಾತಿಗಣತಿ ಪ್ರಕ್ರಿಯೆಯನ್ನು ಹೆಚ್ಚು ವೈಜ್ಞಾನಿಕಗೊಳಿಸಬೇಕು



**ರಾಜ್ಯದ ವಿವಿಧ ಭಾಗಗಳ ಮಠಾಧೀಶರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಮಂಗಳವಾರ ಭೇಟಿ ಮಾಡಿ ಅಭಿನಂದಿಸಿದರು. ಜಗದ್ಗುರು ವಾಲ್ಮೀಕಿ ಪ್ರಸನ್ನಾನಂದ ಸ್ವಾಮಿಜಿ ವಾಲ್ಮೀಕಿ ಗುರುಪೀಠ, ಜಗದ್ಗುರು ಶಾಂತವೀರ ಸ್ವಾಮೀಜಿ ಕುಂಚಿಟಿಗ ಮಹಾಸಂಸ್ಥಾನ, ಜಗದ್ಗುರು ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಭೋವಿ ಗುರುಪೀಠ, ಜಗದ್ಗುರು ದಯಾನಂದಪುರಿ ಸ್ವಾಮೀಜಿ ದೇವಾಂಗ ಗುರುಪೀಠ, ಜಗದ್ಗುರು ಈಶ್ವರಾನಂದಪುರಿ ಸ್ವಾಮೀಜಿ ಕನಕ ಗುರುಪೀಠ, ಜಗದ್ಗುರು ಪುರುಷೋತ್ತಮಾನಂದಪುರಿ ಸ್ವಾಮೀಜಿ ಉಪ್ಪಾರ ಗುರುಪೀಠ, ಜಗದ್ಗುರು ಮಾಚಿದೇವ ಸ್ವಾಮೀಜಿ ಮಡಿವಾಳ ಗುರುಪೀಠ, ಜಗದ್ಗುರು ರೇಣುಕಾನಂದ ಸ್ವಾಮೀಜಿ ಈಡಿಗ ಗುರುಪೀಠ, ಜಗದ್ಗುರು ಯಾದವಾನಂದ ಸ್ವಾಮೀಜಿ ಯಾದವ ಗುರುಪೀಠ, ಸಿದ್ದರಾಮಯ್ಯ ಚೈತನ್ಯ ಮಹಾಸ್ವಾಮಿಜಿ ಕುಣಿಗಲ್, ಹಡಪದ ಅಪ್ಪಣ್ಣ ಸ್ವಾಮೀಜಿ ಹಡಪದ ಅಪ್ಪಣ್ಣ ಗುರುಪೀಠ, ಕುಂಬಾರಗುಂಡಯ್ಯ ಸ್ವಾಮೀಜಿ ಕುಂಬಾರ ಗುರುಪೀಠ ಚನ್ನಬಸವ ಸ್ವಾಮೀಜಿ, ಮಹಾಲಿಂಗ ಸ್ವಾಮೀಜಿ, ಮಲ್ಲಿಕಾರ್ಜುನ ಸ್ವಾಮೀಜಿ, ಶಿವಬಸವ ಸ್ವಾಮೀಜಿ, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಬಸನಗೌಡ ಬಾದರ್ಲಿ, ಆರ್ ಆರ್ ನಗರದ ಲಗ್ಗೆರೆ ನಾರಾಯಣಸ್ವಾಮಿ ಮತ್ತಿತರರು ಇದ್ದರು.**

# ಆನ್‌ಲೈನ್ ಇ–ಕಾಮರ್ಸ್ ವೇದಿಕೆಗಳ ಮೂಲಕ ವಿಷಕಾರಿ ದತ್ತೂರಿ ಹಣ್ಣು, ಬೀಜ ಮಾರಾಟ ಪತ್ತೆ

**ಬೆಂಗಳೂರು, ಆ.25:** ರಾಜ್ಯದಲ್ಲಿ ಅಮೆಜಾನ್, ಸ್ವಿಗ್ಗಿ, ಇನ್‌ಸ್ಟಾಮಾರ್ಟ್ ಮೊದಲಾದ ಆನ್‌ಲೈನ್ ಇ–ಕಾಮರ್ಸ್ ವೇದಿಕೆಗಳ ಮೂಲಕ ವಿಷಕಾರಿ ದತ್ತೂರಿ ಹಣ್ಣು ಮತ್ತು ಬೀಜಗಳನ್ನು ಆಹಾರ ಪದಾರ್ಥದಂತೆ ಮಾರಾಟ ಮಾಡುತ್ತಿರುವುದು ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಕಠಿಣ ಕ್ರಮ ಕೈಗೊಂಡಿದೆ.

- **ರಾಜ್ಯದಲ್ಲಿ ಅಮೆಜಾನ್, ಸ್ವಿಗ್ಗಿ ಇನ್‌ಸ್ಟಾಮಾರ್ಟ್ ಮತ್ತು ಬಿಗ್‌ಬಾಸ್ಕೆಟ್ ಇ–ಕಾಮರ್ಸ್ ಆಹಾರ ಪರವಾನಗಿ ರದ್ದು**

ಅಮೆಜಾನ್, ಸ್ವಿಗ್ಗಿ ಇನ್‌ಸ್ಟಾಮಾರ್ಟ್ ಮತ್ತು ಬಿಗ್‌ಬಾಸ್ಕೆಟ್ ಇ–ಕಾಮರ್ಸ್ ಸಂಸ್ಥೆಗಳ ಆಹಾರ ಪರವಾನಗಿಯನ್ನು ಮುಂದಿನ ಆದೇಶದವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ನ್ಯಾಯ ನಿರ್ಣಯಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

ದತ್ತೂರಿ ಸಸ್ಯವು ವಿಷಕಾರಿ ಗುಣ ಹೊಂದಿದ್ದು, ಅದರ ಹಣ್ಣು ಮತ್ತು ಬೀಜಗಳನ್ನು ಸೇವಿಸಿದರೆ ಗಂಭೀರ ಆರೋಗ್ಯ ಸಮಸ್ಯೆಗಳು, ಕೋಮಾ, ಅಂಗಾಗ ವೈಫಲ್ಯದಂತಹ ಪರಿಣಾಮಗಳು ಉಂಟಾಗಬಹುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆಹಾರ ಸುರಕ್ಷತೆ ಅಧಿಕಾರಿಗಳು ನಡೆಸಿದ ತಪಾಸಣೆಯಲ್ಲಿ, ಈ ಉತ್ಪನ್ನಗಳನ್ನು ಎಫ್.ಎಸ್.ಎಸ್.ಎ.ಐ ಪರವಾನಗಿ ಅಥವಾ ನೋಂದಣಿ ಸಂಖ್ಯೆಗಳೊಂದಿಗೆ ಪ್ಯಾಕ್ ಮಾಡಿ ಗೋದಾಮುಗಳಲ್ಲಿ ಸಂಗ್ರಹಿಸಿ ಆನ್‌ಲೈನ್ ಮೂಲಕ ಮಾರಾಟ ಮಾಡುತ್ತಿದ್ದುದು ಪತ್ತೆಯಾಗಿದೆ.

ಇಲಾಖೆಯು ಈ ಮೂರು ವೇದಿಕೆಗಳಿಗೆ ವಿಷಕಾರಿ ದತ್ತೂರಿ ಸಸ್ಯಕ್ಕೆ ಸಂಬಂಧಿಸಿದ ಎಲ್ಲಾ ಪಟ್ಟಿಗಳು, ಜಾಹೀರಾತುಗಳು ಮತ್ತು ಪ್ರಚಾರವನ್ನು ತಕ್ಷಣ ತೆಗೆಯುವಂತೆ, ಮಾರಾಟ ಅಥವಾ ವಿತರಣೆಯನ್ನು ಸಂಪೂರ್ಣವಾಗಿ ನಿಲ್ಲಿಸುವಂತೆ ಸೂಚಿಸಿದೆ. ಪೂರೈಕೆದಾರರು ಮತ್ತು ಮಾರಾಟಗಾರರ ಪರವಾನಗಿಗಳನ್ನೂ ಅಮಾನತುಗೊಳಿಸಲಾಗಿದೆ. ಆದೇಶ ಮೀರಿದರೆ ಗಂಭೀರ ಕ್ರಮ ಕೈಗೊಳ್ಳಲಾಗುವ ಎಂದು ಎಚ್ಚರಿಕೆ ನೀಡಲಾಗಿದೆ.

# ನಾಗೇಂದ್ರ ವಿರುದ್ಧ ಪ್ರಾಸಿಕ್ಯೂಷನ್: ಸಂಪುಟ ಸಭೆ ಅಭಿಪ್ರಾಯ ಕೋರಲು ಮುಂದಾದ ರಾಜ್ಯಪಾಲರು

**ಬೆಂಗಳೂರು,ಆ.25:** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ವರ್ಗಾವಣೆ ಹಗರಣಕ್ಕೆ ಸಂಬಂಧಿಸಿದಂತೆ, ಸಚಿವ ಬಿ.ನಾಗೇಂದ್ರ ವಿರುದ್ಧ ಕಾನೂನು ಕ್ರಮ ಜರುಗಿಸಲು (ಪ್ರಾಸಿಕ್ಯೂಷನ್) ಸಿಬಿಐ ಲೋಕಭವನದ ಮೊರೆ ಹೋಗಿರುವುದರಿಂದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು, ಸಚಿವ ಸಂಪುಟ ಸಭೆಯ ಅಭಿಪ್ರಾಯ ಕೇಳಲು ಮುಂದಾಗಿದ್ದಾರೆ.



ಒಂದು ವೇಳೆ ಸಚಿವ ಸಂಪುಟ ಸಭೆಯು ರಾಜ್ಯಪಾಲರ ಪತ್ರಕ್ಕೆ ಮನ್ನಣೆ ಕೊಡದಿದ್ದರೆ, ರಾಜ್ಯಪಾಲರು ಮುಂದೆ ತೆಗೆದುಕೊಳ್ಳುವ ನಿರ್ಧಾರ ಸಚಿವ ನಾಗೇಂದ್ರ ರಾಜಕೀಯ ಭವಿಷ್ಯವನ್ನು ತೀರ್ಮಾನಿಸಲಿದೆ.

ವಾಲ್ಮೀಕಿ ನಿಗಮದ ನಿಧಿಯ ದುರುಪಯೋಗ ಮತ್ತು ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಸಚಿವ ನಾಗೇಂದ್ರ ಅವರ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೋರಿ ರಾಜ್ಯಪಾಲರಿಗೆ ಅಧಿಕೃತ ಪತ್ರ ಬರೆದಿದೆ.

ರಾಜ್ಯಪಾಲರ ಕಚೇರಿಯು (ಲೋಕಭವನ) ಈ ಕುರಿತು ಕಾನೂನು ಇಲಾಖೆ ಹಾಗೂ ತಜ್ಞರ ಸಲಹೆಯನ್ನು ಪಡೆದುಕೊಂಡಿದ್ದು, ಸಚಿವ ಸಂಪುಟದ ಅಭಿಪ್ರಾಯ ಮತ್ತು ಸಂವಿಧಾನಿಕ ನಿಯಮಗಳ ಅಡಿಯಲ್ಲಿ ಮುಂದಿನ ನಿರ್ಧಾರ ಕೈಗೊಳ್ಳಲು ಸಿದ್ಧತೆ ನಡೆಸಿದೆ. ಸಿಬಿಐ ರಾಜ್ಯ ಸರ್ಕಾರಕ್ಕೆ ಮೊದಲು ಮಾಹಿತಿ ಅಥವಾ ಪತ್ರ ನೀಡಬೇಕಾಗಿತ್ತು ಎಂಬುದು ಸರ್ಕಾರದ ವಾದವಾಗಿದೆ.

ಇದೇ ವಿಚಾರ ಈಗ ಕಾನೂನು ಮತ್ತು ಸಂವಿಧಾನಾತಕ ಚರ್ಚೆಯನ್ನೂ ಹುಟ್ಟುಹಾಕಿದೆ. ವಿಶೇಷವಾಗಿ, ರಾಜ್ಯ ವ್ಯಾಪ್ತಿಯಲ್ಲಿ ಸಿಬಿಐ ತನಿಖೆ ನಡೆಸುವ ಅಧಿಕಾರ, ರಾಜ್ಯದ ಒಪ್ಪಿಗೆ, ಹಾಗೂ ಹಾಲಿ ಸಚಿವರ ವಿರುದ್ಧ ಪ್ರಾಸಿಕ್ಯೂಷನ್ಗೆ ಅನುಮತಿ ನೀಡುವ ಸಂದರ್ಭದಲ್ಲಿ ರಾಜ್ಯಪಾಲರ ಅಧಿಕಾರದ ಮಿತಿಗಳೇನು ಎಂಬುದು ಪ್ರಮುಖ ಪ್ರಶ್ನೆಗಳಾಗಿವೆ.

**ಹಿನ್ನೆಲೆ ಮತ್ತು ಕಾನೂನು ಚೌಕಟ್ಟು:** 2024ರ ಲೋಕಸಭಾ ಚುನಾವಣೆಗೆ ಮುನ್ನ ವಾಲೀಕಿ ನಿಗಮದಲ್ಲಿ ನಡೆದ ಹಣಕಾಸು ಅಕ್ರಮಗಳು ಮತ್ತು ವರ್ಗಾವಣೆ ಪ್ರಕರಣಗಳು ಬೆಳಕಿಗೆ ಬಂದಾಗ ಬಿ. ನಾಗೇಂದ್ರ ಎಸ್‌ಟಿ ಕಲ್ಯಾಣ ಸಚಿವರಾಗಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಕ್ರಿಮಿನಲ್ ಪಿತೂರಿ ಆರೋಪದ ಮೇರೆಗೆ ಹಾಗೂ ಇಡಿ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಕಾನೂನು ಕ್ರಮಕ್ಕೆ ಅನುಮತಿ ಕೋರಿ ಪ್ರತ್ಯೇಕ ಮನವಿಗಳನ್ನು ಲೋಕಭವನಕ್ಕೆ ಸಲ್ಲಿಸಿವೆ.

### ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ದುರುಪಯೋಗ ಪ್ರಕರಣ



ಈ ಕುರಿತು ಪ್ರತಿಕ್ರಿಯಿಸಿದ್ದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಸಚಿವರೊಬ್ಬರ ವಿರುದ್ಧ ಕಾನೂನು ಕ್ರಮ ಜರುಗಿಸಲು ರಾಜ್ಯಪಾಲರು ನೇರವಾಗಿ ಅನುಮತಿ ನೀಡಬಹುದೇ ಎಂಬ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದು, ಇದಕ್ಕೆ ರಾಜ್ಯ ಸರ್ಕಾರದ ಒಪ್ಪಿಗೆ ಕಡ್ಡಾಯವಾಗಿ ಅಗತ್ಯವಿರುತ್ತದೆ ಎಂದು ಪ್ರತಿಪಾದಿಸಿದ್ದರು.

ಭಾರತೀಯ ಕಾನೂನು ಚೌಕಟ್ಟಿನನ್ವಯ, ದೆಹಲಿ ವಿಶೇಷ ಪೊಲೀಸ್ ಸ್ಥಾಪನಾ ಕಾಯಿದೆ, 1946ರ ಸೆಕ್ಷನ್ 6ರ ಪ್ರಕಾರ ಸಿಬಿಐ ತನ್ನ ತನಿಖಾ ವ್ಯಾಪ್ತಿಯನ್ನು ಚಲಾಯಿಸಲು ಸಾಮಾನ್ಯವಾಗಿ ರಾಜ್ಯ ಸರ್ಕಾರದ ಒಪ್ಪಿಗೆಯನ್ನು ಅಪೇಕ್ಷಿಸುತ್ತದೆ. ಆದಾಗ್ಯೂ ಉಚ್ಚ ನ್ಯಾಯಾಲಯ ಅಥವಾ ಸರ್ವೋಚ್ಚ ನ್ಯಾಯಾಲಯಗಳು ಸ್ವಯಂಪ್ರೇರಿತವಾಗಿ ಅಥವಾ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಮೇರೆಗೆ ಸಿಬಿಐ ತನಿಖೆಗೆ ಆದೇಶಿಸಿದ ಸಂದರ್ಭಗಳಲ್ಲಿ ಅಥವಾ ಕೇಂದ್ರ ಸರ್ಕಾರದ ನೌಕರರು ಭಾಗಿಯಾದಾಗ ಇಂತಹ ವಿಶೇಷ ಒಪ್ಪಿಗೆಯ ಅಗತ್ಯವಿರುವುದಿಲ್ಲ ಎಂದು ಕಾನೂನು ತಜ್ಞರು ಅಭಿಪ್ರಾಯಪಡುತ್ತಾರೆ.

ಸಚಿವರು ಮತ್ತು ಶಾಸಕರ ವಿರುದ್ಧದ ಪ್ರಾಸಿಕ್ಯೂಷನ್ ಮಂಜೂರಾತಿ ವಿಷಯಗಳಲ್ಲಿ ರಾಜ್ಯಪಾಲರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳಲು ಸಾಧ್ಯವಿದೆಯೇ ಅಥವಾ ಸರ್ಕಾರದ ಒಪ್ಪಿಗೆ ಕಡ್ಡೇಪಾಯವೇ ಎಂಬ ಬಗ್ಗೆ ಲೋಕಭವನವು ಕಾನೂನು ತಜ್ಞರಿಂದ ಸ್ಪಷ್ಟನೆ ಹಾಗೂ ಸಲಹೆಯನ್ನು ಪಡೆದುಕೊಂಡಿದೆ. ಬಂದಿರುವ ಕಾನೂನು ಅಭಿಪ್ರಾಯದ ಮೇರೆಗೆ, ಈ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರದ ಅಧಿಕೃತ ಅಭಿಪ್ರಾಯವನ್ನು ಪಡೆದು ಮುಂದಿನ ಕ್ರಮ ಜರುಗಿಸಲು ನಿರ್ಧರಿಸಲಾಗಿದೆ.

### ಬಿಎಸ್‌ವೈ ಪ್ರಕರಣದಲ್ಲಿ ಸಂಪುಟ ನಿರ್ಣಯ ತಿರಸ್ಕರಿಸಿದ್ದ ಹಂಸರಾಜ್ ಭಾರದ್ವಾಜ್

ಜನಪ್ರತಿನಿಧಿಗಳ ವಿರುದ್ಧ ವಿಚಾರಣೆ ನಡೆಸಲು ಸಚಿವ ಸಂಪುಟ ಒಪ್ಪಿಗೆ ಕಡ್ಡಾಯ ಎಂಬುದು ಕೇವಲ ಔಪಚಾರಿಕ ಪ್ರಕ್ರಿಯೆ ಎಂದು ಹೇಳಲಾಗುತ್ತದೆ. ಏಕೆಂದರೆ, ಈ ಹಿಂದೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಡಿನೋಟಿಫಿಕೇಷನ್ ಪ್ರಕರಣದಲ್ಲಿ ಲೋಕಾಯುಕ್ತ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಲು ಅನುಮತಿ ನೀಡಬೇಕೆಂದು ಅಂದಿನ ರಾಜ್ಯಪಾಲ ಹಂಸರಾಜ್ ಭಾರದ್ವಾಜ್ ಅವರಿಗೆ ಪತ್ರ ಬರೆದಿದ್ದರು. ಈ ಸಂದರ್ಭದಲ್ಲಿ ಸಚಿವ ಸಂಪುಟ ಸಭೆಯು ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಬಾರದು ಎಂದು ಒಂದು ಸಾಲಿನ ನಿರ್ಣಯವನ್ನು ತೆಗೆದುಕೊಂಡಿತ್ತು.ಆದರೆ ರಾಜ್ಯಪಾಲರು ಸಚಿವ ಸಂಪುಟ ಸಭೆಯ ನಿರ್ಣಯ ತಿರಸ್ಕರಿಸಿದ್ದರು. ರಾಜ್ಯಪಾಲರ ಕಚೇರಿಯು ಈ ವಿಷಯದಲ್ಲಿ ಕಾನೂನು ಇಲಾಖೆಯ ಅಭಿಪ್ರಾಯ ಪಡೆಯುವ ಪ್ರಕ್ರಿಯೆಗೆ ಮುಂದಾಗಿದೆ. ರಾಜ್ಯಪಾಲರು ಸಚಿವರ ವಿರುದ್ಧದ ಪ್ರಾಸಿಕ್ಯೂಷನ್ ಅನುಮತಿ ವಿಚಾರದಲ್ಲಿ ಸರ್ಕಾರದ ನೆರವು ಮತ್ತು ಸಲಹೆಯನ್ನು ಪಡೆಯಬೇಕೇ ಎಂಬ ಪ್ರಶ್ನೆಯೂ ಇದರೊಂದಿಗೆ ಮುನ್ನೆಲೆಗೆ ಬಂದಿದೆ.

### ವಾಲ್ಮೀಕಿ ನಿಗಮದ ಹಗರಣ: ಸಚಿವ ನಾಗೇಂದ್ರ ರಾಜೀನಾಮೆಗೆ ಬಿಜೆಪಿ ಆಗ್ರಹ

# ಸೆ.1ರಿಂದ 10ರವರೆಗೆ ರಾಯಚೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ



**ಬೆಂಗಳೂರು, ಆ.25:** ವಾಲ್ಮೀಕಿ ನಿಗಮದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಮತ್ತೊಂದು ಸುತ್ತಿನ ಹೋರಾಟಕ್ಕೆ ಸಜ್ಜಾಗಿದೆ. ಸೆಪ್ಟೆಂಬರ್ 1ರಿಂದ 10ರವರೆಗೆ ರಾಯಚೂರಿನಿಂದ ಬಳ್ಳಾರಿವರೆಗೆ ಬಿಜೆಪಿ 'ಬಳ್ಳಾರಿ ಚಲೋ' ಪಾದಯಾತ್ರೆ ನಡೆಸಲಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ನೇತೃತ್ವದಲ್ಲಿ 170ರಿಂದ 200 ಕಿ.ಮೀ.ವರೆಗೆ ಪಾದಯಾತ್ರೆ ನಡೆಯಲಿದ್ದು, ಜೆಡಿಎಸ್ ಕೂಡ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಬಿಜೆಪಿ ತಿಳಿಸಿದೆ. ರಾಯಚೂರು ಜಿಲ್ಲೆಯ ಲಿಂಗಸುಗೂರು ಕ್ಷೇತ್ರದ ಗುರುಗುಂಟದಿಂದ ಪಾದಯಾತ್ರೆ ಆರಂಭವಾಗಲಿದ್ದು, ಬಳಿಕ ಲಿಂಗಸುಗೂರು, ಮಸ್ಕಿ, ಸಿಂಧನೂರು, ಶಿರಗುಪ್ಪ, ತೆಕ್ಕಲಕೋಟೆ, ಸಿಂದಗೇರಿ ಮಾರ್ಗವಾಗಿ ಬಳ್ಳಾರಿ ತಲುಪಲಿದೆ. ಸುಮಾರು 8ರಿಂದ 9 ವಿಧಾನಸಭಾ ಕ್ಷೇತ್ರಗಳ ಮೂಲಕ ಈ ಪಾದಯಾತ್ರೆ ಸಾಗಲಿದ್ದು, ನಾಲ್ಕು ಎಸ್‌ಟಿ ಕ್ಷೇತ್ರಗಳು ಒಳಗೊಂಡಿವೆ. ಪಾದಯಾತ್ರೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ ನೀಡಲಿದ್ದು, ಸಮಾರೋಪ ಸಮಾವೇಶದಲ್ಲಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸೇರಿದಂತೆ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ.

ವಾಲ್ಮೀಕಿ ನಿಗಮ ಹಗರಣ, ಮೀಸಲಾತಿ, ಉತ್ತರ ಕರ್ನಾಟಕದ ನೀರಾವರಿ, ಬರ ಪರಿಸ್ಥಿತಿ ಹಾಗೂ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ಹಲವು ವಿಚಾರಗಳನ್ನು ಜನರ ಮುಂದಿಟ್ಟು ಹೋರಾಟ ನಡೆಸುವುದಾಗಿ ಬಿಜೆಪಿ ತಿಳಿಸಿದೆ. ವಾಲ್ಮೀಕಿ ನಿಗಮದ ಅಕ್ರಮದ ವಿಚಾರದಲ್ಲಿ ರಾಜ್ಯ ಸರ್ಕಾರ ಮುಖ್ಯ ಆರೋಪಿಯಾಗಿರುವ ಬಿ. ನಾಗೇಂದ್ರ ಅವರನ್ನು ರಕ್ಷಿಸುತ್ತಿದೆ. ಅಧಿವೇಶನದಲ್ಲಿ ಸರ್ಕಾರ ಈ ಸತ್ಯ ಎದುರಿಸಲಾಗದೆ ಕಲಾಪವನ್ನು ಮೊಟಕುಗೊಳಿಸಿದೆ ಎಂದು ಬಿ.ವೈ ವಿಜಯೇಂದ್ರ ಟೀಕಿಸಿದ್ದಾರೆ.

ಇದೇ ವೇಳೆ, ಉತ್ತರ ಕರ್ನಾಟಕದ ಅಭಿವೃದ್ಧಿಯನ್ನು ಸರ್ಕಾರ ಕಡೆಗಣಿಸಿದೆ ಮತ್ತು ವಾಲ್ಮೀಕಿ ಸಮುದಾಯದ ಮೀಸಲಾತಿ ವಿಚಾರದಲ್ಲೂ ಅನ್ಯಾಯವಾಗಿದೆ ಎಂದು ಬಿಜೆಪಿ ಆರೋಪಿಸಿದೆ.

ಪಾದಯಾತ್ರೆ ಸಂಬಂಧ ನಡೆದ ಸಭೆಯಲ್ಲಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಸಿ.ಟಿ. ರವಿ, ಜಿ. ಜನಾರ್ದನ ರೆಡ್ಡಿ, ಬಿ. ಶ್ರೀರಾಮುಲು, ರಾಜುಗೌಡ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದರು.

#### ಧರಣಿಗೆ ಹೆದರಿ ಕಲಾಪ ಮುಂದೂಡಿಕೆ

**ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಅಹೋರಾತ್ರಿ ಧರಣಿ ನಡೆಸುತ್ತೇವೆ ಎಂದು ಘೋಷಣೆ ಮಾಡುತ್ತಿದ್ದಂತೆ ಹೆದರಿದ ಕಾಂಗ್ರೆಸ್ ಸರ್ಕಾರ ಸದನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿದೆ. ಎಲ್ಲ ವಿಷಯಗಳ ಬಗ್ಗೆ ಚರ್ಚೆಗೆ ನಾವು ಸಿದ್ಧವಿದ್ದರೂ ಕಾಂಗ್ರೆಸ್ ತಯಾರಿರಲಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.**

**ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್‌ನಲ್ಲೇ ಅಧಿವೇಶನ ನಡೆಯಬೇಕಿದ್ದರೂ ಸಚಿವ ಸಂಪುಟದ ಕಿತ್ತಾಟದಿಂದಾಗಿ ತಡವಾಯಿತು. ಆದರೆ ನಿಗದಿತ ಅವಧಿಗೆ ಮೂರು ದಿನ ಮುನ್ನವೇ ಅಧಿವೇಶನ ರದ್ದು ಮಾಡಿರುವುದು ಸರ್ಕಾರದ ವೈಫಲ್ಯವಾಗಿದೆ. ಆಡಳಿತ ನಡೆಸುತ್ತಿರುವ ಸರ್ಕಾರದ ವಿಫಲತೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ ಮಾಡಿದ ಸಚಿವ ಬಿ.ನಾಗೇಂದ್ರ ಅವರಿಗಾಗಿ ಇಡೀ ಸದನವನ್ನೇ ರದ್ದು ಮಾಡಿದ್ದಾರೆ ಎಂದರು. ರಾಜ್ಯದಲ್ಲಿ ಹೆಚ್ಚಿರುವ ಬರಗಾಲದ ಬಗ್ಗೆ ಬಿಜೆಪಿ ಬೇರೆ ಬೇರೆ ಜಿಲ್ಲೆಗಳಿಗೆ ಹೋಗಿ ಅಧ್ಯಯನ ನಡೆಸಿದೆ. ಬರ ಅಧ್ಯಯನ ಸಮಿತಿ ರಚಿಸಿ ಪ್ರವಾಸ ಮಾಡಲಾಗಿದೆ. ನೈಸ್ ಟೋಲ್ ಅಕ್ರಮದ ಬಗ್ಗೆ ದಾಖಲೆಗಳನ್ನು ಸಂಗ್ರಹಿಸಲಾಗಿದೆ. ಕೆಪಿಎಸ್‌ಸಿ ಅಕ್ರಮ ಕುರಿತು ಕೂಡ ಸೂಕ್ತ ದಾಖಲೆಗಳನ್ನು ಸಿದ್ಧಪಡಿಸಿಕೊಟ್ಟುಕೊಳ್ಳಲಾಗಿದೆ. ಬೆಂಗಳೂರಿನ ಕಸ ಟೆಂಡರ್ ಅಕ್ರಮದ ಬಗ್ಗೆಯೂ ದಾಖಲೆಗಳನ್ನು ಸಂಗ್ರಹಿಸಲಾಗಿದೆ. ಸುರಂಗ ರಸ್ತೆ ಯೋಜನೆಯಲ್ಲಿ ಉದ್ಯಮಿ ಗೌತಮ್ ಅದಾನಿಯೊಂದಿಗೆ ಒಪ್ಪಂದ ಮಾಡಿಕೊಂಡಿರುವುದು, ರೇಷನ್ ಕಾರ್ಡ್ ಕಡಿತ ಮೊದಲಾದ ವಿಷಯಗಳ ಬಗ್ಗೆ ಮಾತಾಡಲು ನಾವು ಸಿದ್ಧತೆ ಮಾಡಿಕೊಂಡಿದ್ದೆವು. ಆದರೂ ಮಾತಾಡಲು ಅವಕಾಶ ನೀಡಿಲ್ಲ ಎಂದರು.**

# ದಾಖಲೆಗಳಿದ್ದರೆ ಬಹಿರಂಗಪಡಿಸಿ, ಇಲ್ಲ ಆರೋಪ ಮಾಡುವುದನ್ನು ಬಿಡಿ



■ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಗೆ ಸಚಿವ ಚಲುವರಾಯಸ್ವಾಮಿ ಸವಾಲು

**ಬೆಂಗಳೂರು, ಆ.25:** ನೈಸ್ ಯೋಜನೆ ವಿಚಾರದಲ್ಲಿ ಮುಖ್ಯಮಂತ್ರಿ ವಿರುದ್ಧ ದಾಖಲೆ ಬಿಡುಗಡೆ ಮಾಡುವುದಾಗಿ ಹೇಳುತ್ತಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಸಚಿವ ಚಲುವರಾಯಸ್ವಾಮಿ ತಿರುಗೇಟು ನೀಡಿದ್ದು, ಕೇವಲ ಆರೋಪ ಮಾಡುವುದನ್ನು ಬಿಟ್ಟು ದಾಖಲೆಗಳನ್ನು ಬಹಿರಂಗಪಡಿಸುವಂತೆ ಸವಾಲು ಹಾಕಿದ್ದಾರೆ. ವಿಧಾನಸೌಧದಲ್ಲಿ ಮಾತ ನಾಡಿದ ಅವರು, ಕುಮಾರಸ್ವಾಮಿ ದಾಖಲೆ ಬಿಡುಗಡೆ ಮಾಡುವುದಾಗಿ ಹೇಳುತ್ತಲೇ ಇದ್ದಾರೆ. ಆದರೆ ಈವರೆಗೆ ಯಾವುದನ್ನೂ ಜನರ ಮುಂದೆ ಇಟ್ಟಿಲ್ಲ. ಕಳೆದ ಮೂರು ವರ್ಷಗಳಲ್ಲಿ ಅವರು ಯಾವ ದಾಖಲೆ ಬಿಡುಗಡೆ ಮಾಡಿದ್ದಾರೆ ಎಂಬುದನ್ನು ತೋರಿಸಲಿ ಎಂದು ಪ್ರಶ್ನಿಸಿದರು. ನೈಸ್ ಕಂಪನಿ ವಿಚಾರದಲ್ಲಿ ಕುಮಾರಸ್ವಾಮಿ ಅವರದ್ದು 'ಹಿಟ್ ಅಂಡ್ ರನ್' ರಾಜಕಾರಣ ಎಂದು ಸಚಿವರು ಆರೋಪಿಸಿದರು. ಆರೋಪ ಮಾಡಿದ ಬಳಿಕ ವಿಚಾರವನ್ನು ಮುಂದುವರಿಸದೆ ಹಿಂದೆ ಸರಿಯುವುದು ಸರಿಯಲ್ಲ. ದಾಖಲೆಗಳಿದ್ದರೆ ಅವುಗಳನ್ನು ಬಿಡುಗಡೆ ಮಾಡಿ, ಇಲ್ಲದಿದ್ದರೆ ಆರೋಪ ಮಾಡುವುದನ್ನು ನಿಲ್ಲಿಸಲಿ ಎಂದು ಹೇಳಿದರು.

**ಕರ್ನಾಟಕಕ್ಕೆ ಎಚ್‌ಡಿಕೆ ಕೊಡುಗೆ ಏನು?:** ಕೇಂದ್ರ ಸಚಿವರಾಗಿ ಕರ್ನಾಟಕಕ್ಕೆ ಕುಮಾರಸ್ವಾಮಿ ನೀಡಿರುವ ಕೊಡುಗೆಯ ಬಗ್ಗೆಯೂ ಚಲುವರಾಯಸ್ವಾಮಿ ಪ್ರಶ್ನೆ ಎತ್ತಿದರು. ವಿಜಯವಾಡದಲ್ಲಿ ಕಾರ್ಖಾನೆ ಸ್ಥಾಪಿಸುವ ಕುರಿತು ಪ್ರಧಾನಿ ನೀಡಿದ್ದ ಭರವಸೆ ಈಡೇರಿದೆ. ಆದರೆ ಕರ್ನಾಟಕದ ಪಾಲಿಗೆ ಕುಮಾರಸ್ವಾಮಿ ಏನು ಮಾಡಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದರು. ಎಚ್‌ಎಂಟಿ ವಿಚಾರದಲ್ಲೂ ಸಚಿವರು ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು. ಸಂಸ್ಥೆ ಲಾಭ ಮಾಡುತ್ತಿದೆ ಎಂಬ ವಿಚಾರ ಪ್ರಸ್ತಾಪಿಸಿದ ಅವರು, ಕೇಂದ್ರದಲ್ಲಿ ಅಧಿಕಾರ ಹೊಂದಿರುವ ಕುಮಾರಸ್ವಾಮಿ ತಮ್ಮ ಇಲಾಖೆಗಳ ಮೂಲಕ ರಾಜ್ಯಕ್ಕೆ ಎಷ್ಟು ನೆರವು ತಂದಿದ್ದಾರೆ ಎಂಬುದನ್ನು ಹೇಳಲಿ ಎಂದರು.

# ಸೆಮಿಕಂಡಕ್ಟರ್ ಇಕೋಸಿಸ್ಟಂ ಬಲವರ್ಧನೆಗೆ ಅಪ್ಲೈಡ್ ಮೆಟೀರಿಯಲ್ಸ್ ಹೂಡಿಕೆ



■ **ಅಪ್ಲೈಡ್ ಮೆಟೀರಿಯಲ್ಸ್‌ನ ಕಾರ್ಪೊರೇಟ್ ಉಪಾಧ್ಯಕ್ಷ ಹಾಗೂ ಮುಖ್ಯ ಜಾಗತಿಕ ನೀತಿ ಅಧಿಕಾರಿ ರಾಬರ್ಟ್ ಬ್ಲೇರ್ ಹಾಗೂ ಸಂಸ್ಥೆಯ ಭಾರತದ ತಂಡದ ಜತೆ ಸಚಿವ ಪ್ರಿಯಾಂಕ್ ಖರ್ಗೆ ಚರ್ಚೆ**

**ಬೆಂಗಳೂರು, ಆ.25:** ಅಪ್ಲೈಡ್ ಮೆಟೀರಿಯಲ್ಸ್‌ನ ಕಾರ್ಪೊರೇಟ್ ಉಪಾಧ್ಯಕ್ಷ ಹಾಗೂ ಮುಖ್ಯ ಜಾಗತಿಕ ನೀತಿ ಅಧಿಕಾರಿ ರಾಬರ್ಟ್ ಬ್ಲೇರ್ ಹಾಗೂ ಸಂಸ್ಥೆಯ ಭಾರತದ ನಾಯಕತ್ವ ತಂಡವನ್ನು ಗೃಹ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ಭೇಟಿ ಮಾಡಿ, ಬೆಂಗಳೂರಿನಲ್ಲಿ ಸಂಸ್ಥೆಯ ಮುಂಬರುವ ಸಂಶೋಧನೆ ಮತ್ತು ಅಭಿವೃದ್ಧಿ, ಸೆಮಿಕಂಡಕ್ಟರ್ ಇಕೋಸಿಸ್ಟಂ ಅಭಿವೃದ್ಧಿ ಹೂಡಿಕೆ ಕುರಿತು ಚರ್ಚಿಸಿದರು.

ಸಭೆಯಲ್ಲಿ ಬೆಂಗಳೂರಿನಲ್ಲಿ ಪ್ರಸ್ತಾಪಿಸಲಾಗಿರುವ ಸಂಸ್ಥೆಯ ಮುಂಬರುವ ಸಂಶೋಧನಾ ಮತ್ತು ಅಭಿವೃದ್ಧಿ ಹೂಡಿಕೆ ಹಾಗೂ ಸೆಮಿಕಂಡಕ್ಟರ್ ಇಕೋಸಿಸ್ಟಂ ಅಭಿವೃದ್ಧಿಯ ಮೂಲಕ ಕರ್ನಾಟಕದಲ್ಲಿ ಸಂಪೂರ್ಣ ಮೌಲ್ಯ ಸರಪಳಿಯಾದ್ಯಂತ ಸೃಷ್ಟಿಯಾಗಬಹುದಾದ ಅವಕಾಶಗಳ ಕುರಿತು ಸಮಗ್ರವಾಗಿ ಚರ್ಚೆ ನಡೆಸಲಾಯಿತು. ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಕರ್ನಾಟಕ ಈಗಾಗಲೇ ಹೊಂದಿರುವ ಸಾಮರ್ಥ್ಯವನ್ನು ಮತ್ತಷ್ಟು ವೃದ್ಧಿಸುವುದು, ಸಂಶೋಧನೆ ಮತ್ತು ಅಭಿವೃದ್ಧಿಗೆ ಉತ್ತೇಜನ ನೀಡುವುದು ಹಾಗೂ ಬಲಿಷ್ಠ ಮತ್ತು ಸಮಗ್ರ ಸೆಮಿಕಂಡಕ್ಟರ್ ಇಕೋಸಿಸ್ಟಂ ನಿರ್ಮಿಸುವುದು ರಾಜ್ಯ ಸರ್ಕಾರದ ಪ್ರಮುಖ ಆದ್ಯತೆಗಳಲ್ಲೊಂದಾಗಿದೆ. ಈ ನಿಟ್ಟಿನಲ್ಲಿ ಜಾಗತಿಕ ಮಟ್ಟದ ತಂತ್ರಜ್ಞಾನ ಸಂಸ್ಥೆಗಳ ಹೂಡಿಕೆಗಳು ಕರ್ನಾಟಕದ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಿವೆ ಎಂದು ಈ ಸಂದರ್ಭದಲ್ಲಿ ಸಚಿವರು ಹೇಳಿದರು.

ಅಪ್ಲೈಡ್ ಮೆಟೀರಿಯಲ್ಸ್‌ನಂತಹ ಜಾಗತಿಕ ತಂತ್ರಜ್ಞಾನ ಪಾಲುದಾರರೊಂದಿಗೆ ಕರ್ನಾಟಕ ನಿರಂತರವಾಗಿ ಕಾರ್ಯ ನಿರ್ವಹಿಸಲಿದ್ದು, ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಹೂಡಿಕೆ, ಸಂಶೋಧನೆ, ತಂತ್ರಜ್ಞಾನ ಅಭಿವೃದ್ಧಿ ಹಾಗೂ ಕೌಶಲ್ಯ ವೃದ್ಧಿಗೆ ಅಗತ್ಯವಾದ ಪರಿಸರವನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ ಸಚಿವರು ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಸೆಮಿಕಂಡಕ್ಟರ್ ಸಂಬಂಧಿತ ಚಟುವಟಿಕೆಗಳ ವಿಸ್ತರಣೆಯು ನೇರ ಹೂಡಿಕೆಗಳ ಜೊತೆಗೆ ಸಂಪೂರ್ಣ ಮೌಲ್ಯ ಸರಪಳಿಯಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ, ಇದರಿಂದ ಸಂಶೋಧನೆ ಮತ್ತು ಅಭಿವೃದ್ಧಿ, ತಂತ್ರಜ್ಞಾನ, ಪೂರೈಕೆ ಸರಪಳಿ ಹಾಗೂ ಸಂಬಂಧಿತ ಕೈಗಾರಿಕೆಗಳ ಬೆಳವಣಿಗೆಗೆ ಮತ್ತಷ್ಟು ವೇಗ ದೊರೆಯಲಿದೆ ಎಂದರು. ಕರ್ನಾಟಕವು ಜಾಗತಿಕ ತಂತ್ರಜ್ಞಾನ ಮತ್ತು ಸೆಮಿಕಂಡಕ್ಟರ್ ಉದ್ಯಮಗಳಿಗೆ ಪ್ರಮುಖ ತಾಣವಾಗಿ ಹೊರಹೊಮ್ಮುವ ನಿಟ್ಟಿನಲ್ಲಿ ತನ್ನ ಸಾಮರ್ಥ್ಯವನ್ನು ಮತ್ತಷ್ಟು ವಿಸ್ತರಿಸುತ್ತಿದ್ದು, ಅಪ್ಲೈಡ್ ಮೆಟೀರಿಯಲ್ಸ್‌ನಂತಹ ಪಾಲುದಾರರ ಸಹಭಾಗಿತ್ವವು ಈ ಪ್ರಯತ್ನಗಳಿಗೆ ಮತ್ತಷ್ಟು ಬಲ ನೀಡಲಿದೆ. ತುಮಕೂರಿನಲ್ಲಿ ಸಂಯೋಜಿತ ಗ್ರೀನ್ ಡೇಟಾ ಸೆಂಟರ್ ಸ್ಥಾಪನೆಯ ಪ್ರಸ್ತಾವನೆ ಸೇರಿದಂತೆ ಬೆಂಗಳೂರಿನಾಚೆಗೂ ಸುಸ್ಥಿರ ಡಿಜಿಟಲ್ ಮೂಲಸೌಕರ್ಯವನ್ನು ವಿಸ್ತರಿಸುವ ರಾಜ್ಯದ ವಿಶಾಲ ಯೋಜನೆಯೊಂದಿಗೆ ಸೆಮಿಕಂಡಕ್ಟರ್ ಇಕೋಸಿಸ್ಟಂ ಅಭಿವೃದ್ಧಿಯ ಪ್ರಯತ್ನಗಳು ಸಹ ಪೂರಕವಾಗಿವೆ ಎಂದರು.

# ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಮತ್ತೆ ಅಮಾನತು



■ ರಾಜ್ಯಪಾಲರ ಆದೇಶ

**ಬೆಂಗಳೂರು,ಆ.25:** ಅಧಿಕಾರ ದುರುಪಯೋಗ ಹಾಗೂ ಸ್ವಜನಪಕ್ಷಪಾತದ ಆರೋಪದಡಿ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಧ್ಯಕ್ಷ ಸ್ಥಾನದಿಂದ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತುಗೊಳಿಸಿ ರಾಜ್ಯಪಾಲರು ಹೊರಡಿಸಿದ್ದ ಆದೇಶವನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿತ್ತು. ಇದೀಗ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಮತ್ತೆ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತುಗೊಳಿಸಿದ್ದಾರೆ.

ಕೆಪಿಎಸ್‌ಸಿ ಅಧ್ಯಕ್ಷ ಹುದ್ದೆಯಿಂದ ಅಮಾನತುಗೊಳಿಸಿ ರಾಜ್ಯಪಾಲರು ಹೊರಡಿಸಿದ್ದ ಆದೇಶ ಪ್ರಶ್ನಿಸಿ ಶಿವಶಂಕರಪ್ಪ ಎಸ್. ಸಾಹುಕಾರ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠ, ಸಂವಿಧಾನದ 317(2)ನೇ ವಿಧಿಯ ಅಡಿ ಅಧಿಕಾರ ಚಲಾಯಿಸಿ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತುಪಡಿಸಿ ರಾಜ್ಯಪಾಲರು ಜುಲೈ 10ರಂದು ಹೊರಡಿಸಿದ್ದ ಆದೇಶವನ್ನು ರದ್ದುಪಡಿಸಿದ್ದು, ಈ ಆದೇಶದ ಪ್ರತಿ ದೊರೆತ 7 ದಿನಗಳ ಒಳಗೆ ಅರ್ಜಿದಾರರನ್ನು ಆಯೋಗದ ಅಧ್ಯಕ್ಷರ ಹುದ್ದೆಗೆ ಮರು ನಿಯೋಜಿಸಲು ಪ್ರತಿವಾದಿಗಳಿಗೆ ನಿರ್ದೇಶಿಸಿತ್ತು. ಆದರೆ ಹೈಕೋರ್ಟ್ ಆದೇಶದಂತೆ ರಾಜ್ಯಪಾಲರು ಸಚಿವ ಸಂಪುಟ ಸಭೆಯ ಅನುಮತಿ ಪಡೆದು ಇದೀಗ ಮತ್ತೆ ಅಮಾನತುಗೊಳಿಸಿದ್ದಾರೆ. ಇತ್ತೀಚೆಗೆ ನಡೆದ ಸಂಪುಟ ಸಭೆಯಲ್ಲಿ ರಾಜ್ಯಪಾಲರ ಮನವಿಯನ್ನು ಅನುಮೋದಿಸಿತ್ತು ಎಂದು ಲೋಕಭವನದ ಮೂಲಗಳು ತಿಳಿಸಿವೆ.

### ಡಿಸಿ ವಿರುದ್ಧ ಅವಹೇಳನಕಾರಿ ಹೇಳಿಕೆ

# ಬಿಜೆಪಿ ಮೇಲ್ಮನೆ ಸದಸ್ಯೆ ರವಿಕುಮಾರ್ ವಿರುದ್ಧ ಜಾಮೀನುರಹಿತ ವಾರಂಟ್

**ಬೆಂಗಳೂರು, ಆ.25:** ಕಲಬುರಗಿ ಜಿಲ್ಲಾಧಿಕಾರಿ ವಿರುದ್ಧ ನೀಡಿದ್ದ ಅವಹೇಳನಕಾರಿ ಹಾಗೂ ಕೋಮು ಪ್ರಚೋದಕ ಹೇಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಗೈರುಹಾಜರಾದ ಬಿಜೆಪಿ ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್ ವಿರುದ್ಧ ಬೆಂಗಳೂರಿನ 42ನೇ ಅಡಿಷನಲ್ ಚೀಫ್ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್



ಸಂದೀಪ್ ಪಾಟೀಲ್ ಅವರು, ಜಾಮೀನು ರಹಿತ ಬಂಧನ ವಾರಂಟ್ ಹೊರಡಿಸಿದ್ದಾರೆ. ಕಳೆದ ವರ್ಷ ಕಲಬುರಗಿಯಲ್ಲಿ ನಡೆದ ಪ್ರತಿಭಟನೆ ವೇಳೆ ಜಿಲ್ಲಾಧಿಕಾರಿ ಫೌಜಿಯಾ ತರನ್ನಮ್ ವಿರುದ್ಧ ರವಿಕುಮಾರ್ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಕೋರ್ಟ್ ನಿಂದ ಸಮನ್ಸ್ ಜಾರಿಯಾಗಿದ್ದರೂ ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ ಕೋರ್ಟ್ ಕಠಿಣ ಕ್ರಮ ಕೈಗೊಂಡಿದ್ದು, ಬಂಧನ ವಾರಂಟ್ ಹೊರಡಿಸಿದೆ.ಪ್ರಕರಣ ಸಂಬಂಧ ಕಲಬುರಗಿಯ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ರವಿಕುಮಾರ್ ತಮ್ಮ ವಿರುದ್ಧದ ಪ್ರಕರಣವನ್ನು ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಆದರೆ, ವಿಚಾರಣೆ ನಡೆಸಿದ್ದ ಹೈಕೋರ್ಟ್ ಪ್ರಕರಣಕ್ಕೆ ಮಧ್ಯಂತರ ತಡೆ ನೀಡಲು ನಿರಾಕರಿಸಿತ್ತು. ಅಧೀನ ನ್ಯಾಯಾಲಯದಿಂದ ಸಮನ್ಸ್ ಬಂದಿದ್ದರೂ ಕೋರ್ಟ್‌ಗೆ ಗೈರಾದ ಕಾರಣ ಈಗ ಎಸಿಜೆಎಂ ನ್ಯಾಯಾಲಯವು ಜಾಮೀನುರಹಿತ ಬಂಧನ ವಾರಂಟ್ ಹೊರಡಿಸಿದೆ.

# ರಸ್ತೆಬದಿ ವಾಹನ ನಿಲುಗಡೆಗೆ ಶುಲ್ಕ ಕೈಬಿಡಿ: ಸಚಿವ ರಾಮಲಿಂಗಾರೆಡ್ಡಿ ಮನವಿ



**ಬೆಂಗಳೂರು, ಆ.25:** ಬೆಂಗಳೂರಿನಲ್ಲಿ ರಸ್ತೆ ಬದಿ ವಾಹನ ನಿಲುಗಡೆಗೆ ಸಂಬಂಧಿಸಿದಂತೆ ಪ್ರಸ್ತಾಪಿಸಲಾಗಿರುವ ಹೊಸ ನಿಯಮಗಳು ಹಾಗೂ ವಾರ್ಷಿಕ 15 ರಿಂದ 25 ಸಾವಿರ ರೂ.ವರೆಗೆ ಪಾರ್ಕಿಂಗ್ ಶುಲ್ಕ ವಿಧಿಸುವ ಪ್ರಸ್ತಾವನೆಯನ್ನು ಮರುಪರಿಶೀಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಅವರಿಗೆ ಪತ್ರ ಬರೆದಿರುವ ಅವರು, ಬೆಂಗಳೂರಿನಲ್ಲಿ ವಾಹನಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರಸ್ತೆ ಬದಿ ಪಾರ್ಕಿಂಗ್‌ನಿಂದ ಉಂಟಾಗುತ್ತಿರುವ ಸಂಚಾರ ಸಮಸ್ಯೆಯನ್ನು ನಿಯಂತ್ರಿಸುವ ಅಗತ್ಯವಿದೆ. ಆದರೆ, ಈ ಸಂದರ್ಭದಲ್ಲಿ ಸಾಮಾನ್ಯ ನಾಗರಿಕರ ಆರ್ಥಿಕ ಪರಿಸ್ಥಿತಿಯನ್ನೂ ಪರಿಗಣಿಸುವುದು ಅತ್ಯಗತ್ಯ ಎಂದು ತಿಳಿಸಿದ್ದಾರೆ.

ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆ, ಅಡುಗೆ ಅನಿಲ, ಪೆಟ್ರೋಲ್, ಡೀಸೆಲ್, ಜಿಎಸ್ಟಿ ಹಾಗೂ ಟೋಲ್ ಸೇರಿದಂತೆ ವಿವಿಧ ವೆಚ್ಚಗಳ ಹೆಚ್ಚಳದಿಂದ ಮಧ್ಯಮ ವರ್ಗ ಮತ್ತು ಸಾಮಾನ್ಯ ಕುಟುಂಬಗಳು ಆರ್ಥಿಕ ಒತ್ತಡ ಎದುರಿಸುತ್ತಿವೆ. ಇಂತಹ ಸಂದರ್ಭದಲ್ಲಿ ವಾಹನ ಹೊಂದಿರುವವರಿಗೆ ಹೆಚ್ಚುವರಿಯಾಗಿ ವಾರ್ಷಿಕ 15 ರಿಂದ 25 ಸಾವಿರ ರೂ. ವರೆಗೆ ಪಾರ್ಕಿಂಗ್ ಶುಲ್ಕ ವಿಧಿಸುವುದು ಮತ್ತೊಂದು ಆರ್ಥಿಕ ಹೊರೆಯಾಗುವ ಸಾಧ್ಯತೆಯಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯ ಸರ್ಕಾರ ಸಾಮಾನ್ಯ ಜನರ ಜೀವನಮಟ್ಟ ಸುಧಾರಿಸಲು ವಿವಿಧ ಜನಪರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಹೀಗಾಗಿ ನಗರ ಪ್ರದೇಶಗಳಲ್ಲಿ ವಾಸಿಸುವ ಕುಟುಂಬಗಳ ಮೇಲೆ ಮತ್ತೊಂದು ಅನಿವಾರ್ಯ ಆರ್ಥಿಕ ಹೊರೆ ಬೀಳದಂತೆ ಎಚ್ಚರಿಕೆ ವಹಿಸುವುದು ಸೂಕ್ತ ಎಂದು ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಬೆಂಗಳೂರು ನಗರದ ಹಳೆಯ ಕಟ್ಟಡಗಳು ಹಾಗೂ ಹಳೆಯ ವಸತಿ ಪ್ರದೇಶಗಳಲ್ಲಿ ಇಂದಿನ ವಾಹನಗಳ ಸಂಖ್ಯೆಗೆ ಅನುಗುಣವಾಗಿ ಪಾರ್ಕಿಂಗ್ ಸೌಲಭ್ಯ ಕಲ್ಪಿಸುವುದು ಬಹುತೇಕ ಸಂದರ್ಭಗಳಲ್ಲಿ ಸಾಧ್ಯವಾಗುತ್ತಿಲ್ಲ. ಮಧ್ಯಮ ವರ್ಗದ ಅನೇಕ ಕುಟುಂಬಗಳು ಅಪಾರ್ಟ್‌ಮೆಂಟ್‌ಗಳು ಅಥವಾ ಸೀಮಿತ ಜಾಗದ ಮನೆಗಳಲ್ಲಿ ವಾಸಿಸುತ್ತಿದ್ದು, ವಾಹನಗಳನ್ನು ಮನೆಯೊಳಗೆ ನಿಲ್ಲಿಸಲು ಅಗತ್ಯ ಜಾಗದ ಕೊರತೆ ಎದುರಿಸುತ್ತಿವೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ಹೊಸ ಕಟ್ಟಡಗಳ ನಿರ್ಮಾಣ ನಿಯಮಗಳಲ್ಲಿ ಪಾರ್ಕಿಂಗ್ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡುತ್ತಿರುವುದನ್ನು ಸ್ವಾಗತಿಸಿರುವ ಅವರು, ಈಗಾಗಲೇ ನಿರ್ಮಾಣಗೊಂಡಿರುವ ಹಳೆಯ ಕಟ್ಟಡಗಳಿಗೆ ಇದೇ ಮಾನದಂಡಗಳನ್ನು ಅನ್ವಯಿಸುವುದು ಕಷ್ಟಕರವಾಗಿದೆ ಎಂದಿದ್ದಾರೆ.

ಅಕ್ರಮ ಹಾಗೂ ದೀರ್ಘಾವಧಿಯ ರಸ್ತೆ ಬದಿ ಪಾರ್ಕಿಂಗ್ ನಿಯಂತ್ರಿಸುವ ಅಗತ್ಯವಿದೆ. ಆದರೆ, ನಿಯಮಿತವಾಗಿ ವಾಹನ ಬಳಸುವ ಹಾಗೂ ತಮ್ಮ ಕಟ್ಟಡದೊಳಗೆ ಪಾರ್ಕಿಂಗ್ ಸೌಲಭ್ಯ ಹೊಂದಿರದ ಸಾಮಾನ್ಯ ಕುಟುಂಬಗಳಿಗೆ ವಿನಾಯಿತಿ ನೀಡುವ ಬಗ್ಗೆಯೂ ಪರಿಗಣಿಸಬೇಕು ಎಂದು ಮನವಿ ಮಾಡಿದ್ದಾರೆ.

ಸಾರ್ವಜನಿಕ ಹಿತದೃಷ್ಟಿಯಿಂದ ಬೆಂಗಳೂರಿನ ಶಾಸಕರು, ಸಂಘ–ಸಂಸ್ಥೆಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳುವುದು ಸೂಕ್ತ ಎಂದು ಸಿಎಂಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

# ನೈಸ್ ಹಗರಣ; ಜೆಡಿಎಸ್ ನಿಯೋಗದಿಂದ ರಾಜ್ಯಪಾಲರಿಗೆ ದೂರು

**ಬೆಂಗಳೂರು, ಆ.25:** ಮೈಸೂರು ಕಾರಿಡಾರ್ ಯೋಜನೆಯಲ್ಲಿ ನೈಸ್ ಸಂಸ್ಥೆ ನಡೆಸಿರುವ ಅಕ್ರಮ ಮತ್ತು ವಂಚನೆ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಜೆಡಿಎಸ್ ನಿಯೋಗ ಮಂಗಳವಾರ



ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರಿಗೆ ದೂರು ಸಲ್ಲಿಸಿದೆ. ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ನೇತೃತ್ವದಲ್ಲಿ ಜೆಡಿಎಸ್ ಶಾಸಕರು ಹಾಗೂ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಲೋಕಭವನದಲ್ಲಿ ರಾಜ್ಯಪಾಲರನ್ನು ಭೇಟಿಮಾಡಿ, ಮನವಿ ಸಲ್ಲಿಸಿದರು.

ನಂತರ ಮಾಧ್ಯಮಗಳ ಜೊತೆ ಮಾತನಾಡಿದ ನಿಖಿಲ್ ಕುಮಾರ ಸ್ವಾಮಿ, ನೈಸ್ ಯೋಜನೆ ಅಕ್ರಮದ ಬಗ್ಗೆ ಸರ್ಕಾರಕ್ಕೆ ನಾವು ಎರಡು ವಾರ ಗಡುವು ಕೊಡ್ತೀವಿ. ಸರ್ಕಾರ ನೈಸ್ ಯೋಜನೆಯನ್ನು ವಶಪಡಿಸಿಕೊಳ್ಳದೇ ಹೋದ್ರೆ ಜೆಡಿಎಸ್ ಉಗ್ರ ಹೋರಾಟ ಮಾಡಲಿದೆ. ನೈಸ್ ಅಕ್ರಮದ ಬಗ್ಗೆ ಜಾಗೃತಿ ಮೂಡಿಸೋ ಕೆಲಸ ಮಾಡ್ತೀವಿ. ಗುರುವಾರ, ಶುಕ್ರವಾರ ವೆಬ್ ಸೈಟ್ ರಿಲೀಸ್ ಮಾಡ್ತೀವಿ. ಅದರಲ್ಲಿ ಎಲ್ಲಾ ದಾಖಲಾತಿ ಜನರಿಗೆ ಸಿಗೋ ಹಾಗೆ ಮಾಡ್ತೀವಿ ಎಂದು ಹೇಳಿದರು.

ಹೈಕೋರ್ಟ್ ನೈಸ್ ಬಗ್ಗೆ ಐತಿಹಾಸಿಕ ತೀರ್ಪು ಕೊಟ್ಟಿದೆ. ನೈಸ್ ಯೋಜನೆ ದೊಡ್ಡ ಹಗರಣ ಎಂದು ಕೋರ್ಟ್ ಹೇಳಿದೆ. ರೈತರ ಜಮೀನು ಸ್ವಾಧೀನ ಮಾಡಿಕೊಂಡು ರೈತರಿಗೆ ಪರಿಹಾರ ಕೊಟ್ಟಿಲ್ಲ. ಭೂಸ್ವಾಧೀನ ಅಂತಿಮ ಅಧಿಸೂಚನೆ ಕೋರ್ಟ್ ರದ್ದು ಮಾಡಿದೆ. ಕೋಟ್ಯಂತರ ರೂ. ಟೋಲ್ ಸಂಗ್ರಹ ಮಾಡ್ತಾ ಇದ್ದಾರೆ. ಸರ್ಕಾರ ಕೂಡಲೇ ಮಧ್ಯ ಪ್ರವೇಶ ಮಾಡಬೇಕು. ನೈಸ್ ಯೋಜನೆ ಸರ್ಕಾರ ಟೇಕ್ ಓವರ್ ಮಾಡಬೇಕು ಎಂದು ಕೋರ್ಟ್ ಹೇಳಿದ್ದರೂ ಸರ್ಕಾರ ಮೌನಕ್ಕೆ ಶರಣಾಗಿದೆ. ಈ ಬಗ್ಗೆ ರಾಜ್ಯಪಾಲರಿಗೆ ಮನವಿ ಮಾಡಿದ್ದೇವೆ. ಸರ್ಕಾರಕ್ಕೆ ಚಾಟಿ ಬೀಸಬೇಕು ಅಂತ ಮನವಿ ಮಾಡಿದ್ದೇವೆ ಎಂದು ಹೇಳಿದರು.

ನಾಡಿನ ಯಾವುದೇ ವಿಷಯ ಬಂದಾಗ ಬಿಜೆಪಿ ಜೊತೆ ಒಟ್ಟಾಗಿ ಹೋಗ್ತೀವಿ. ಸಿದ್ದರಾಮಯ್ಯ ಅವರೇ ಅಕ್ರಮ ಆಗಿರೋದು ಒಪ್ಪಿಕೊಂಡಿದ್ದಾರೆ. ಇಷ್ಟಾದ್ರೂ ಆರೋಪಿತ ವ್ಯಕ್ತಿಯನ್ನು ಸಚಿವನಾಗಿ ಮಾಡಲಾಗಿದೆ. ಬಿಜೆಪಿ ಹೋರಾಟಕ್ಕೆ ನಮ್ಮ ಬೆಂಬಲ ಇದೆ ಎಂದು ಹೇಳಿದರು. ಕುಮಾರಸ್ವಾಮಿ ಯಾವತ್ತು ದಾಖಲೆ ಇಲ್ಲದೆ ಮಾತಾಡಲ್ಲ. ಬಿಡದಿ ಪ್ರಾಜೆಕ್ಟ್‌ನಲ್ಲಿ ಹಿಟ್ ಆಂಡ್ ರನ್ ಮಾಡಿದ್ದು ಯಾರು, ಕುಮಾರಸ್ವಾಮಿ ಅವರು ಬಿಡದಿ ವಿಚಾರದಲ್ಲಿ ಚರ್ಚೆಗೆ ಕರೆದಾಗ ಸಿಎಂ ಏಕೆ ಬರಲಿಲ್ಲ. ಕುಮಾರಸ್ವಾಮಿ ಹೋಗಿದ್ರು. ಸಿಎಂ ಯಾಕೆ ಭೈರಮಂಗಲಕ್ಕೆ ಬರಲಿಲ್ಲ. ಹಾಗಾದ್ರೆ ಹಿಟ್ ಆಂಡ್ ರನ್ ಮಾಡಿದ್ದು ಯಾರು ಎಂದು ಪ್ರಶ್ನಿಸಿದರು.

#### ಸರ್ಕಾರವೇ ನೈಸ್ ಯೋಜನೆಯನ್ನು ವಶಕ್ಕೆ ಪಡೆಯಲಿ

**ನೈಸ್ ಯೋಜನೆಯನ್ನು ಸರ್ಕಾರವೇ ವಶಕ್ಕೆ ಪಡೆದು, ಟೋಲ್ ಸಂಗ್ರಹವನ್ನು ಸ್ಥಗಿತಗೊಳಿಸಬೇಕು ಮತ್ತು ಭೂಮಿ ಕಳೆದುಕೊಂಡ ರೈತರಿಗೆ ಬಾಕಿ ಪರಿಹಾರ ನೀಡಬೇಕು ಎಂಬ ಆಗ್ರಹದೊಂದಿಗೆ ಜೆಡಿಎಸ್ ನಿಯೋಗವು ಮಂಗಳವಾರ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ.**

# ಬೆಳೆವಿಮೆ ನೋಂದಣಿ, ಪ್ರೀಮಿಯಂ ಮೊತ್ತ ಪಾವತಿ ಅವಧಿ ಆಗಸ್ಟ್ 31ರವರೆಗೆ ವಿಸ್ತರಣೆ

#### ಪ್ರಮುಖ ವಿಮಾ ಸಂಸ್ಥೆಗಳಿಂದ ಅವಧಿ ವಿಸ್ತರಣೆ ಸಮ್ಮತಿ

#### ನಿಗದಿತ ಅವಧಿಯೊಳಗೆ ನೋಂದಾಯಿಸಿಕೊಳ್ಳುವ ರೈತರಿಗೆ ನಿಯಮಾನುಸಾರ ಸಹಾಯಧನ



**ಬೆಂಗಳೂರು, ಆ.25:** ರಾಜ್ಯದ ರೈತರ ಹಿತದೃಷ್ಟಿಯಿಂದ 2026ನೇ ಸಾಲಿನ ಖಾರೀಫ್ ಋತುವಿನ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಸಾಲಪಡೆದ ರೈತರಿಗೆ ಬೆಳೆವಿಮೆ ನೋಂದಣಿ ಹಾಗೂ ಪ್ರೀಮಿಯಂ ಪಾವತಿಸಲು ನೀಡಲಾಗಿದ್ದ ಅಂತಿಮ ಅವಧಿಯನ್ನು ಆಗಸ್ಟ್ 31ರ ವರೆಗೆ ವಿಸ್ತರಿಸಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಆದೇಶ ಹೊರಡಿಸಿದೆ.

ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಆಯುಕ್ತರು ಸಲ್ಲಿಸಿದ್ದ ಮನವಿಯನ್ನು ಪರಿಗಣಿಸಿದ ಕೇಂದ್ರ ಸರ್ಕಾರ, ರಾಜ್ಯದಲ್ಲಿ 2026ನೇ ಸಾಲಿನ ಖಾರೀಫ್ ಋತುವಿನ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಸಾಲಪಡೆದ ರೈತರಿಗೆ ಬೆಳೆ ವಿಮೆ ನೋಂದಾಯಿಸಿಕೊಳ್ಳಲು ಹಾಗೂ ಪ್ರೀಮಿಯಂ ಮೊತ್ತ ಪಾವತಿಸಲು ಹೆಚ್ಚುವರಿ ಕಾಲಾವಕಾಶ ಕಲ್ಪಿಸಿದೆ.

ರಾಜ್ಯದಲ್ಲಿ ವಿಮಾ ಯೋಜನೆಯ ಅಧಿಸೂಚನೆ ಹೊರಡಿಸುವಲ್ಲಿ ಉಂಟಾದ ವಿಳಂಬ, ವಿವಿಧ ಜಿಲ್ಲೆಗಳಲ್ಲಿ ಕಂಡುಬಂದ ಅಸಹಜ ಹವಾಮಾನ ವೈಪರೀತ್ಯ ಹಾಗೂ ತಾಂತ್ರಿಕ ಮತ್ತು ಕಾರ್ಯಾಚರಣೆಯ ಸವಾಲುಗಳಿಂದಾಗಿ ಹೆಚ್ಚಿನ ಸಂಖ್ಯೆಯ ರೈತರಿಗೆ ನಿಗದಿತ ಅವಧಿಯಲ್ಲಿ ನೋಂದಾಯಿಸಿಕೊಳ್ಳಲು ಸಾಧ್ಯವಾಗಿರಲಿಲ್ಲ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿತ್ತು.

ಈ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಪ್ರಮುಖ ವಿಮಾ ಸಂಸ್ಥೆಗಳಾದ ಎಸ್‌ಬಿಐ ಜನರಲ್ ಇನ್ಶ್ಯೂರೆನ್ಸ್, ಇಂಡಸ್‌ಇಂಡ್ ಜನರಲ್ ಇನ್ಶ್ಯೂರೆನ್ಸ್, ಇಫ್ಕೋ ಟೋಕಿಯೋ ಜನರಲ್ ಇನ್ಶ್ಯೂರೆನ್ಸ್ ಹಾಗೂ ಅಗ್ರಿಕಲ್ಚರ್ ಇನ್ಶ್ಯೂರೆನ್ಸ್ ಕಂಪನಿ ಆಫ್ ಇಂಡಿಯಾ ಸಂಸ್ಥೆಗಳು ಸಾಲಗಾರ ರೈತರ ನೋಂದಣಿ ಅವಧಿ ವಿಸ್ತರಣೆಗೆ ಸಮ್ಮತಿ ಸೂಚಿಸಿವೆ.

ವಿಸ್ತರಿತ ಅವಧಿಯಲ್ಲಿ ನೋಂದಾಯಿಸಿಕೊಳ್ಳುವ ಅರ್ಹ ರೈತರಿಗೆ ನಿಯಮಾನುಸಾರ ಕೇಂದ್ರ ಸರ್ಕಾರದ ಪಾಲಿನ ಪ್ರೀಮಿಯಂ ಸಹಾಯಧನವೂ ಲಭ್ಯವಾಗಲಿದೆ.

ಈ ಅವಧಿ ವಿಸ್ತರಣೆಯು ರಾಜ್ಯದ ವಿವಿಧ ಜಿಲ್ಲೆಗಳ ನಿರ್ದಿಷ್ಟ ನೀರಾವರಿ ಹಾಗೂ ಮಳೆಯಾಶ್ರಿತ ಬೆಳೆಗಳಿಗೆ ಅನ್ವಯವಾಗಲಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಕೋಲಾರ, ಮೈಸೂರು, ಹಾಸನ, ಮಂಡ್ಯ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಭತ್ತ, ರಾಗಿ, ಮೆಕ್ಕೆಜೋಳ ಮತ್ತು ಹುರುಳಿ ಬೆಳೆಗಳಿಗೆ ಅನ್ವಯವಾಗಲಿದೆ.

ಬಾಗಲಕೋಟೆ, ಬಳ್ಳಾರಿ, ರಾಯಚೂರು ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಈರುಳ್ಳಿ, ಒಣ ಮೆಣಸಿನಕಾಯಿ, ಸೂರ್ಯಕಾಂತಿ, ಕಡಲೆಕಾಯಿ, ನವಣೆ, ಜೋಳ, ಬಾಜ್ರಾ ಹಾಗೂ ಹುರುಳಿ ಬೆಳೆಗಳಿಗೆ ಅನ್ವಯವಾಗಲಿದೆ.

ಚಿಕ್ಕಮಗಳೂರು, ಧಾರವಾಡ, ತುಮಕೂರು, ಉತ್ತರ ಕನ್ನಡ, ವಿಜಯನಗರ ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಭತ್ತ, ರಾಗಿ, ಸಾಮೆ, ನವಣೆ ಹಾಗೂ ಒಣ ಮೆಣಸಿನಕಾಯಿ ಬೆಳೆಗಳಿಗೆ ಅನ್ವಯವಾಗಲಿದೆ.

ವಿಸ್ತರಿತ ಅವಧಿಯಲ್ಲಿ ಯಾವುದೇ ದುರುಪಯೋಗ ಅಥವಾ ಅಕ್ರಮಗಳಿಗೆ ಆಸ್ಪದವಾಗದಂತೆ ರಾಜ್ಯ ಸರ್ಕಾರ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಗರಿಷ್ಠ ಸಂಖ್ಯೆಯ ಅರ್ಹ ಸಾಲಗಾರ ರೈತರು ಯೋಜನೆಯಡಿ ನೋಂದಾಯಿಸಿಕೊಳ್ಳುವಂತೆ ಎಲ್ಲಾ ಮಾಧ್ಯಮಗಳು ಹಾಗೂ ನೋಂದಣಿ ಕೇಂದ್ರಗಳ ಮೂಲಕ ವ್ಯಾಪಕ ಜಾಗೃತಿ ಮೂಡಿಸುವಂತೆ ಕೇಂದ್ರ ಸರ್ಕಾರ ನಿರ್ದೇಶಿಸಿದೆ.

ಅರ್ಹ ರೈತರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಆಗಸ್ಟ್ 31ರ ರೊಳಗೆ ಬೆಳೆ ವಿಮೆಗೆ ನೋಂದಾಯಿಸಿಕೊಂಡು ಪ್ರೀಮಿಯಂ ಪಾವತಿಸುವಂತೆ ಕೃಷಿ ಇಲಾಖೆ ಮನವಿ ಮಾಡಿದೆ.

# ಕೈಗಾರಿಕೆ – ಶಿಕ್ಷಣ ಸಂಸ್ಥೆಗಳ ನಡುವೆ ಬಲವಾದ ಸಹಭಾಗಿತ್ವ ಅಗತ್ಯ: ಶರಣಪ್ರಕಾಶ ಪಾಟೀಲ ಪ್ರತಿಪಾದನೆ

**ಬೆಂಗಳೂರು,ಆ.25:** ಕೈಗಾರಿಕೆಗಳ ಅಗತ್ಯತೆಗಳು ಮತ್ತು ಸಲಹೆಗಳನ್ನು ಪಠ್ಯಕ್ರಮದಲ್ಲಿ ಅಳವಡಿಸಿಕೊಳ್ಳಬೇಕು. ಇದರಿಂದ ವಿದ್ಯಾರ್ಥಿಗಳಿಗೆ ಉದ್ಯಮ ಕ್ಷೇತ್ರಕ್ಕೆ ಅಗತ್ಯವಿರುವ ಕೌಶಲ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ. ಪ್ರತಿವರ್ಷ ಒಂದು ಲಕ್ಷಕ್ಕೂ ಹೆಚ್ಚು ಪದವೀಧರರು ಶಿಕ್ಷಣ ಪೂರ್ಣಗೊಳಿಸಿ ಹೊರಬರುತ್ತಿದ್ದು, ಅವರಲ್ಲಿ ಕೇವಲ ಸುಮಾರು ಶೇ.15ರಿಂದ 20ರಷ್ಟು ಮಂದಿಗೆ ಮಾತ್ರ ಉದ್ಯೋಗ ದೊರೆಯುತ್ತಿದೆ. ಈ ಪ್ರಮಾಣ ಹೆಚ್ಚಾಗಬೇಕು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವ ಶರಣಪ್ರಕಾಶ ಪಾಟೀಲ ಹೇಳಿದ್ದಾರೆ.

ಶಿಕ್ಷಣ ಸಂಸ್ಥೆಗಳು ಉದ್ಯೋಗಾವ ಕಾಶಗಳನ್ನು ಹೆಚ್ಚಿಸಲು ತಮ್ಮಿಂದಾದಷ್ಟು ಪ್ರಯತ್ನಿಸುತ್ತಿದ್ದರೂ, ಬದಲಾಗುತ್ತಿರುವ ಉದ್ಯೋಗ ಮಾರುಕಟ್ಟೆಯ ಅಗತ್ಯಗಳಿಗೆ ಅನುಗುಣವಾಗಿ ಪಠ್ಯಕ್ರಮದಲ್ಲಿ ಅಗತ್ಯ ಬದಲಾವಣೆಗಳನ್ನು ತರುವುದು ಅತ್ಯಂತ ಮುಖ್ಯವಾಗಿದೆ ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಖಿಲ ಭಾರತ ತಾಂತ್ರಿಕ ಪರಿಷತ್ತಿನ ಅಧ್ಯಕ್ಷ ರೊಂದಿಗೆ ಚರ್ಚಿಸಿರುವುದಾಗಿ ತಿಳಿಸಿದರು

ಎಫ್‌ಕೆಸಿಸಿಐ ಉದ್ಯಮ–ಸಂಸ್ಥೆ ನಾಯಕರ ಸಮಾವೇಶ 2026ರಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ದೇಶದ ಬೇರೆಡೆ ಸುಲಭವಾಗಿ ದೊರೆಯದಂತಹ ಅತ್ಯುತ್ತಮ ಪ್ರತಿಭಾ ಸಂಪನ್ಮೂಲವಿದೆ. ಕರ್ನಾಟಕವು ತಂತ್ರಜ್ಞಾನ, ಉತ್ಪಾದನೆ, ಲೈಫ್ ಸೈನ್ಸಸ್, ಎಲೆಕ್ಟ್ರಿಕ್ ಮೊಬಿಲಿಟಿ, ಏರೋಸ್ಪೇಸ್ ಹಾಗೂ ಹಸಿರು ಶಕ್ತಿ ಸೇರಿದಂತೆ ಹಲವು ಹೊಸಯುಗದ ಕ್ಷೇತ್ರಗಳಲ್ಲಿ ದೇಶದ ಬೆಳವಣಿಗೆಯಲ್ಲಿ ಮುಂಚೂಣಿಯಲ್ಲಿದೆ. ಆದರೆ ಈ ಅವಕಾಶಗಳನ್ನು ಬಳಸಿಕೊಳ್ಳಲು ಯುವಜನರನ್ನು ಅಗತ್ಯ ಕೌಶಲ್ಯಗ ಳೊಂದಿಗೆ ಸಜ್ಜುಗೊಳಿಸುವುದು ಅತ್ಯಂತ ಮುಖ್ಯವಾಗಿದೆ. ಶಿಕ್ಷಣ, ಕೌಶಲ್ಯ ಮತ್ತು ಉದ್ಯೋಗದ ನಡುವಿನ ಅಂತರವನ್ನು ಕಡಿಮೆ ಮಾಡುವ ಮೂಲಕ ಯುವಜನರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಕಲ್ಪಿಸಬೇಕು. 'ಶಿಕ್ಷಣ, ಕೌಶಲ್ಯ ಮತ್ತು ಉದ್ಯೋಗವನ್ನು ಬೆಸೆಯುವುದು' ಸಮಾವೇಶದ ಪ್ರಮುಖ ಆಶಯ ವಾಗಿದ್ದು, ಶಿಕ್ಷಣ ಸಂಸ್ಥೆಗಳು ಕಲಿಸುವ ಕೌಶಲ್ಯಗಳು ಮತ್ತು ಉದ್ಯಮಗಳಿಗೆ ಅಗತ್ಯವಿರುವ ಕೌಶಲ್ಯಗಳ ನಡುವಿನ ಅಂತರವನ್ನು ಕಡಿಮೆ ಮಾಡಬೇಕಿದೆ ಎಂದು ಹೇಳಿದರು.

ಕರ್ನಾಟಕ ಕೌಶಲ್ಯಾಭಿವೃದ್ಧಿ ಪ್ರಾಧಿಕಾರ ಹಾಗೂ ಇಲಾಖೆಯ ವಿವಿಧ ಉಪಕ್ರಮಗಳ ಮೂಲಕ ಕೌಶಲ್ಯಾಭಿವೃದ್ಧಿಯನ್ನು ಪ್ರತ್ಯೇಕ ಯೋಜನೆಯಾಗಿ ನೋಡದೆ, ಸಮಗ್ರ ಪರಿಸರ ವ್ಯವಸ್ಥೆಯಾಗಿ ರೂಪಿಸಲಾ ಗುತ್ತಿದೆ. ಉದ್ಯಮಗಳು ಪಠ್ಯಕ್ರಮ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು, ಶಿಕ್ಷಣ ಸಂಸ್ಥೆಗಳು ಅಗತ್ಯ ಕೌಶಲ್ಯಗಳನ್ನು ಬೋಧಿಸಬೇಕು ಹಾಗೂ ಸರ್ಕಾರ ಅಗತ್ಯ ಮೂಲಸೌಕರ್ಯ ಮತ್ತು ನೀತಿ ಚೌಕಟ್ಟನ್ನು ಒದಗಿಸಬೇಕು ಎಂದರು.



ಇದೇ ವೇದಿಕೆಯಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ ಅಜಯ್ ಸಿಂಗ್ ಮಾತನಾಡಿ, ಪ್ರತಿಭೆ ವಿಶ್ವವ್ಯಾಪಿ ಯಾಗಿದ್ದರೂ ಅವಕಾಶಗಳು ಎಲ್ಲರಿಗೂ ಸಮಾನವಾಗಿ ಲಭ್ಯವಾಗುತ್ತಿಲ್ಲ. ಈ ಅಂತರವನ್ನು ಉತ್ತಮ ನೀತಿಗಳು ಮತ್ತು ಪರಿಣಾಮಕಾರಿ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಮೂಲಕ ತುಂಬುವ ಅಗತ್ಯವಿದೆ ಎಂದು ಹೇಳಿದರು.

ಬೆಂಗಳೂರು ಸುಮಾರು 67,000 ನೋಂದಾಯಿತ ಐಟಿ ಮತ್ತು ಟೆಕ್ ಕಂಪನಿಗಳ ತವರೂರಾಗಿದೆ. ನಗರದ ಐಟಿ ಮತ್ತು ತಂತ್ರಜ್ಞಾನ ವಲಯವು ನೇರ ಹಾಗೂ ಪರೋಕ್ಷವಾಗಿ ಸುಮಾರು 10 ಲಕ್ಷದಿಂದ 25 ಲಕ್ಷ ಜನರಿಗೆ ಉದ್ಯೋಗಾವಕಾಶಗಳನ್ನು ಒದಗಿಸುತ್ತಿದೆ. ಈ ಬಲವನ್ನು ರಾಜ್ಯದ ಕೌಶಲ್ಯಾಭಿವೃದ್ಧಿ ಮತ್ತು ಶಿಕ್ಷಣ ವ್ಯವಸ್ಥೆಯೊಂದಿಗೆ ಮತ್ತಷ್ಟು ಪರಿಣಾಮ ಕಾರಿಯಾಗಿ ಜೋಡಿಸುವ ಅಗತ್ಯವಿದೆ ಎಂದು ಹೇಳಿದರು.

ಕರ್ನಾಟಕದ ಶಿಕ್ಷಣ ಸಂಸ್ಥೆಗಳು ಕೇವಲ ಉದಯೋನ್ಮುಖ ತಂತ್ರಜ್ಞಾನ ಗಳನ್ನು ಬೋಧಿಸುವ ಕೇಂದ್ರಗಳಾಗಿರದೆ, ಅವುಗಳ ಪರೀಕ್ಷಾ ಶಿಬಿರಗಳಾಗಬೇಕು. ವಿದ್ಯಾರ್ಥಿಗಳು ಎಂಎಸ್‌ಎಂಇಗಳು, ರೈತರು, ಸಾರ್ವಜನಿಕ ಸೇವೆಗಳು ಮತ್ತು ಸ್ಥಳೀಯ ಸಮುದಾಯಗಳು ಎದುರಿಸುತ್ತಿರುವ ನೈಜ ಸಮಸ್ಯೆಗಳ ಪರಿಹಾರಕ್ಕಾಗಿ ತಂತ್ರಜ್ಞಾನವನ್ನು ಬಳಸುವಂತಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಕಾಲೇಜಿನ ಪ್ರಯೋಗಾಲಯದಲ್ಲಿ ಅಭಿವೃದ್ಧಿ ಪಡಿಸುವ ಪರಿಹಾರಗಳು ಅಲ್ಲಿಯೇ ಸೀಮಿತವಾಗದೆ, ಕಾರ್ಖಾನೆ ಗಳು, ಸ್ಟಾರ್ಟ್‌ಅಪ್‌ಗಳು ಹಾಗೂ ಸರ್ಕಾರಿ ಯೋಜನೆಗಳವರೆಗೆ ತಲುಪುವಂತಾಗ ಬೇಕು. ಅಂತಹ ಪರಿಹಾರಗಳೇ ಸಮಾಜಕ್ಕೆ ಪ್ರಯೋಜನವನ್ನು ತಂದುಕೊಡಬಲ್ಲವು.

ಇದೇ ವೇಳೆ, ಕೌಶಲ್ಯಾಭಿವೃದ್ಧಿ ಕ್ಷೇತ್ರದಲ್ಲಿ ನೀಡಲಾಗುತ್ತಿರುವ ಉತ್ಕೃಷ್ಟ ಪ್ರಶಸ್ತಿಗಳು ಕೇವಲ ಸಾಧನೆಗೆ ನೀಡುವ ಗೌರವವಾಗಿರದೆ, ಕೌಶಲ್ಯಾಭಿವೃದ್ಧಿಯನ್ನು ಅನುಸರಣೆಯ ಕರ್ತವ್ಯವಾಗಿ ನೋಡದೆ, ದೀರ್ಘಕಾಲೀನ ಬದ್ಧತೆಯಾಗಿ ಮುನ್ನಡೆಸುತ್ತಿರುವ ಕಾರ್ಪೊರೇಟ್ ಸಂಸ್ಥೆಗಳು, ಎಂಎಸ್‌ಎಂಇಗಳು, ಪಿಎಸ್ಯುಗಳು, ಸ್ಟಾರ್ಟ್‌ಅಪ್‌ಗಳು ಹಾಗೂ ಶಿಕ್ಷಣ ಸಂಸ್ಥೆಗಳನ್ನು ಗುರುತಿಸುವ ಮಹತ್ವದ ವೇದಿಕೆಯಾಗಿವೆ ಎಂದು ಹೇಳಿದರು.



ರೈತ ಮುಖಂಡರಾದ ಬಡಗಲಪುರ ನಾಗೇಂದ್ರ, ಚುಕ್ಕಿ ನಂಜುಂಡಸ್ವಾಮಿ, ನಟ ಪ್ರಕಾಶ್‌ರಾಜ್, ಹಿರಿಯ ಭ್ರಷ್ಟಾಚಾರ ವಿರೋಧಿ ಹೋರಾಟಗಾರ ಸಾ.ರಾ.ಹಿರೇಮಠ್ ಮತ್ತಿತರರು ಸಂಯುಕ್ತ ಹೋರಾಟ ಕರ್ನಾಟಕ ಹಾಗೂ ಬೈರಮಂಗಲ–ಕಂಚುಗಾರನಹಳ್ಳಿ ಹೋರಾಟ ಸಮಿತಿ ವತಿಯಿಂದ ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಧರಣಿ ನಡೆಸಲಾಯಿತು.

## ಕೆಪಿಎಸ್ ನೇಮಕಾತಿ ಅಕ್ರಮ ವಿರೋಧಿಸಿ ಎಬಿವಿಪಿ ಪ್ರತಿಭಟನೆ

# ಮಹಿಳಾ ಪ್ರತಿಭಟನಾಕಾರರನ್ನು ಎಳೆದಾಡಿದ ಪೊಲೀಸರು, ಮಾಧ್ಯಮದವರ ಮೇಲೂ ಹರಿಹಾಯ್ದ ಆರಕ್ಷಕರು

**ಬೆಂಗಳೂರು, ಆ.25:** ಕರ್ನಾಟಕ ಲೋಕಸೇವಾ ಆಯೋಗ ನೇಮಕಾತಿಯಲ್ಲಿ ನಡೆಯುತ್ತಿರುವ ನಿರಂತರ ಅಕ್ರಮ ವಿರುದ್ಧ ಬೆಂಗಳೂರಿನಲ್ಲಿ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ತು ನೇತೃತ್ವದಲ್ಲಿ ಮಂಗಳವಾರ ಪ್ರತಿಭಟನೆ ನಡೆಯಿತು. ಈ ವೇಳೆ ಪೊಲೀಸರು ಕುರಿಗಳನ್ನು ಎಳೆದಾಡಿದಂತೆ ಮಹಿಳಾ ಪ್ರತಿಭಟನಾ ಕಾರರನ್ನು, ವಿದ್ಯಾರ್ಥಿನಿಯರನ್ನು ಎಳೆದಾಡಿದ್ದು ಕಂಡುಬಂತು. ಇದನ್ನು ಪ್ರಶ್ನಿಸಿದ ಮಾಧ್ಯಮದವರ ಮೇಲೂ ಸ್ವತಃ ಉನ್ನತ ಪೊಲೀಸ್ ಅಧಿಕಾರಿಗಳು ದರ್ಪ ಮೆರೆದ ಘಟನೆ ನಡೆಯಿತು.




ವಿದ್ಯಾರ್ಥಿಗಳ ಪ್ರತಿಭಟನೆಗೆ ಬೆಂಗಳೂರಿನ ಸ್ವಾತಂತ್ರ ಉದ್ಯಾನದಲ್ಲಿ ಅವಕಾಶ ನೀಡಿರಲಿಲ್ಲ. ಹೀಗಾಗಿ ಅವರೆಲ್ಲ ನಗರದ ರೇಸ್‌ಕೋರ್ಸ್ ರಸ್ತೆ ಕಡೆಗಿನ ಮೌರ್ಯ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಕೆಪಿಎಸ್‌ಸಿ ಅಕ್ರಮ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಆಗ್ರಹಿಸಿದರು. ಎಬಿವಿಪಿ ಕಾರ್ಯ ಕರ್ತರು, ವಿದ್ಯಾರ್ಥಿಗಳು ಪ್ರತಿಭಟಿಸಲು ಅವಕಾಶ ನೀಡದೇ ಅವರನ್ನು ಬೆನ್ನಟ್ಟಿ ಪೊಲೀಸರು ಹಿಡಿಯಲು ಆರಂಭಿಸಿದರು. ಪ್ರತಿಭಟನೆ ಮಾಡಿಯೇ ತೀರುತ್ತೇವೆ ಎಂದಿದ್ದ ಅವರ ಹಕ್ಕು ಕಸಿಯುವ ಕಾರ್ಯ ಪೊಲೀಸರು ಮಾಡಿದಂತಿತ್ತು. ಈ ವೇಳೆ ಹತ್ತಾರು ಪ್ರತಿಭಟನಾನಿರತರು, ವಿದ್ಯಾರ್ಥಿನಿಯರು ತಮಗೆ ನ್ಯಾಯ ಕೊಡಿಸುವಂತೆ ರಾಜ್ಯ ಸರ್ಕಾರ ಹಾಗೂ ಆಯೋಗದ ವಿರುದ್ಧ ಧಿಕ್ಕಾರ ಕೂಗಿದರು. ಪ್ರತಿಭಟನೆಗೆ ಮತ್ತಷ್ಟು ವಿದ್ಯಾರ್ಥಿಗಳು ಬಂದು ಸೇರಿಕೊಳ್ಳುತ್ತಿದ್ದಂತೆ ಪೊಲೀಸರು ಅವರನ್ನು ತಡೆಯಲು ಮುಂದಾದರು. ರಸ್ತೆ ಮಧ್ಯದಲ್ಲೇ ಕೂತು ಪ್ರತಿಭಟಿಸಲು ವಿದ್ಯಾರ್ಥಿನಿಯರು ಮುಂದಾದರೆ. ಆಗ ಪೊಲೀಸರು ವಿದ್ಯಾರ್ಥಿನಿಯರ ಕೈ, ಭುಜ ಹಿಡಿದು ಎಳೆದಾಡಿದ್ದಲ್ಲದೇ ಅವರನ್ನು ಎಳೆದು ವಾಹನಕ್ಕೆ ಹಾಕಿದ್ದಾರೆ. ಈ ವೇಳೆ ಮಹಿಳಾ ಪೊಲೀಸ್ ಸಿಬ್ಬಂದಿ ಕಡಿಮೆ ಇದ್ದರೂ ಎನ್ನಲಾಗಿದೆ.

ದೈಹಿಕವಾಗಿ ವಿದ್ಯಾರ್ಥಿನಿಯರಿಗೆ ನೋವಾಗುತ್ತದೆ ಎಂಬ ಸಣ್ಣ ಅಳುಕು ಇಲ್ಲದೇ ಜಗ್ಗಾಡಿದ್ದಾರೆ. ಇದು ವಿಡಿಯೋದಲ್ಲಿ ಕಾಣಿಸುತ್ತಿದೆ. ಈ ವೇಳೆ ವಿದ್ಯಾರ್ಥಿನಿಯರನ್ನು ಎಳೆದಾಡಿದ್ದನ್ನು ಮಾಧ್ಯಮದವರು ಪ್ರಶ್ನಿಸಿದ್ದಾರೆ. ಈ ರೀತಿ ಎಳೆದಾಡುವುದು ತಪ್ಪು. ನಿಯಮಗಳ ಪ್ರಕಾರ, ಮಹಿಳಾ ಸಿಬ್ಬಂದಿ ಅಷ್ಟೇ ಕರೆದೊಯ್ಯಬೇಕು ಎಂದಿದ್ದಕ್ಕೆ ಮಾಧ್ಯಮ ಸಿಬ್ಬಂದಿ ಮೇಲೆ ಪೊಲೀಸರು ದರ್ಪ ಮೆರೆದಿದ್ದಾರೆ. ಮೈಕ್ ಹಿಡಿದು ಈ ಬಗ್ಗೆ ವಿವರಿಸುವಂತೆ ಕೇಳಿದಾಗ ಮೈಕ್ ಹಿಡಿಯಬೇಡಿ ಎಂದು ಗದರಿಸಿದ್ದಾರೆ. ನಿಮಗೇಕೆ ಪ್ರತಿಕ್ರಿಯಿಸಬೇಕು.

ಸರಿಯಾಗಿ ಮಾತನಾಡಿ ಎಂದು ಎಸಿಪಿ ಪರಮೇಶ್ವರನ್, ಡಿಸಿಪಿ ಯತಿಂದ್ರ ಅವರು ಕೂಗಾಡಿದ್ದಾರೆ. ಕೆಪಿಎಸ್ ಪರೀಕ್ಷೆಗಳಲ್ಲಿ ನಿರಂತರವಾಗಿ ಅಕ್ರಮ ನಡೆಯುತ್ತಿವೆ. ಪಶ್ನೆಪತ್ರಿಕೆ ಸೋರಿಕೆ, ಅನ್ಯಾಯ ಒಂದೆಡೆಯಾದರೆ ಆಯೋಗದ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿದಂತೆ ಅಧಿಕಾರಿಗಳೇ ಶಾಮೀಲಾಗಿ, ಕೋಟ್ಯಂತರ ರೂಪಾಯಿ ಅವ್ಯವಹಾರ ನಡೆಸಿರುವುದು ಇ.ಡಿ ದಾಳಿಯಿಂದ ತಿಳಿದು ಬಂದಿದೆ. ಈ ಕುರಿತು ತನಿಖೆ ನಡೆಯುತ್ತಿದೆ.

### ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರ ಮೇಲೆ ದೌರ್ಜನ್ಯ: ನ್ಯಾಯಾಂಗ ತನಿಖೆಗೆ ಸಿ.ಟಿ.ರವಿ ಆಗ್ರಹ



**ಎಬಿವಿಪಿ ಕಾರ್ಯಕರ್ತರ ಮೇಲೆ ದೌರ್ಜನ್ಯ ನಡೆಸಲಾಗಿದೆ. ಈ ಮೂಲಕ ಕಾಂಗ್ರೆಸ್ ಸರಕಾರವು ಭ್ರಷ್ಟರನ್ನು ರಕ್ಷಿಸಲು ಹೊರಟಿದೆ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಆಕ್ಷೇಪಿಸಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು, ವಿದ್ಯಾರ್ಥಿ ಪರಿಷತ್ತಿನ ಬಂಧಿತ ಕಾರ್ಯಕರ್ತರನ್ನು ತಕ್ಷಣ ಬಿಡುಗಡೆ ಮಾಡಬೇಕು. ಅವರ ಮೇಲಿನ ದೌರ್ಜನ್ಯ ಸಂಬಂಧ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ಕೆಪಿಎಸ್‌ಸಿ ಕರ್ಮಕಾಂಡದ ಕುರಿತಾಗಿ ಹೋರಾಟ ನಡೆಸುತ್ತಿದ್ದ ವಿದ್ಯಾರ್ಥಿ ಪರಿಷತ್ತಿನ ಕಾರ್ಯಕರ್ತರ ಮೇಲೆ ಅಮಾನುಷವಾಗಿ ಕರ್ನಾಟಕದ ಸರಕಾರ ನಡೆದುಕೊಂಡಿದೆ ಎಂದು ಟೀಕಿಸಿದರು. ಅವರು ಅನ್ಯಾಯದ ವಿರುದ್ಧ, ಭ್ರಷ್ಟಾಚಾರದ ವಿರುದ್ಧ ಹಾಗೂ ನ್ಯಾಯಯುತ ತನಿಖೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದರು ಎಂದು ತಿಳಿಸಿದರು. ಒಬ್ಬ ಐಎಎಸ್ ಅಧಿಕಾರಿ ಜ್ಞಾನೇಂದ್ರ, ಇ.ಡಿ. ತನಿಖೆಗೆ ಸಿಗದೇ ನಾಪತ್ತೆಯಾಗಿದ್ದಾರೆ. ಬ್ರಹ್ಮಾಂಡದ ಎಲ್ಲ ವಿಷಯಗಳ ಬಗ್ಗೆ ಮಾತನಾಡುವ ಗೃಹ ಸಚಿವರು ಜ್ಞಾನೇಂದ್ರ ವಿಚಾರದಲ್ಲಿ ದಿನಕ್ಕೊಂದು ಹೇಳಿಕೆ ನೀಡುತ್ತಾರೆ ಎಂದು ಟೀಕಿಸಿದರು.**

## ಸ್ವಾತಂತ್ರ್ಯ ಉದ್ಯಾನವನ ಉಳಿಸಿ ಹೋರಾಟ ಸಮಿತಿ ಆಗ್ರಹ

# ಫ್ರೀಡಂಪಾರ್ಕ್‌ನಲ್ಲಿ ಹೋರಾಟಕ್ಕೆ ಒಂದು ಲಕ್ಷ ರೂ. ಬಾಡಿಗೆ ನಿಗದಿ ಕೂಡಲೇ ಕೈಬಿಡಿ




**ಬೆಂಗಳೂರು,ಆ.25:** ಪ್ರತಿಭಟನಾ ಕಾರರ ಹೋರಾಟಕ್ಕೆ ಅನುಕೂಲ ವಾಗಲೆಂದು ನಿರ್ಮಿಸಿರುವ ಫ್ರೀಡಂ ಪಾರ್ಕ್‌ನ ಕಟ್ಟಡಕ್ಕೆ ದುಬಾರಿ ಬಾಡಿಗೆ ನಿಗದಿಪಡಿಸಿದ್ದು, ಕೂಡಲೇ ಇದನ್ನು ಸ್ಥಗಿತಗೊಳಿಸಬೇಕು ಎಂದು ಸ್ವಾತಂತ್ರ್ಯ ಉದ್ಯಾನವನ ಉಳಿಸಿ ಹೋರಾಟ ಸಮಿತಿ ಅಧ್ಯಕ್ಷ ಗಂಡಸಿ ಸದಾನಂದಸ್ವಾಮಿ ಒತ್ತಾಯಿಸಿದ್ದಾರೆ.

ಈ ಕುರಿತು ಮಾತನಾಡಿದ ಸಮಿತಿ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, 'ಫ್ರೀಡಂ ಪಾರ್ಕ್ ಹೋರಾಟಗಾರರ ಕರ್ಮಭೂಮಿ. ಕಳೆದ ಹಲವು ವರ್ಷಗಳಿಂದ ಕಾರ್ಮಿಕ, ಚಾಲಕ, ಕನ್ನಡಪರ, ಶಿಕ್ಷಕರ, ಮಾಜಿ ಸೈನಿಕರ, ವೈದ್ಯರ, ಆಶಾ ಕಾರ್ಯಕರ್ತರ, ವಿಕಲಚೇತನರು, ಹಿರಿಯ ನಾಗರಿಕರು ಸೇರಿದಂತೆ ಸಾವಿರಾರು ಸಂಘಟನೆಗಳು ಇಲ್ಲಿ ತಮ್ಮ ಬೇಡಿಕೆಗಳಿಗಾಗಿ ಪ್ರಜಾಪ್ರಭುತ್ವದ ರೀತಿಯಲ್ಲಿ ಹೋರಾಟ ನಡೆಸುತ್ತಿವೆ. ಇಂತಹ ಸ್ಥಳದಲ್ಲೇ ಪ್ರತಿಭಟನೆಗೆ ನಿರ್ಮಿಸಿರುವ ಕಟ್ಟಡಕ್ಕೆ ಹೆಚ್ಚಿನ ಬಾಡಿಗೆ ವಿಧಿಸುವುದು ಹೋರಾಟ ಗಳನ್ನು ಹತ್ತಿಕ್ಕುವ ಕ್ರಮದಂತಿದೆ' ಎಂದು ಆರೋಪಿಸಿದರು.

2009ರಲ್ಲಿ ಹಳೆಯ ಕೇಂದ್ರ ಕಾರಾಗೃಹವನ್ನು ಪರಪ್ಪನ ಅಗ್ರಹಾರಕ್ಕೆ ಸ್ಥಳಾಂತರಿಸಿದ ಬಳಿಕ ಫ್ರೀಡಂ ಪಾರ್ಕ್ ಅಭಿವೃದ್ಧಿಪಡಿಸಲಾಯಿತು. ಸಾರ್ವಜನಿಕರು ಹಾಗೂ ಸಂಘ–ಸಂಸ್ಥೆಗಳ ಪ್ರತಿಭಟನೆಗಳಿಗೆ ಅನುಕೂಲ ವಾಗುವಂತೆ ವಿವಿಧ ಮೂಲಸೌಕರ್ಯ ಗಳನ್ನು ಕಲ್ಪಿಸಲಾಯಿತು. 2018ರಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಭಟನೆ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳಿಗೆ ಅನುಕೂಲವಾಗಲೆಂದು ನಿರ್ಮಿಸಲಾಗಿದ್ದ ಬೃಹತ್ ಕಟ್ಟಡವನ್ನು ಉದ್ಘಾಟಿಸಿದ್ದರು. ಈ ಕಟ್ಟಡದಲ್ಲಿ ದೊಡ್ಡ ಪ್ರಮಾಣದ ಪಾರ್ಕಿಂಗ್ ವ್ಯವಸ್ಥೆ ಹಾಗೂ ಸಾವಿರಾರು ಜನರು ಕುಳಿತು ಕೊಳ್ಳಬಹುದಾದ ಸಭಾಂಗಣ ವಿದೆ. ಆದರೆ ಇದೀಗ ಜಿಬಿಎ ಅಧಿಕಾರಿಗಳು ಕಟ್ಟಡ ಬಳಕೆಗೆ ಸುಮಾರು 1 ಲಕ್ಷ ಬಾಡಿಗೆ ಹಾಗೂ ರೂ.10 ಸಾವಿರ ಠೇವಣಿ ನಿಗದಿಪಡಿಸಿ ರುವುದು ಸಣ್ಣ ಹಾಗೂ ಆರ್ಥಿಕವಾಗಿ ದುರ್ಬಲ ಸಂಘಟನೆಗಳಿಗೆ ಹೊರೆಯಾಗುತ್ತಿದೆ ಎಂದರು.

'ಪ್ರತಿಭಟನೆಗಳಿಗೆ ನೆರವು ನೀಡಬೇಕಾದ ಸರ್ಕಾರವೇ ಬಾಡಿಗೆ ವಿಧಿಸಿದರೆ, ಆರ್ಥಿಕವಾಗಿ ದುರ್ಬಲ ಸಂಘಟನೆಗಳು ಮಳೆ, ಬಿಸಿಲಿನಲ್ಲೇ ಪ್ರತಿಭಟನೆ ನಡೆಸಬೇಕಾದ ಪರಿಸ್ಥಿತಿ ಎದುರಾಗುತ್ತದೆ. ಇದು ಪ್ರಜಾಪ್ರಭುತ್ವದ ಹಕ್ಕಿಗೆ ಧಕ್ಕೆ ತರುವಂತಾಗಿದೆ ಎಂದು ಸದಾನಂದಸ್ವಾಮಿ ಹೇಳಿದರು.

ಫ್ರೀಡಂ ಪಾರ್ಕ್‌ನಲ್ಲಿ ಪ್ರತಿನಿತ್ಯ ಸಾವಿರಾರು ಹೋರಾಟಗಾರರು ಆಗಮಿಸುತ್ತಿದ್ದರೂ ಶೌಚಾಲಯ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಹಲವು ಮೂಲಸೌಕರ್ಯ ಗಳ ಕೊರತೆ ಇದೆ. ಪ್ರತಿಭಟನಾಕಾರರಿಗೆ ಸೂಕ್ತ ನೆರಳು, ಕುಡಿಯುವ ನೀರು, ಶೌಚಾಲಯ ಹಾಗೂ ಉಚಿತವಾಗಿ ಬಳಸಿಕೊಳ್ಳಬಹುದಾದ ಸಭಾಂಗಣದ ವ್ಯವಸ್ಥೆ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದರು.

ಹೋರಾಟಗಾರರಿಗಾಗಿ ನಿರ್ಮಿಸಿರುವ ಕಟ್ಟಡವನ್ನು ಉಚಿತ ವಾಗಿ ಸಂಘ–ಸಂಸ್ಥೆಗಳಿಗೆ ನೀಡಬೇಕು. ಜಿಬಿಎ ಕೈಗೊಂಡಿರುವ ಬಾಡಿಗೆ ನಿಗದಿ ಕ್ರಮವನ್ನು ಕೂಡಲೇ ಹಿಂಪಡೆಯಬೇಕು. ಇಲ್ಲವಾದರೆ ಸ್ವಾತಂತ್ರ್ಯ ಉದ್ಯಾನವನ ಉಳಿಸಿ ಹೋರಾಟ ಸಮಿತಿ ನ್ಯಾಯಾಲಯದ ಮೆಟ್ಟಿಲೇರಲಿದೆ ಎಂದು ಗಂಡಸಿ ಸದಾನಂದಸ್ವಾಮಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಪ್ರಜಾಪ್ರಭುತ್ವದಲ್ಲಿ ಜನರ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವ ಪ್ರತಿಭಟನೆಗಳಿಗೆ ಸೂಕ್ತ ಸ್ಥಳ ಮತ್ತು ಮೂಲಸೌಕರ್ಯ ಒದಗಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ಆದ್ದರಿಂದ ಫ್ರೀಡಂ ಪಾರ್ಕ್ನ ಸೌಲಭ್ಯಗಳನ್ನು ಹೋರಾಟಗಾರರ ಹಿತದೃಷ್ಟಿಯಿಂದ ಬಳಸಲು ಅವಕಾಶ ಕಲ್ಪಿಸಬೇಕು ಎಂದು ಸಮಿತಿ ಆಗ್ರಹಿಸಿದೆ.

# ವಿಚಾರಣೆಗೆ ಗೈರುಹಾಜರು: ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಜಾಮೀನುರಹಿತ ವಾರಂಟ್ ಜಾರಿ

**ಬೆಂಗಳೂರು, ಆ.25:** ಬಿಜೆಪಿ ಮಾಜಿ ಸಂಸದ ಪ್ರತಾಪ್‌ಸಿಂಹ ದಾಖಲಿಸಿರುವ ಮಾನನಷ್ಟ ಪ್ರಕರಣದ ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಬೆಂಗಳೂರಿನ 42ನೇ ಎಸಿಜೆಎಂ ನ್ಯಾಯಾಲಯ ಜಾಮೀನು ರಹಿತ ಬಂಧನ ವಾರಂಟ್ ಜಾರಿಗೊಳಿಸಿದೆ. ಕೆಲ ತಿಂಗಳ ಹಿಂದೆ ಪ್ರತಾಪ್ ಸಿಂಹ ವಿರುದ್ಧ ಪ್ರದೀಪ್ ಈಶ್ವರ್ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ಹೇಳಿಕೆಗೆ ಸಂಬಂಧಿಸಿದಂತೆ ಪ್ರತಾಪ್‌ಸಿಂಹ ನ್ಯಾಯಾಲಯದ ಮೆಟ್ಟಿಲೇರಿದ್ದರು.

ಮಾನನಷ್ಟ ಪ್ರಕರಣ ದಾಖಲಾದ ಬಳಿಕ ವಿಚಾರಣೆಗಾಗಿ ನ್ಯಾಯಾಲಯಕ್ಕೆ ಹಾಜರಾಗಬೇಕಿದ್ದ ಪ್ರದೀಪ್ ಈಶ್ವರ್ ಗೈರಾಗಿದ್ದರು ಎನ್ನಲಾಗಿದೆ.



ಪ್ರಕರಣದ ವಿಚಾರಣೆಗೆ ಅವರು ಹಾಜರಾಗದ ಹಿನ್ನೆಲೆಯಲ್ಲಿ ಕೋರ್ಟ್ ಜಾಮೀನು ರಹಿತ ಬಂಧನ ವಾರಂಟ್ ಹೊರಡಿಸಿದೆ. ನ್ಯಾಯಾಲಯದ ಈ ಆದೇಶದಿಂದ ಇದೀಗ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಕಾನೂನು ಸಂಕಷ್ಟ ಎದುರಾದಂತಾಗಿದೆ. ಪ್ರಕರಣದಲ್ಲಿ ಮುಂದಿನ ವಿಚಾರಣೆಯ ವೇಳೆ ನ್ಯಾಯಾಲಯದ ಆದೇಶದಂತೆ ಕಾನೂನು ಪ್ರಕ್ರಿಯೆ ಮುಂದು ವರಿಯಲಿದೆ.

# ಸ್ವಚ್ಛಗೊಳ್ಳದ ಖಾಲಿ ನಿವೇಶನಗಳು ಪಾಲಿಕೆ ವಶಕ್ಕೆ: ಆಸ್ತಿ ಮಾಲೀಕರಿಗೆ ಜಿಬಿಎ ಎಚ್ಚರಿಕೆ

**ಬೆಂಗಳೂರು, ಆ.25:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಎಚ್ಚರಿಕೆ ನೀಡಿದರೂ ಅನೇಕ ಖಾಲಿ ಆಸ್ತಿ ಮಾಲೀಕರು ನಿರ್ಲಕ್ಷ್ಯ ವಹಿಸಿದ್ದಾರೆ. ಹೀಗಾಗಿ ಅವರ ಆಸ್ತಿಗಳನ್ನು ಪಾಲಿಕೆ ವಶಕ್ಕೆ ಪಡೆಯುವಂತೆ ಎಚ್ಚರಿಕೆ ನೀಡಲಾಗಿದೆ ಎಂದು ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ತಿಳಿಸಿದ್ದಾರೆ.

ಪಾಲಿಕೆ ವ್ಯಾಪ್ತಿಯ ಎಚ್‌ಎಸ್‌ಆರ್ ಲೇಔಟ್ ನಲ್ಲಿರುವ ಖಾಲಿ ನಿವೇಶನಗಳಲ್ಲಿ ಕಸ ಸುರಿದು ಪರಿಸರ ಮಾಲಿನ್ಯ ಉಂಟುಮಾಡುತ್ತಿರುವ ಸ್ಥಳಗಳ ಸ್ವಚ್ಛತೆಗೆ ಸಚಿವ ಕೃಷ್ಣ ಬೈರೇಗೌಡ ಅವರು ಸೂಚಿಸಿದ್ದಾರೆ. ಈ ಸಂಬಂಧ ಜಿಬಿಎ ಮುಖ್ಯ ಆಯುಕ್ತರು ಅನೈರ್ಮಲ್ಯ ಹೊಂದಿರುವ ಖಾಲಿ ನಿವೇಶನಗಳನ್ನು ಸ್ವಚ್ಛ ಗೊಳಿಸುವಂತೆ ಸಂಬಂಧಪಟ್ಟ ಮಾಲೀಕರಿಗೆ ತಿಳಿಸಿ. ಇಲ್ಲವಾದರೆ ಅವರಿಂದ ಆಸ್ತಿ ವಶ ಪಡೆಯಲು ಸೂಚನೆ ನೀಡಿದ್ದಾರೆ.ಇದೇ ಆಗಸ್ಟ್ 22 ರವರೆಗೂ ನಿಮ್ಮ ಖಾಲಿ ಆಸ್ತಿಗಳಲ್ಲಿರುವ ಕಸ, ತ್ಯಾಜ್ಯ ತೆರವು ಮಾಡುವಂತೆ ಜಿಬಿಎ ಗಡುವು ನೀಡಿತ್ತು. ಈ ಗಡುವು ಮುಗಿದ ಹಿನ್ನೆಲೆಯಲ್ಲಿ ಎಚ್‌ಎಸ್‌ಆರ್ ಬಡಾವಣೆಗಳಲ್ಲಿ ಖಾಲಿ ನಿವೇಶನಗಳನ್ನು ಆಯುಕ್ತರು ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಂಗಮ್ಮನಪಾಳ್ಯ ಮುಖ್ಯ ರಸ್ತೆಯ ಮುನಿಯಪ್ಪ ಕಾಂಪ್ಲೆಕ್ಸ್ ಸಮೀಪವಿರುವ ಖಾಲಿ ನಿವೇಶನಗಳಿಗೆ



ಭೇಟಿ ನೀಡಿದ ವೇಳೆ ಖಾಸಗಿ ನಿವೇಶನಗಳಲ್ಲಿ ಕಸ ಎಸೆದು ಅನೈರ್ಮಲ್ಯ ಉಂಟು ಮಾಡಲಾಗಿದೆ. ಇದನ್ನು ಗಮನಿಸಿದ ಆಯುಕ್ತರು, ಕಸ ಹಾಕುವವರಿಗೆ ಹೆಚ್ಚಿನ ದಂಡ ವಿಧಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಖಾಲಿ ನಿವೇಶನಗಳ ಸ್ವಚ್ಛತೆಯನ್ನು ಸೂಕ್ತರೀತಿಯಲ್ಲಿ ನಿರ್ವಹಣೆ ಮಾಡದಿರುವಂತಹ ಮಾಲೀಕರಿಗೆ ತಕ್ಷಣವೇ ನೋಟಿಸ್ ಜಾರಿಗೊಳಿಸಿ, ಸ್ವಂತ ಖರ್ಚಿನಲ್ಲಿ ತ್ಯಾಜ್ಯ ತೆರವುಗೊಳಿಸಿ ಖಾಲಿ ಜಾಗವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕಿದೆ. ಈ ಸೂಚನೆ ಪಾಲಿಸದಿದ್ದರೆ, ಅನೈರ್ಮಲ್ಯ ಹೊಂದಿರುವ ನಿವೇಶನಗಳನ್ನು ಪಾಲಿಕೆ ವಶಕ್ಕೆ ಪಡೆಯುವುದಾಗಿ ಎಚ್ಚರಿಕೆ ನೋಟಿಸ್ ನೀಡುವಂತೆ ಹೇಳಿದರು. ಅದಾದ ನಂತರವೂ ನಿಗದಿತ ಅವಧಿಯೊಳಗೆ ನಿವೇಶನಗಳನ್ನು ಸ್ವಚ್ಛಗೊಳಿಸದಿದ್ದರೆ, ಅಂತಹ ಖಾಲಿ ನಿವೇಶನಗಳನ್ನು ಪಾಲಿಕೆಯ ವಶಕ್ಕೆ ಪಡೆಯಲಾಗುವುದು ಎಂದು ಎಚ್ಚರಿಕೆಯ ಸೂಚನಾ ಫಲಕಗಳನ್ನು ಆ ಜಾಗದಲ್ಲಿ ಹಾಕುವಂತೆ ತಿಳಿಸಿದರು.

# ಮಾಫಿ ಸಾಕ್ಷಿಯಾಗುವ ಪ್ರದೋಷ್ ರಾವ್ ಅರ್ಜಿ ಮಾನ್ಯ ಮಾಡಿದ ಬೆಂಗಳೂರು ನ್ಯಾಯಾಲಯ

**ಬೆಂಗಳೂರು, ಆ.25:** ರಾಜ್ಯಾದ್ಯಂತ ತೀವ್ರ ಸಂಚಲನ ಮೂಡಿಸಿದ್ದ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಮಹತ್ವದ ಕಾನೂನು ತಿರುವು ಸಿಕ್ಕಿದೆ.

ಪ್ರಕರಣದ ಎ14 ಆರೋಪಿ ಯಾಗಿರುವ ಪ್ರದೋಷ್ ಎಸ್.ರಾವ್ ಸಲ್ಲಿಸಿದ್ದ ಅರ್ಜಿಯನ್ನು ಬೆಂಗಳೂರಿನ 59ನೇ ಸಿಸಿಎಚ್ (ವಿಶೇಷ) ಮಾಫಿ ಸಾಕ್ಷಿಯಾಗಿ ಪರಿಗಣಿಸಿ ಮಾನ್ಯ ಮಾಡಿದೆ. ಇದರಿಂದಾಗಿ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿರುವ ನಟ ದರ್ಶನ್‌ಗೆ ಕಾನೂನು ಸಂಕಷ್ಟ ಮತ್ತಷ್ಟು ಬಿಗಿಯಾದಂತಾಗಿದೆ.

ನ್ಯಾಯಾಲಯವು ತನ್ನ ಆದೇಶದಲ್ಲಿ ಪ್ರದೋಷ್‌ಗೆ ಸ್ಪಷ್ಟ ಷರತ್ತುಗಳನ್ನು ವಿಧಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನ್ನ ಗಮನದಲ್ಲಿರುವ ಎಲ್ಲಾ ಸತ್ಯಾಂಶಗಳನ್ನು ಯಾವುದೇ ಮುಚ್ಚುಮರೆಯಿಲ್ಲದೆ ಸಂಪೂರ್ಣವಾಗಿ ಬಹಿರಂಗಪಡಿಸಬೇಕು ಎಂದು ಸೂಚಿಸಿದೆ. ಪ್ರದೋಷ್ ನೀಡುವ ಹೇಳಿಕೆ ಸತ್ಯದಿಂದ ಕೂಡಿದ್ದರೆ ಮಾತ್ರ ಅವರನ್ನು ಮಾಫಿ ಸಾಕ್ಷಿಯನ್ನಾಗಿ ಪರಿಗಣಿಸಿ, ಪ್ರಕರಣದಿಂದ ಮುಕ್ತಿ ನೀಡುವ ಪ್ರಕ್ರಿಯೆ ಮುಂದುವರಿಯಲಿದೆ.

ಈ ಕುರಿತ ಆದೇಶದ ಪ್ರತಿಯನ್ನು ಜೈಲು ಅಧಿಕಾರಿಗಳ ಮೂಲಕ ಪ್ರದೋಷ್‌ಗೆ ರವಾನಿಸಲಾಗಿದೆ.

ಈ ಪ್ರಕ್ರಿಯೆಯಿಂದಾಗಿ ಆರೋಪಿ ಪ್ರದೋಷ್ ಸಂಪೂರ್ಣ ವಿಚಾರಣೆ ಮುಗಿಯುವವರೆಗೂ ಜೈಲಿನಲ್ಲಿಯೇ ಇರಬೇಕಾಗುತ್ತದೆ. ಒಂದು ವೇಳೆ ಕೋರ್ಟ್‌ಗೆ ನೀಡಿದ ಷರತ್ತುಗಳನ್ನು ಉಲ್ಲಂಘಿಸಿದರೆ ಅಥವಾ ಸುಳ್ಳು ಸಾಕ್ಷಿ ನುಡಿದರೆ ಅವರ ವಿರುದ್ಧ ಸುಳ್ಳು ಸಾಕ್ಷ್ಯ ನೀಡಿದ ಆರೋಪದಡಿಯಲ್ಲಿ ಪ್ರತ್ಯೇಕ ಪ್ರಕರಣ ದಾಖಲಿಸಲಾಗುವುದು ಎಂದು ನ್ಯಾಯಾಲಯ ಎಚ್ಚರಿಕೆ ನೀಡಿದೆ.




## ಕೆಆರ್‌ಎಸ್ ಜಲಾಶಯಕ್ಕೆ ಮುತ್ತಿಗೆ, ಬೆಂಗಳೂರಿನಿಂದ ಕನ್ನಂಬಾಡಿವರೆಗೆ ರ್‍ಯಾಲಿ: ವಾಟಾಳ್ ನಾಗರಾಜ್ ಎಚ್ಚರಿಕೆ

# ಸಿಡಬ್ಲ್ಯುಆರ್‌ಸಿ – ಸಿಡಬ್ಲ್ಯುಎಂಎ ಆದೇಶಕ್ಕೆ ಹೋರಾಟಗಾರರ ವಿರೋಧ

**ಬೆಂಗಳೂರು, ಆ.25:** ತಮಿಳುನಾಡಿಗೆ ಮತ್ತೆ ಕಾವೇರಿ ನೀರು ಹರಿಸುವಂತೆ ಸಿಡಬ್ಲ್ಯುಆರ್‌ಸಿ ಮತ್ತು ಸಿಡಬ್ಲ್ಯುಎಂಎ ನೀಡಿರುವ ಆದೇಶ ಖಂಡಿಸಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಪ್ರತಿಭಟನೆ ನಡೆಸಿದ್ದಾರೆ. ಕೆ.ಆರ್.ಎಸ್ ಜಲಾಶಯಕ್ಕೆ ಮುತ್ತಿಗೆ ಹಾಕುವುದಾಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನ ಮೆಜೆಸ್ಟಿಕ್ ರೈಲು ನಿಲ್ದಾಣದಲ್ಲಿ ಮಾತನಾಡಿದ ವಾಟಾಳ್ ನಾಗರಾಜ್, ಕರ್ನಾಟಕದಲ್ಲಿ ನೀರಿನ ಅಭಾವದಿಂದ ರೈತರು ಸಂಕಷ್ಟಕ್ಕೀಡಾಗಿದ್ದರೂ ಸಿಡಬ್ಲ್ಯುಆರ್‌ಸಿ ಮತ್ತು ಸಿಡಬ್ಲ್ಯುಎಂಎ ನೀಡಿರುವ ಆದೇಶ ತಮಿಳುನಾಡಿಗೆ ಕಾವೇರಿ ನೀರು ಹರಿಸಲು ಆದೇಶ ನೀಡಿರುವುದು ಖಂಡನೀಯ.

ಪ್ರಾಧಿಕಾರಗಳಿಗೆ ಧಿಕ್ಕಾರ ಎಂದು ಘೋಷಣೆ ಕೂಗಿದರು.ಈ ಆದೇಶವನ್ನು ಖಂಡಿಸಿ ಹಾಗೂ ಸರ್ಕಾರ ತಮಿಳುನಾಡಿಗೆ ಹರಿಸುತ್ತಿರುವುದನ್ನು ವಿರೋಧಿಸಿ ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳು ಕೆಆರ್‌ಎಸ್ ಜಲಾಶಯಕ್ಕೆ ಮುತ್ತಿಗೆ ಹಾಕುವುದಾಗಿ ತಿಳಿಸಿದರು. ಬೆಂಗಳೂರಿನಿಂದ ಕನ್ನಂಬಾಡಿವರೆಗೂ ರ್‍ಯಾಲಿ ನಡೆಸುತ್ತಿದ್ದೇವೆ. ಮಾರ್ಗ ಮಧ್ಯೆ ಇನ್ನೂ ಹಲವು ಕನ್ನಡಪರ ಕಾರ್ಯಕರ್ತರನ್ನು ಸೇರಿಸಿಕೊಂಡು, ನೂರಾರು ವಾಹನಗಳಲ್ಲಿ ಕೆಆರ್‌ಎಸ್ ಡ್ಯಾಂ ತಲುಪುತ್ತೇವೆ. ಅಲ್ಲಿ ಡ್ಯಾಂಗೆ ಮುತ್ತಿಗೆ ಹಾಕುತ್ತೇವೆ ಎಂದರು.

ರಾಜ್ಯ ಸರ್ಕಾರ ಈಗಾಗಲೇ ತಮಿಳುನಾಡಿಗೆ ಸಾಕಷ್ಟು ನೀರನ್ನು ಬಿಡುಗಡೆ ಮಾಡಿದೆ ಎಂದು ಆರೋಪಿಸಿದರು. ಇದೀಗ ಕಾವೇರಿ ನೀರು ನಿರ್ವಹಣಾ ಸಮಿತಿಯು ಮತ್ತೆ 9,000 ಕ್ಯೂಸೆಕ್ ನೀರನ್ನು 15 ದಿನಗಳ ಕಾಲ ಬಿಡುವಂತೆ ಆದೇಶಿಸಿರುವುದು ರಾಜ್ಯಕ್ಕೆ ಬಹಳ ಹೊರೆಯಾಗಿದೆ.

ಈ ನಿರ್ಧಾರದಿಂದ ಬೆಂಗಳೂರಿನಲ್ಲಿ ಭವಿಷ್ಯದಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಎದುರಾಗಲಿದೆ. ರಾಜ್ಯದ ಜನತೆ



ಎಚ್ಚೆತ್ತುಕೊಳ್ಳಬೇಕು ಎಂದರು. ಇತ್ತೀಚೆಗೆ ನಡೆದ ಅಸೆಂಬ್ಲಿ ಅಧಿವೇಶನದಲ್ಲಿ ಕಾವೇರಿ ನೀರು ಹಂಚಿಕೆ ಬಗ್ಗೆ ಗಂಭೀರ ಚರ್ಚೆ ನಡೆದಿಲ್ಲ. ಭ್ರಷ್ಟಾಚಾರದ ಆರೋಪಗಳು ಮತ್ತು ರಾಜಕೀಯ ಜಟಾಪಟಿಗಳ ನಡುವೆ ಕಾವೇರಿ ನೀರಿನಂತಹ ಪ್ರಮುಖ ವಿಷಯವನ್ನು ಕಡೆಗಣಿಸಲಾಗಿದೆ ಎಂದು ಆಕ್ರೋಶಗೊಂಡರು.

ಬೆಂಗಳೂರು ಶಾಸಕರಿಗೆ ಮಾನ ಮರ್ಯಾದೆ ಇದ್ದರೆ, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

# ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿಗೆ ವಿಶೇಷ ಆಹ್ವಾನಿತರಾಗಿ ಪತ್ರಕರ್ತ ವೈ.ಎಸ್.ಎಲ್ ಸ್ವಾಮಿ ನೇಮಕ

**ಬೆಂಗಳೂರು, ಆ.25:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿಯ ವಿಶೇಷ ಆಹ್ವಾನಿತರಾಗಿ ಪತ್ರಕರ್ತ ವೈ.ಎಸ್.ಎಲ್ ಸ್ವಾಮಿ ಅವರನ್ನು ನೇಮಕ ಮಾಡಿದ್ದು, ಇಂದು ಆದೇಶ ಪತ್ರ ವಿತರಿಸಲಾಯಿತು.

ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನಿರ್ದೇಶನದ ಮೇರೆಗೆ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್ ಅನುಮೋದನೆಯೊಂದಿಗೆ ಈ ಆದೇಶ ಹೊರಡಿಸಲಾಗಿದೆ.

ವೈ.ಎಸ್.ಎಲ್ ಸ್ವಾಮಿ ಕಳೆದ ಮೂರು ದಶಕಗಳಿಗೂ ಹೆಚ್ಚು ಕಾಲದಿಂದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸುತ್ತಾ, ಪತ್ರಕರ್ತರ ಹಿತರಕ್ಷಣೆಗಾಗಿ ಹಾಗೂ ಸಂಘದ ರಚನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಶ್ರಮಿಸುತ್ತಾ ಬಂದಿದ್ದಾರೆ. ಅವರ ಅನುಭವ, ಸೇವೆ ಮತ್ತು ಸಂಘಟನಾ ಚತುರತೆಯನ್ನು ಪರಿಗಣಿಸಿ ಅವರಿಗೆ ಈ ಜವಾಬ್ದಾರಿಯನ್ನು ನೀಡಲಾಗಿದೆ ಎಂದು ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.

ಈ ನೂತನ ಜವಾಬ್ದಾರಿಯಿಂದ ಪತ್ರಕರ್ತರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಹಾಗೂ ಸಂಘವನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಮತ್ತಷ್ಟು ಬಲಪಡಿಸುವಲ್ಲಿ ಸ್ವಾಮಿ ಅವರು ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ಬೆಂಗಳೂರು ನಗರ ಜಿಲ್ಲಾ ಅಧ್ಯಕ್ಷ ಎಸ್.ಸೋಮಶೇಖರ್ ಗಾಂಧಿ ವಿಶ್ವಾಸ ವ್ಯಕ್ತಪಡಿಸಿದರು

ನೂತನವಾಗಿ ನೇಮಕಗೊಂಡ ವೈ.ಎಸ್.ಎಲ್ ಸ್ವಾಮಿ ಅವರಿಗೆ ಸಂಘದ ಎಲ್ಲಾ ಪದಾಧಿಕಾರಿಗಳು, ಸದಸ್ಯರು ಹಾಗೂ ಹಿರಿಯ ಪತ್ರಕರ್ತರು ಅಭಿನಂದನೆ ಸಲ್ಲಿಸಿದರು.

ರಾಜ್ಯ ಖಜಾಂಚಿ ವಾಸುದೇವ ಹೊಳ್ಳ, ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್. ಜಯಕುಮಾರ್ ಗೌಡ, ರಾಜ್ಯಕಾರ್ಯಕಾರಿಣಿ ಸದಸ್ಯ ರವೀಶ್ ಎಚ್.ಆರ್, ಬೆಂಗಳೂರು ನಗರ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ಎನ್.ಶಿವಾನಂದ, ಹನುಮಂತ ರಾಜು ಬಿ.ಕೆ., ಟಿ ಮಂಜುನಾಥ್, ನಗರ ಜಿಲ್ಲಾ ಚುನಾವಣಾಧಿಕಾರಿಯಾಗಿದ್ದ ವಿ ನಂಜುಂಡಪ್ಪ ಮತ್ತಿತರು ಹಾಜರಿದ್ದರು.



ಬೆಳಗಾವಿ ನಗರ ಪೊಲೀಸರು ಮಂಗಳವಾರ ನಗರ ಪೊಲೀಸ್ ಅಧಿಕಾರಿಗಳು, ಇಲಾಖಾ ಸಿಬ್ಬಂದಿ ಮತ್ತು ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ) ಸಿಬ್ಬಂದಿಯನ್ನು ಒಳಗೊಂಡ ಸಮಗ್ರ ಮಾರ್ಗ ಪಥ ಸಂಚಲನ ನಡೆಸಿದರು. ಈ ಭದ್ರತಾ ಕವಾಯತು ಮತ್ತು ಬಲಪ್ರದರ್ಶನವು ನಗರದ ಮೂಲಕ ಹಾದುಹೋಗಲಿರುವ ಮುಂಬರುವ ಈದ್-ಎ-ಮಿಲಾದ್ ಮೆರವಣಿಗೆಗೆ ಮುಂಚಿತವಾಗಿ ಸಾರ್ವಜನಿಕ ಸುರಕ್ಷತೆ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವುದು ಮತ್ತು ಸಮುದಾಯದ ವಿಶ್ವಾಸವನ್ನು ಬೆಳೆಸುವ ಗುರಿ ಹೊಂದಿದೆ.

ರಸ್ತೆಬದಿ ವರ್ತಕರ ಹಿತರಕ್ಷಣೆ ಮುಖ್ಯ, ಪುನರ್ವಸತಿ ಕಲ್ಪಿಸದೆ ನಡೆಸುವ ತೆರವು ಕಾರ್ಯಾಚರಣೆ ಸರಿಯಲ್ಲ

# ಬೀದಿಬದಿ ವ್ಯಾಪಾರಿಗಳ ಏಕಾಏಕಿ ತೆರವಿಗೆ ಸುಪ್ರೀಂ ಕೋರ್ಟ್ ಆದೇಶಿಸಿಲ್ಲ: ಹೈಕೋರ್ಟ್ ಸ್ಪಷ್ಟನೆ

**ಮಂಗಳೂರು, ಆ.25:** ಯಾವುದೇ ಬೀದಿಬದಿ ವ್ಯಾಪಾರಿಗಳನ್ನು ಕಾನೂನುಬಾಹಿರವಾಗಿ ಹಾಗೂ ಏಕಾಏಕಿ ತೆರವುಗೊಳಿಸುವಂತೆ ಸರ್ವೋಚ್ಚ ನ್ಯಾಯಾಲಯ ಆದೇಶಿಸಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಬೀದಿಬದಿ ವ್ಯಾಪಾರಿಗಳ ಹಿತರಕ್ಷಣಾ ಕಾಯ್ದೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಪುನರ್ವಸತಿ ಕಲ್ಪಿಸದೆ ನಡೆಸುವ ತೆರವು ಕಾರ್ಯಾಚರಣೆ ಸರಿಯಲ್ಲ ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ.

ಮಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು ದಾಖಲಿಸಿದ್ದ ಪ್ರಕರಣವನ್ನು ಪ್ರಶ್ನಿಸಿ ದಕ್ಷಿಣ ಕನ್ನಡ ಜಿಲ್ಲಾ ಬೀದಿಬದಿ ವ್ಯಾಪಾರಸ್ಥರ ಸಂಘದ ಕಾರ್ಯಾಧ್ಯಕ್ಷ ಬಿ.ಕೆ. ಇಮ್ತಿಯಾಝ್ ಪರವಾಗಿ ಹಿರಿಯ ವಕೀಲ ಎಸ್. ಬಾಲನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ವೇಳೆ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.



**ಪ್ರಕರಣದ ಹಿನ್ನೆಲೆ**–ಮಂಗಳೂರು ಟೌನ್ ಹಾಲ್ ಬಳಿಯ ಪಾದಚಾರಿ ಮಾರ್ಗದಲ್ಲಿದ್ದ 'ಸಂಡೇ ಬಜಾರ್' ಬೀದಿ ವ್ಯಾಪಾರಿಗಳ ಅಂಗಡಿಗಳನ್ನು ಸುಪ್ರೀಂ ಕೋರ್ಟ್ ಆದೇಶದ ನೆಪವೊಡ್ಡಿ ಮಹಾನಗರ ಪಾಲಿಕೆ ತೆರವುಗೊಳಿಸಲು ಮುಂದಾಗಿತ್ತು. ಈ ವೇಳೆ ಸಂಘದ ಕಾರ್ಯಾಧ್ಯಕ್ಷ ಬಿ.ಕೆ. ಇಮ್ತಿಯಾಜ್ ಹಾಗೂ ಇತರ ಪದಾಧಿಕಾರಿಗಳು ತೆರವು ಕಾರ್ಯಾಚರಣೆಯನ್ನು ಪ್ರಶ್ನಿಸಿ, ನಿಯಮಾನುಸಾರ ನಡೆಯುವಂತೆ ಮನವಿ ಮಾಡಿದ್ದರು. ಇದನ್ನು ಕರ್ತವ್ಯಕ್ಕೆ ಅಡ್ಡಿ ಹಾಗೂ ಹಲ್ಲೆ ಎಂದು ಆರೋಪಿಸಿ ಮಂಗಳೂರು ಮಹಾನಗರ ಪಾಲಿಕೆ ವಲಯ ಆಯುಕ್ತರು (ಪ್ರಭಾರ) ಮಂಗಳೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಇದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಲಾಗಿತ್ತು.

ಅರ್ಜಿದಾರರ ಪರ ವಕೀಲರಾದ ಎಸ್. ಬಾಲನ್ ಮತ್ತು ರಕ್ಷಿತಾಸಿಂಗ್ ವಾದ ಮಂಡಿಸಿ, "ಪಾಲಿಕೆ ಅಧಿಕಾರಿಗಳು ಯಾವುದೇ ಮುನ್ಸೂಚನಾ ನೋಟಿಸ್ ನೀಡದೆ ಅಕ್ರಮವಾಗಿ ಅಂಗಡಿಗಳನ್ನು ಧ್ವಂಸಗೊಳಿಸಿದ್ದಾರೆ. ವಾರಕ್ಕೊಮ್ಮೆ ನಡೆಯುವ ಸಂಡೇ ಬಜಾರ್ ಶಾಶ್ವತ ಅತಿಕ್ರಮಣವಲ್ಲ.

ಸುಪ್ರೀಂ ಕೋರ್ಟ್ ನೀಡಿರುವ ತೀರ್ಪು ಪಾದಚಾರಿ ಮಾರ್ಗದ ಮೂಲಸೌಕರ್ಯ ಕಲ್ಪಿಸುವುದಕ್ಕಷ್ಟೇ ಸೀಮಿತವಾಗಿದ್ದು, ಬೀದಿಬದಿ ವ್ಯಾಪಾರಿಗಳ ರಕ್ಷಣಾ ಕಾಯ್ದೆ 2014ನ್ನು ರದ್ದುಗೊಳಿಸಿಲ್ಲ. ಇಡೀ ಘಟನೆ ವಿಡಿಯೋದಲ್ಲಿದ್ದು, ಯಾವುದೇ ಹಲ್ಲೆ ನಡೆದಿಲ್ಲ. ಪಾಲಿಕೆಯು ತನ್ನ ತಪ್ಪನ್ನು ಮುಚ್ಚಿಕೊಳ್ಳಲು ಸಂಘಟನೆಯ ಪ್ರತಿನಿಧಿಗಳ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಕಾನೂನನ್ನು ದುರುಪಯೋಗಪಡಿಸಿಕೊಂಡಿದೆ" ಎಂದು ವಿವರಿಸಿದರು.

ವಾದ-ಪ್ರತಿವಾದ ಆಲಿಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು, "ಸುಪ್ರೀಂ ಕೋರ್ಟ್ ಆದೇಶ ಇರುವುದು ರಸ್ತೆಗಳ ಜತೆಗೆ ಸೂಕ್ತ ಫುಟ್ಪಾತ್ ನಿರ್ವಹಣೆ ಮಾಡಬೇಕು ಎಂಬುದಕ್ಕೆ ಮಾತ್ರ. ಬೀದಿಬದಿ ವ್ಯಾಪಾರಿಗಳ ಹಿತರಕ್ಷಣಾ ಕಾಯ್ದೆ ಇಂದಿಗೂ ಜಾರಿಯಲ್ಲಿದ್ದು, ಅವರಿಗೆ ವ್ಯಾಪಾರ ಮಾಡುವ ಹಕ್ಕಿದೆ. ಪುನರ್ವಸತಿ ವ್ಯವಸ್ಥೆ ಮತ್ತು ಕಾಯ್ದೆಯಲ್ಲಿನ ನಿಯಮಗಳನ್ನು ಪಾಲಿಸದೆ ತೆರವು ಮಾಡುವುದು ಕಾನೂನುಬಾಹಿರ" ಎಂದು ತಿಳಿಸಿದರು.

# ದಸರಾ ಗಜಪಡೆ ಪಯಣಕ್ಕೆ ನಾಗರಹೊಳೆಯಲ್ಲಿ ಇಂದು ಚಾಲನೆ



**ಮೈಸೂರು, ಆ.25:** ನಾಡಹಬ್ಬ ಮೈಸೂರು ದಸರಾದ ಪ್ರಥಮ ಚರಣವಾದ ಗಜಪಯಣಕ್ಕೆ ಬುಧವಾರ ಅದ್ದೂರಿ ಚಾಲನೆ ದೊರೆಯಲಿದೆ. ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ವೀರನಹೊಸಹಳ್ಳಿ ಮುಖ್ಯ ದ್ವಾರದ ಮುಂಭಾಗ ಬುಧವಾರ ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಗಜಪಡೆಗೆ ಪುಷ್ಪಾರ್ಚನೆ ಮಾಡಿ ಸಾಂಪ್ರದಾಯಿಕ ಪೂಜೆ ನೆರವೇರಿಸಿ ಚಾಲನೆ ನೀಡಲಿದ್ದಾರೆ.

ಈ ಬಾರಿ ಗಜಪಯಣಕ್ಕೆ ಹೊಸ ರೂಪ ನೀಡಲಾಗಿದ್ದು, ಸುಮಾರು 6 ಸಾವಿರ ಜನರು, ಪ್ರವಾಸಿಗರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಮತ್ತು ಮಹಿಳಾ ಸಂಘಟನೆಗಳಿಂದ ಗಜಪಡೆಗೆ ಅಭೂತಪೂರ್ವ ಸ್ವಾಗತ ಕೋರಲಾಗುತ್ತಿದೆ.

ಸ್ವಾಗತಕ್ಕೆ 15ಕ್ಕೂ ಹೆಚ್ಚು ಜಾನಪದ ಕಲಾತಂಡಗಳು ಸಜ್ಜಾಗಿವೆ. ಕಂಸಾಳೆ, ಡೊಳ್ಳು ಕುಣಿತ, ವೀರಗಾಸೆ, ಪೂಜಾ ಕುಣಿತ, ಆದಿವಾಸಿ ನೃತ್ಯ, ಟಿಬೆಟಿಯನ್ ನೃತ್ಯ, ಗೊರವರ ಕುಣಿತ, ಜೇನುಕುರುಬ ಮತ್ತು ಕಾಡು ಕುರುಬರ ಕುಣಿತದೊಂದಿಗೆ ಆನೆಗಳನ್ನು ಮೆರವಣಿಗೆಯಲ್ಲಿ ಬರಮಾಡಿಕೊಳ್ಳಲಾಗುತ್ತದೆ.

ಮೊದಲ ಹಂತದಲ್ಲಿ 9 ಆನೆಗಳು ಮೈಸೂರಿಗೆ ಆಗಮಿಸಲಿದ್ದು, ಎರಡನೇ ಹಂತದಲ್ಲಿ ಮಹೇಂದ್ರ, ಗೋಪಿ ಸೇರಿದಂತೆ 7 ಆನೆಗಳು ಬರಲಿವೆ. ಕಾರ್ಯಕ್ರಮಕ್ಕೆ ವೇದಿಕೆ ಸಿದ್ಧವಾಗಿದ್ದು ರಸ್ತೆ ಬದಿಯಲ್ಲಿ ಸ್ವಾಗತ ಕಮಾನುಗಳು ರಾರಾಜಿಸುತ್ತಿವೆ. ಮಳೆಯ ಹಿನ್ನೆಲೆಯಲ್ಲಿ ಗಣ್ಯರಿಗೆ ಹಾಗೂ ವೇದಿಕೆ ಕಾರ್ಯಕ್ರಮಕ್ಕೆ ತೊಂದರೆಯಾಗದಂತೆ ಆಸನದ ವ್ಯವಸ್ಥೆ, ಜರ್ಮನ್ ಟೆಂಟ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

# ಕೊಡಗಿನಲ್ಲಿ ಮೋಡಬಿತ್ತನೆ ಆಗಿಲ್ಲ: ಕೃಷಿ ಸಚಿವರ ಸ್ಪಷ್ಟನೆ

**ಕೊಡಗು, ಆ.25:** ಜಿಲ್ಲೆಯಲ್ಲಿ ಮೋಡ ಬಿತ್ತನೆ ಆಗಿದೆ ಎಂಬ ಚರ್ಚೆ ವಿಚಾರವಾಗಿ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.



ಕೊಡಗು ಜಿಲ್ಲೆಯಲ್ಲಿ ಮೋಡ ಬಿತ್ತನೆ ಆರಂಭ ಆಗಿಲ್ಲ. ಬಹುಶಃ ಇನ್ನು ನಾಲ್ಕು ದಿನಗಳಲ್ಲಿ ಮೋಡ ಬಿತ್ತನೆ ಆರಂಭಗೊಳ್ಳುವ ಸಾಧ್ಯತೆ ಇದೆ. ಸೋಮವಾರ ಬೆಂಗಳೂರಿನ ಸಚಿವರ ನಿವಾಸದಲ್ಲಿ ಕೊಡಗು ಭೂ ಪ್ರದೇಶದ ಮೇಲಿನ ಮೋಡಬಿತ್ತನೆ ಕುರಿತು ಸ್ಪಷ್ಟನೆ ನೀಡಿದ್ದಾರೆ.

ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದಾಗಿ ಕರ್ನಾಟಕದ ಎಲ್ಲೆಡೆ ಮೋಡ ಕವಿದ ವಾತಾವರಣ ಹಾಗೂ ರಭಸದ ಮಳೆ ಆಗುತ್ತಿದೆ. ಕೊಡಗಿನಲ್ಲಿ ಈಗಾಗಲೇ ಮೋಡಬಿತ್ತನೆ ನಡೆಯುತ್ತಿದೆ ಎಂದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಯಾಗುತ್ತಿದೆ.

ಆದರೆ, ಮೋಡಬಿತ್ತನೆ ಆರಂಭಗೊಂಡಿಲ್ಲ. ಬಹುಶಃ ಉತ್ತಮ ನೈಸರ್ಗಿಕ ಮಳೆಯಾದಲ್ಲಿ ಮೋಡ ಬಿತ್ತನೆ ಕಾರ್ಯವನ್ನು ಮುಂದೂಡುವ ಸಾಧ್ಯತೆ ಅಲ್ಲ ಗಳೆಯುವಂತಿಲ್ಲ.

# ಮೆಕ್ಯಾನಿಕಲ್ ಎಂಜಿನಿಯರಿಂಗ್‌ನಲ್ಲಿ ಪ್ರಗತಿ ಅಧ್ಯಾಪಕರು ನಿರಂತರವಾಗಿ ಕಲಿಯಬೇಕು



**ಬಳ್ಳಾರಿ, ಆ.25.** ವೀರಶೈವ ವಿದ್ಯಾವರ್ಧಕ ಸಂಘದ ಪ್ರತಿಷ್ಠಿತ ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ 'ಮೆಕ್ಯಾನಿಕಲ್ ಎಂಜಿನಿಯರಿಂಗ್‌ನಲ್ಲಿ ಪ್ರಗತಿಗಳು' (Advances in Mechanical Engineering) ವಿಷಯದ ಕುರಿತು ಐದು ದಿನಗಳ ಅಧ್ಯಾಪಕರ ಅಭಿವೃದ್ಧಿ ತರಬೇತಿ ಕಾರ್ಯಾಗಾರವನ್ನು (FDP) ಆಯೋಜಿಸಲಾಯಿತು. ತೋರಣಗಲ್ಲಿನ ಜೆಎಸ್‌ಡಬ್ಲ್ಯೂ ಸ್ಟೀಲ್‌ನ ಜನರಲ್ ಮ್ಯಾನೇಜರ್ ಕೆ. ನವೀನ್ ಸಿಂಗ್ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಕಾರ್ಯಾಗಾರವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆ. ನವೀನ್ ಸಿಂಗ್, 'ಶಿಕ್ಷಕರಾಗಿ ನಾವು ಪ್ರತಿದಿನವೂ ಹೊಸ ವಿಷಯಗಳನ್ನು ಅನ್ವೇಷಿಸಿ, ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು. ಶಿಕ್ಷಣವು ವಿದ್ಯಾರ್ಥಿಗಳಲ್ಲಿರುವ ಸಾಮರ್ಥ್ಯವನ್ನು ಹೊರತರುವ ಮಹತ್ವದ ಸಾಧನವಾಗಿದೆ. ಕಠಿಣ ಪರಿಶ್ರಮ, ಶಿಸ್ತು, ಸ್ಪಷ್ಟ ಗುರಿ, ವಿವೇಚನೆ ಹಾಗೂ ದಕ್ಷತೆಯನ್ನು ಅಳವಡಿಸಿಕೊಂಡು ಕಾರ್ಯನಿರ್ವಹಿಸಬೇಕು' ಎಂದು ಹೇಳಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿ ಯಾಗಿ ಭಾಗವಹಿಸಿದ್ದ ಬೆಂಗಳೂರಿನ ಬಿ.ಎಂ.ಎಸ್. ಎಂಜಿನಿಯರಿಂಗ್ ಕಾಲೇಜಿನ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕ ಡಾ. ವೆಂಕಟೇಶ್ ಟಿ. ಲಮಾಣಿ ಮಾತನಾಡಿ, "ಭವಿಷ್ಯದ ಶೂನ್ಯ ಹೊರಸೂಸುವಿಕೆ ಸಾಧಿಸಲು ಹೈಡ್ರೋಜನ್ ಇಂಧನಗಳು ಅತ್ಯಂತ ಮಹತ್ವದ ಪಾತ್ರ ವಹಿಸಲಿವೆ. ಮೆಕ್ಯಾನಿಕಲ್, ಸಿವಿಲ್ ಮತ್ತು ಎಲೆಕ್ಟ್ರಿಕಲ್‌ನಂತಹ ಮೂಲ ಎಂಜಿನಿಯರಿಂಗ್ ವಿಭಾಗಗಳು ಉತ್ಪಾದನಾ ಹಾಗೂ ಎಲ್ಲಾ ಕೈಗಾರಿಕಾ ಕ್ಷೇತ್ರಗಳಲ್ಲಿ ಪ್ರಮುಖ ಶಕ್ತಿಯಾಗಿವೆ. ಈ ಮೂಲ ವಿಭಾಗಗಳ ಜ್ಞಾನದೊಂದಿಗೆ ಕೃತಕ ಬುದ್ಧಿಮತ್ತೆಯನ್ನು ಸಂಯೋಜಿಸಿದರೆ ಸಂಶೋಧನಾ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆಗಳನ್ನು ತರಬಹುದು. ಅಲ್ಲದೆ, ಇದು ವಿನ್ಯಾಸ ಮತ್ತು ವಿಶ್ಲೇಷಣೆಯ ಸಮಯವನ್ನು ಗಣನೀಯವಾಗಿ ಉಳಿಸುತ್ತದೆ" ಎಂದು ವಿವರಿಸಿದರು.

ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಕೋರಿ ನಾಗರಾಜ್ ಸ್ವಾಗತಿಸಿ, ಇಂದಿನ ವಿದ್ಯಾರ್ಥಿಗಳು ಮಾಹಿತಿ ಹಾಗೂ ತಂತ್ರಜ್ಞಾನ ಆಧಾರಿತ ಪೀಳಿಗೆಯಾಗಿದ್ದಾರೆ. ಆದ್ದರಿಂದ ಶಿಕ್ಷಕರು ವಿದ್ಯಾರ್ಥಿಗಳ ಮನಸ್ಸನ್ನು ಗೆದ್ದು, ಅವರಿಗೆ ಜ್ಞಾನ ಮತ್ತು ಕೌಶಲ್ಯಗಳನ್ನು ಒದಗಿಸುವ ಮೂಲಕ ಉತ್ತಮ ಭವಿಷ್ಯ ಹಾಗೂ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಬೇಕು ಎಂದರು.

ಕಾಲೇಜಿನ ಪ್ರಾಂಶುಪಾಲ ಡಾ. ಎಚ್. ಮಹಾಬಲೇಶ್ವರ ಮಾತನಾಡಿ, ಇಂದಿನ ಶತಮಾನದಲ್ಲಿ ಶಿಕ್ಷಕರು ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ. ಶಿಕ್ಷಕರು ನಾಳಿನ ಸಮಾಜದ ನಾಯಕರನ್ನು ರೂಪಿಸುವ ವಾಸ್ತುಶಿಲ್ಪಿಗಳಾಗಿದ್ದು, ಬದಲಾಗುತ್ತಿರುವ ತಂತ್ರಜ್ಞಾನ ಹಾಗೂ ಶಿಕ್ಷಣ ಕ್ಷೇತ್ರದ ಅವಕಾಶಗಳನ್ನು ಬಳಸಿಕೊಂಡು ಭವಿಷ್ಯದ ಶಿಕ್ಷಣ ವ್ಯವಸ್ಥೆಯನ್ನು ರೂಪಿಸಬೇಕು ಎಂದು ಅಭಿಪ್ರಾಯಪಟ್ಟರು.

# ಬಳ್ಳಾರಿ ಸಾರ್ವಜನಿಕ ಕೇಂದ್ರ ಗ್ರಂಥಾಲಯವನ್ನು ರಜಾ ದಿನಗಳಲ್ಲೂ ತೆರೆಯಲು ಮನವಿ




**ಬಳ್ಳಾರಿ, ಆ.25.** ಗ್ರಂಥಾಲಯಕ್ಕೆ ಪ್ರತಿದಿನ ವಿದ್ಯಾರ್ಥಿಗಳು ಮತ್ತು ಹಿರಿಯ ನಾಗರಿಕರು ಸೇರಿದಂತೆ ನೂರಾರು ಜನರು ಓದಲು ಬರುತ್ತಾರೆ. ಅದರಲ್ಲೂ ಹೆಚ್ಚು ಉದ್ಯೋಗಾಕಾಂಕ್ಷಿಗಳು ಬರುತ್ತಾರೆ. ನೇಮಕಾತಿಗಳು ಬಹಳ ಸಮಯದಿಂದಲೂ ನಡೆದಿರಲಿಲ್ಲ.

ಇತ್ತೀಚೆಗೆ ನಡೆದ ಹಲವಾರು ಯುವಜನರ ಹೋರಾಟಗಳ ಪ್ರತಿಫಲವಾಗಿ ಇಂದು ನೇಮಕಾತಿಗಳಾಗುತ್ತಿರುವುದರಿಂದ ಅಭ್ಯರ್ಥಿಗಳು ಸಿದ್ಧತೆ ನಡೆಸಬೇಕಿದೆ. ಮನೆಗಳಲ್ಲಿ ಓದುವ ವಾತಾವರಣ ಇಲ್ಲದ ಕಾರಣ, ನಗರದ ಗ್ರಂಥಾಲಯಗಳಲ್ಲಿ ಬಂದು ಓದುತ್ತಿರುವ ಉದ್ಯೋಗಾಕಾಂಕ್ಷಿಗಳ ಸಂಖ್ಯೆ ಹೆಚ್ಚಾಗಿದೆ. ಸಾರ್ವಜನಿಕ ಗ್ರಂಥಾಲಯಗಳು ಪ್ರತಿ ಸೋಮವಾರ, ಎರಡನೇ ಮಂಗಳವಾರ, ನಾಲ್ಕನೇ ಶನಿವಾರ ಮತ್ತು ಸರ್ಕಾರಿ ರಜೆಗಳು ಹೀಗೆ ಹಲವಾರು ರಜೆಗಳಿರುವುದರಿಂದ ಉದ್ಯೋಗಾಕಾಂಕ್ಷಿಗಳು ನಿರಂತರ ಓದುವ ಅಭ್ಯಾಸಕ್ಕೆ ಸಮಸ್ಯೆ ಉಂಟಾಗುತ್ತದೆ. ಇಲ್ಲವಾದಲ್ಲಿ ಖಾಸಗಿ ಗ್ರಂಥಾಲಯಕ್ಕೆ ತಿಂಗಳಿಗೆ ಸಾವಿರಾರು ರೂಪಾಯಿಗಳನ್ನು ಕೊಟ್ಟು ಓದಬೇಕಿದೆ. ಉದ್ಯೋಗವನ್ನು ಅರಸುತ್ತಿರುವ ವಿದ್ಯಾರ್ಥಿಗಳಿಗೆ ಇದಕ್ಕಾಗಿ ಸಾವಿರಾರು ರೂಪಾಯಿ ಖರ್ಚು ಮಾಡುವುದು ಕಷ್ಟ.. ಹಾಗಾಗಿ ರಜೆ ದಿನಗಳಲ್ಲೂ ಸಾರ್ವಜನಿಕ ಗ್ರಂಥಾಲಯ ತೆರೆದರೆ ಸಹಾಯವಾಗುತ್ತದೆ. ಹಾಗಾಗಿ ಈ ಕೆಳಗಿನ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕೆಂದು ಆಗ್ರಹಿಸಿ ಮನವಿ ಸಲ್ಲಿಸಲಾಯಿತು.

**ಬೇಡಿಕೆಗಳು.** 1. ರಜೆ ದಿನಗಳಲ್ಲಿ ಸಾರ್ವಜನಿಕ ಗ್ರಂಥಾಲಯಗಳನ್ನು ತೆರೆಯಬೇಕು.

2. ಹೊರಾಂಗಣದಲ್ಲಿ ಕೂತು ಊಟ ಮಾಡಲು ಕಲ್ಲು ಬೆಂಚುಗಳು ಮತ್ತು ಮೇಲ್ಛಾವಣಿಯ ವ್ಯವಸ್ಥೆ ಬೇಕು.

ಈ ಸಂದರ್ಭದಲ್ಲಿ ಎಐಡಿವೈಓ ಜಿಲ್ಲಾ ಕಾರ್ಯದರ್ಶಿ ಜಗದೀಶ್ ನೇಮಕಲ್, ಸದಸ್ಯರಾದ ಪ್ರಮೋದ್ , ಮತ್ತು ಸಿದ್ದು ಮತ್ತು ವಿದ್ಯಾರ್ಥಿಗಳಾದ ರಂಗಸ್ವಾಮಿ, ಹನುಮೇಶ, ಯುವರಾಜ್ .ಕೆ, ಶಿವಶಂಕರ, ಮೋಹನ ಇತರರು ಭಾಗವಹಿಸಿದ್ದರು.

# ಸಚಿವ ನಾಗೇಂದ್ರ ವಿರುದ್ಧ ಆರೋಪವಿದ್ದರೆ ಚರ್ಚೆಗೆ ಬನ್ನಿ: ಬಿಜೆಪಿಗೆ ಹರಿಪ್ರಸಾದ್ ಆಹ್ವಾನ

**ಬೀದರ್, ಆ. 25:** ಸಚಿವ ನಾಗೇಂದ್ರ ಅವರ ವಿರುದ್ಧ ಆರೋಪಗಳಿದ್ದರೆ ಬಿಜೆಪಿಯವರು ಚರ್ಚಿಸಲಿ. ಆರೋಪ ಸಾಬೀತಾದರೆ ನಾವೇ ಕ್ರಮ ಕೈಗೊಳ್ಳುತ್ತೇವೆ. ಈ ಕುರಿತು ಸದನದಲ್ಲಿ ಬಿಜೆಪಿಯವರು ಚರ್ಚೆ ಯಾಕೆ ಮಾಡುತ್ತಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಪ್ರಶ್ನಿಸಿದ್ದಾರೆ. ಸುದ್ದಿಗಾರರ ಜತೆ, ನಾವು ಸದನವನ್ನು ನಿಯಮಾನುಸಾರ ನಡೆಸುತ್ತೇವೆ. ಹೀಗೆ ಯಾರದೋ ಮೇಲೆ ಆರೋಪ ಮಾಡುವುದಾದರೆ ನಾವೂ ಪ್ರಧಾನಿಗಳ ರಾಜೀನಾಮೆ ಕೇಳುತ್ತೇವೆ. ನೀಡುತ್ತಾರಾ ಎಂದರು.




> ದೇಶ ವಿರೋಧಿ ಚಟುವಟಿಕೆ ಮಾಡಿದಾಗ ಅದರ ವಿರುದ್ಧ ನಾವು ಮಾತನಾಡಬೇಕಾಗುತ್ತದೆ. ಆರ್‌ಎಸ್‌ಎಸ್‌ನವರು ದೇಶದ ಸ್ವಾತಂತ್ರ್ಯ ವಿರುದ್ಧ ಇದ್ದವರು, ಅವರ್ಯಾರೂ ಸ್ವಾತಂತ್ರ್ಯ ಹೋರಾಟದಲ್ಲೂ ಪಾಲ್ಗೊಂಡಿಲ್ಲ. ಅವರನ್ನು ತಲೆಯ ಮೇಲಿಟ್ಟುಕೊಂಡು ಸುತ್ತೋಕಾಗುತ್ತಾ. ಸ್ವಾತಂತ್ರ್ಯ ಹೋರಾಟದ ಆಶಯಗಳನ್ನೇ ಬುಡಮೇಲು ಮಾಡಲು ಅವರು ಪ್ರಯತ್ನಿಸುತ್ತಿದ್ದಾರೆ. ಸಂಘ ಪರಿವಾರದವರು ಸಂವಿಧಾನ, ರಾಷ್ಟ್ರಗೀತೆ, ರಾಷ್ಟ್ರ ತ್ರಿವರ್ಣ ಧ್ವಜದ ವಿರೋಧಿಗಳು. ಅವರಿಗೆ ಪೂಜೆ ಮಾಡಕಾಗುತ್ತಾ? ಅವರನ್ನು ವಿರೋಧಿಸಬೇಕು. ನಾವು ವಿರೋಧಿಸುತ್ತೇವೆ.

ರಾಜ್ಯದಲ್ಲಿನ ಬರ ಪರಿಸ್ಥಿತಿಗೆ ಸ್ಪಂದಿಸದ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರನ್ನು ರಕ್ಷಿಸುವ ಉದ್ದೇಶದಿಂದ ರಾಜ್ಯ ಬಿಜೆಪಿಯು ಸಚಿವ ಬಿ.ನಾಗೇಂದ್ರ ಅವರ ಹೆಸರಿನಲ್ಲಿ ಹೋರಾಟ ನಡೆಸುತ್ತಿದೆ. ಇದರಲ್ಲಿ ಜನರ ಯಾವುದೇ ಹಿತ ಅಡಗಿಲ್ಲ. ರಾಜ್ಯದ 18 ಜಿಲ್ಲೆಗಳಲ್ಲಿ ತೀವ್ರ ಬರದ ಪರಿಸ್ಥಿತಿ ಇದ್ದು ಜನರು ಪರದಾಡುತ್ತಿದ್ದಾರೆ. ಸದನದಲ್ಲಿ ರಾಜ್ಯದಲ್ಲಿರುವ ಬರ ಪರಿಸ್ಥಿತಿ ಮೇಲೆ ಚರ್ಚೆ ನಡೆದರೆ, ಕೇಂದ್ರದ ವಿರುದ್ಧವೇ ಮಾತನಾಡ ಬೇಕಾಗುತ್ತದೆ ಎಂಬ ಕಾರಣಕ್ಕೆ ಬಿಜೆಪಿ ನಾಗೇಂದ್ರ ಹೆಸರಿನಲ್ಲಿ ಧರಣಿ ನಡೆಸುತ್ತಿದೆಯಷ್ಟೇ ಎಂದು ಹರಿಹಾಯ್ದರು. ಈ ಕಾರಣಕ್ಕಾಗಿ ಮುಖ್ಯ ಮಂತ್ರಿಗಳು ಈಚೆಗೆ ದಿಲ್ಲಿಯಲ್ಲಿ ರಾಜ್ಯದ ಸಂಸದರ ಸಭೆ ನಡೆಸಿ, ಪ್ರಧಾನಿಗಳಿಗೆ ರಾಜ್ಯಕ್ಕೆ ಬರ ಪರಿಹಾರವಾಗಿ 10 ಸಾವಿರ ಕೋಟಿ ನೀಡಬೇಕು, ಕೇಂದ್ರದ ಬರ ಅಧ್ಯಯನ ತಂಡ ಕಳುಹಿಸುವಂತೆ ಕೋರಿದ್ದರು.

# ತಾಯಿಯ ಎದೆಹಾಲಿನಿಂದ ಮಗುವಿನ ರೋಗ ನಿರೋಧಕ ಶಕ್ತಿ ಹೆಚ್ಚಳ: ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ

**ವಿಜಯಪುರ, ಆ. 25** ಜನನದ ನಂತರದ ಮೊದಲ 10 ದಿನಗಳಲ್ಲಿ ತಾಯಿ ನೀಡುವ ಎದೆಹಾಲು ಮಗುವಿಗೆ ಅಗತ್ಯವಾದ ಪೋಷಕಾಂಶ ಒದಗಿಸುವುದರ ಜೊತೆಗೆ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಕಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಹೇಳಿದರು. ನಗರದ ಜಿಲ್ಲಾಸ್ಪತ್ರೆಯ ಆವರಣದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ, ಆಸ್ಪತ್ರೆಗೆ ಚಿಕಿತ್ಸೆಗಾಗಿ ಆಗಮಿಸಿದ್ದ ತಾಯಂದಿರೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಅವರು ಮಾತನಾಡಿದರು.



ಹಾಗಾಗಿ ತಾಯಂದಿರು ಮಗುವಿಗೆ ಎದೆಹಾಲು ನೀಡುವುದು ಅತ್ಯಂತ ಮಹತ್ವದ್ದಾಗಿದೆ ಎಂದವರು ಹೇಳಿದರು. ಈ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರು ಸರ್ಕಾರದ ಮಾತೃವಂದನಾ ಯೋಜನೆಗೆ ನೋಂದಣಿ ಮಾಡಿ ಕೊಳ್ಳುವಂತೆ ಸಲಹೆ ನೀಡಿದರು.

ಮಗುವಿನ ಆರೈಕೆ ಹಾಗೂ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡುವಲ್ಲಿ ಯಾವುದೇ ಲೋಪ 'ವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಆಸ್ಪತ್ರೆಯ ಅಧಿಕಾರಿಗಳು ಹಾಗೂ ವೈದ್ಯಕೀಯ ಸಿಬ್ಬಂದಿಗೆ ಸೂಚಿಸಿದರು.

ಇದೇ ವೇಳೆ ಆಸ್ಪತ್ರೆಯ ಸ್ವಚ್ಛತಾ ಸಿಬ್ಬಂದಿಯೊಂದಿಗೆ ಸಮಾಲೋಚನೆ ನಡೆಸಿದ ಡಾ. ನಾಗಲಕ್ಷ್ಮಿ ಚೌಧರಿ ಅವರು, ಆಸ್ಪತ್ರೆಯ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಹಾಗೂ ಸ್ವಚ್ಛತಾ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದರು.

ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ

# ಮೃತ ನೌಕರರ ಕುಟುಂಬದ ರಕ್ಷಣೆ ನಮ್ಮ ಹೊಣೆ: ಅರುಣಕುಮಾರ ಪಾಟೀಲ್

**ಕಲಬುರಗಿ, ಆ. 25 :** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುವಾಗ ಅಕಾಲಿಕ ಮರಣ ಹೊಂದಿದ ಹಾಗೂ ಅಪಘಾತದಲ್ಲಿ ಜೀವ ಕಳೆದುಕೊಂಡ ಸಂಸ್ಥೆಯ ಚಾಲಕರು ಮತ್ತು ನೌಕರರ 18 ಕುಟುಂಬಗಳಿಗೆ ತಲಾ 12.50 ಲಕ್ಷ ರೂ. ಸುತ್ತೋಲೆ 2021 ರನ್ವಯ ಎರಡು ಕುಟುಂಬಕ್ಕೆ 10 ಲಕ್ಷ ರೂ ಪರಿಹಾರ ಧನವನ್ನು ನೀಡಲಾಗಿದೆ. ಈ ಮೂಲಕ ಸಾರಿಗೆ ಸಂಸ್ಥೆ ಮೃತರ ಕುಟುಂಬದ ರಕ್ಷಣೆಯ ಹೊಣೆ ಸಮರ್ಥವಾಗಿ ನಿರ್ವಹಿಸಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ್ ಪಾಟೀಲ ಹೇಳಿದರು.



ಸಂಸ್ಥೆಯು ಕೇವಲ ಉದ್ಯೋಗ ನೀಡುವ ಸ್ಥಳವಲ್ಲ, ಅವರನ್ನು ದುಡಿಸಿಕೊಂಡು ಕೈಬಿಡುವದಿಲ್ಲ. ಈ ಸಂಸ್ಥೆಯೊಂದು ಕುಟುಂಬವಿದ್ದಂತೆ. ನೌಕರರ ಹಠಾತ್ ಅಗಲಿಕೆಯಿಂದಾಗಿ ಆ ಕುಟುಂಬಗಳು ಎದುರಿಸುತ್ತಿರುವ ನೋವು ಕೇವಲ ಅವರದ್ದಲ್ಲ, ಸಂಸ್ಥೆಯದ್ದೂ ಆಗಿದೆ. ಮೃತರ ಕುಟುಂಬಸ್ಥರಿಗೆ ನಿಯಮಾನುಸಾರ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ಸಂಸ್ಥೆ ಸಂಪೂರ್ಣ ಬದ್ಧವಾಗಿದೆ. ಪರಿಹಾರವಾಗಿ ಪಡೆದ ಹಣವನ್ನು ಮಧ್ಯವರ್ತಿಗಳ ಮಾತಿಗೆ ಮರುಳಾಗದೆ, ಸುರಕ್ಷಿತವಾಗಿ ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟು ಮಕ್ಕಳ ಶಿಕ್ಷಣ ಹಾಗೂ ಭವಿಷ್ಯಕ್ಕಾಗಿ ಬಳಸಿಕೊಳ್ಳುವಂತೆ ಕುಟುಂಬಸ್ಥರಿಗೆ ತಿಳಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ ಸುಶೀಲಾ ಅವರು ಮಾತನಾಡಿ, ಸೇವೆಯಲ್ಲಿದ್ದಾಗ ಸಿಬ್ಬಂದಿಯನ್ನು ಕಳೆದುಕೊಂಡಿರುವುದು ತೀವ್ರ ದುಃಖದ ಸಂಗತಿಯಾಗಿದೆ. ಅವರ ಅಗಲಿಕೆಯಿಂದ ಉಂಟಾದ ಶೂನ್ಯವನ್ನು ತುಂಬಲು ಸಾಧ್ಯವಿಲ್ಲದಿದ್ದರೂ, ಅವರ ಕುಟುಂಬಗಳ ಭವಿಷ್ಯಕ್ಕೆ ಮತ್ತು ಮಕ್ಕಳ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವಾಗಲಿ ಎಂಬ ಉದ್ದೇಶದಿಂದ ಈ ಆಂತರಿಕ ವಿಮಾ ಯೋಜನೆಯ ಮೂಲಕ ಪರಿಹಾರವನ್ನು ತಲುಪಿಸಲಾಗುತ್ತಿದೆ. ಪಡೆದ ಹಣವನ್ನು ವ್ಯರ್ಥಪಡಿಸದೆ ಕುಟುಂಬದ ಹಾಗೂ ಮಕ್ಕಳ ಭವಿಷ್ಯಕ್ಕಾಗಿ ಭದ್ರವಾಗಿ ಬಳಸಿಕೊಳ್ಳಿ, ಇದೇ ತಿಂಗಳ ಸಂಭವಿಸಿದ ರಸ್ತೆ ಅಪಘಾತದಲ್ಲಿ ನಿಗಮದ ಇಬ್ಬರು ಸಿಬ್ಬಂದಿ ಮೃತಪಟ್ಟು, ಹಲವು ಪ್ರಯಾಣಿಕರು ಗಾಯಗೊಂಡಿದ್ದರು. ಆ ಘಟನೆ ನಡೆದ ತಕ್ಷಣವೇ ನಿಗಮದ ಅಧ್ಯಕ್ಷರು ಆಸ್ಪತ್ರೆಗಳಿಗೆ ಭೇಟಿ ನೀಡಿ ಗಾಯಾಳುಗಳಿಗೆ ಸಾಂತ್ವನ ಹೇಳಿದ್ದರು. ಜೊತೆಗೆ ಗಾಯಗೊಂಡ ಪ್ರಯಾಣಿಕರ ಸಂಪೂರ್ಣ ವೈದ್ಯಕೀಯ ಚಿಕಿತ್ಸಾ ವೆಚ್ಚವನ್ನು ನಿಗಮದ ವತಿಯಿಂದಲೇ ಭರಿಸಲಾಗಿದ್ದು, ಸಂತ್ರಸ್ತ ಕುಟುಂಬಗಳಿಗೆ ನಿಗಮವು ಸದಾ ನೈತಿಕ ಮತ್ತು ಆರ್ಥಿಕ ಬೆಂಬಲವಾಗಿ ನಿಲ್ಲಲಿದೆ ಎಂದರು.

ಮುಖ್ಯ ಕಾರ್ಮಿಕ ಕಲ್ಯಾಣ ಅಧಿಕಾರಿ ಸುನೀಲಕುಮಾರ್ ಚೇಂದ್ರಿ ಅವರು ಮಾತನಾಡಿ, ಸಂಸ್ಥೆಯು 2008 ರಿಂದ ಆಂತರಿಕ ಗುಂಪು ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಸಿಬ್ಬಂದಿಗಳ ಕ್ಷೇಮಾಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದೆ. ಆರಂಭದಲ್ಲಿ ಸಣ್ಣ ಪ್ರಮಾಣದಲ್ಲಿ ಪ್ರಾರಂಭಗೊಂಡ ಈ ಯೋಜನೆಯು ಪ್ರಸ್ತುತ 12.50 ಲಕ್ಷ ರೂ. ಪರಿಹಾರ ಸೌಲಭ್ಯವನ್ನು ಒದಗಿಸುವ ಮಟ್ಟಕ್ಕೆ ವಿಸ್ತರಿಸಿದೆ. ಸಂಸ್ಥೆಯ ಆಡಳಿತ ಮಂಡಳಿಯು ಬ್ಯಾಂಕಗಳ ಒಪ್ಪಂದದೊಂದಿಗೆ ಕರ್ತವ್ಯ ನಿರತ ಅಥವಾ ವೈಯಕ್ತಿಕ ಅಪಘಾತದಲ್ಲಿ ಮೃತಪಟ್ಟ ಚಾಲಕ ಹಾಗೂ ಸಿಬ್ಬಂದಿಗಳ ಕುಟುಂಬಕ್ಕೆ 1 ಕೋಟಿ ರೂಗಳ ಭದ್ರತಾ ವಿಮೆಯನ್ನು ಒದಗಿಸುತ್ತಿದೆ. ಅಲ್ಲದೆ ಸಾಮಾನ್ಯ ಮರಣ ಹೊಂದಿದ ಸಿಬ್ಬಂದಿ ಕುಟುಂಬಕ್ಕೆ 5-6 ಲಕ್ಷ ರೂಗಳ ಸಹಾಯಧನ ದೊರೆಯಲಿದೆ. ಸಂಸ್ಥೆಯಿಂದ ದೊರೆಯುವ ಈ ಪರಿಹಾರ ಮೊತ್ತವನ್ನು ಕುಟುಂಬದ ಭವಿಷ್ಯ ಹಾಗೂ ಸುಧಾರಣೆಗೆ ಸರಿಯಾಗಿ ಬಳಸಿಕೊಳ್ಳಬೇಕು. ಅನಗತ್ಯ ವೆಚ್ಚಗಳಿಗೆ ದುರುಪಯೋಗಪಡಿಸಿಕೊಳ್ಳದೆ ಮಕ್ಕಳು ಮತ್ತು ಕುಟುಂಬದ ಆಸರೆಯಾಗಿ ವಿನಿಯೋಗಿಸಬೇಕೆಂದು ಮನವಿ ಮಾಡಿದರು.

'ಕನ್ನಡ ಸಾಹಿತ್ಯ -ಅಸ್ಪೃಶ್ಯತೆ; ಸಮಕಾಲೀನ ತಲ್ಲಣಗಳು'

# ಶುದ್ಧೀಕರಣದ ಹೆಸರಿನಲ್ಲಿ ಖರ್ಗೆ ಅಪಮಾನಿಸಿದ್ದು ಹೀನಕೃತ್ಯ: ಪ್ರೊ.ಎಚ್.ಟಿ.ಪೋತೆ ಖಂಡನೆ

**ಕಲಬುರಗಿ, ಆ. 25:** ಡಾ. ಬಿ. ಆರ್. ಅಂಬೇಡ್ಕರ್ ಕೇವಲ ಶೋಷಿತರಿಗೆ ಮಾತ್ರ ಸಂವಿಧಾನ ಬರೆದಿಲ್ಲ. ಪ್ರತಿಯೊಬ್ಬರೂ ಸಂವಿಧಾನದ ಸೌಲಭ್ಯ ಅನುಭವಿಸುತ್ತಿದ್ದಾನೆ. ಸಂವಿಧಾನ ರಕ್ಷಕರಾಗಿ ಶ್ರಮಿಸುತ್ತಿರುವ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಅವಮಾನಿಸಿರುವುದು ಬುದ್ಧ-ಬಸವ-ಗಾಂಧಿ ಹಾಗೂ ಡಾ. ಬಿ. ಆರ್. ಅಂಬೇಡ್ಕರ್ ನೆಲದಲ್ಲಿ ನಡೆದ ಹೀನಕೃತ್ಯ. ಈ ಘಟನೆ ಪ್ರಜ್ಞಾವಂತರು ಯೋಚಿಸುವಂತೆ ಮಾಡಿದೆ ಎಂದು ಕಲಬುರಗಿ ವಿವಿ ಕಲಾ ನಿಕಾಯದ ಡೀನ ಹಾಗೂ ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೊ.ಎಚ್.ಟಿ.ಪೋತೆ ಹೇಳಿದರು.



ಕಲಬುರಗಿ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಹರಿಹರ ಸಭಾಂಗಣದಲ್ಲಿ ಆಯೋಜಿಸಿದ 'ಕನ್ನಡ ಸಾಹಿತ್ಯ ಮತ್ತು ಅಸ್ಪೃಶ್ಯತೆ ; ಸಮಕಾಲೀನ ತಲ್ಲಣಗಳು' ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮನುಸ್ಮೃತಿ ಸುಡುವ ಹಾಗೂ ಮಾಹಡ್ ಚಳವಳಿಗೆ ಈಗ ನೂರು ವರ್ಷಗಳಾಗಿವೆ. ಸಾಂಪ್ರದಾಯ ಮತ್ತು ಗುಲಾಮಗಿರಿ ಯಿಂದ ಹೊರಬಂದು ಅನ್ಯಾಯ ಮತ್ತು ಅವಮಾನ ಖಂಡಿಸದಿದ್ದರೆ ಶೋಷಣೆಯಿಂದ ಮುಕ್ತಿ ಸಾಧ್ಯವಿಲ್ಲ ಎಂದರು.

# ವೈಯಕ್ತಿಕ ಕಾನೂನಿನಲ್ಲಿ ಮಾನವೀಯ ಆಯಾಮ: ನ್ಯಾ.ಕೆ.ವಿ.ಅರವಿಂದ



**ಕಲಬುರಗಿ, ಆ. 25:** ವೈವಾಹಿಕ ಕಾನೂನು ಕೇವಲ ಕಾನೂನಿನ ವಿಭಾಗ, ಉಪ–ವಿಭಾಗ ಹಾಗೂ ನಿಬಂಧನೆಗಳಿಗೆ ಸೀಮಿತವಾಗಿಲ್ಲ. ಅದು ಮನುಷ್ಯನ ಬದುಕು, ದಾಂಪತ್ಯದ ಒಡನಾಟ, ವಾತ್ಸಲ್ಯ, ಘನತೆಯ ರಕ್ಷಣೆ, ಮಕ್ಕಳ ಹಿತ, ಭಾವನಾತ್ಮಕ ನೋವು ಹಾಗೂ ಆರ್ಥಿಕ ಅವಲಂಬನೆಯಂತಹ ಮಾನವೀಯ ಆಯಾಮಗಳನ್ನು ಒಳಗೊಂಡಿದೆ ಎಂದು ಹೈಕೋರ್ಟ್ ನ್ಯಾಯಾಧೀಶ ಕೆ.ವಿ.ಅರವಿಂದ ಹೇಳಿದರು.

ಇಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಕಾನೂನು ವಿಭಾಗ, ಮರತೂರಿನ ವಿಜ್ಞಾನೇಶ್ವರ ಪ್ರತಿಷ್ಠಾನ ಟ್ರಸ್ಟ್ ಸಹಯೋಗದೊಂದಿಗೆ "ಸಹಜೀವನ ವಿಕಸನ: ವಿವಾಹದಲ್ಲಿ ಪಾವಿತ್ರ, ಕಾನೂನು ಬದ್ಧತೆ ಮತ್ತು ಸಾಮಾಜಿಕ ಆಯಾಮ" ಕುರಿತು ಆಯೋಜಿಸಿದ್ದ ರಾಷ್ಟ್ರೀಯ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಹಿಂದೂ ವಿವಾಹವು ಸಾಂಪ್ರದಾಯಿಕವಾಗಿ ಸಂಸ್ಕಾರವೆಂದು ಪರಿಗಣಿಸಲ್ಪಟ್ಟಿದ್ದು, ಅದು ಕೇವಲ ಕಾನೂನು ಬಾಂಧವ್ಯವಲ್ಲದೆ, ವ್ಯಕ್ತಿ ಮತ್ತು ಕುಟುಂಬಗಳ ನಡುವಿನ ಸಾಮಾಜಿಕ, ಸಾಂಸ್ಕೃತಿಕ ಹಾಗೂ ನೈತಿಕ ಬದ್ಧತೆಯ ಪ್ರತಿಕ ಎಂದರು.

ಕುಲಪತಿ ಪ್ರೊ.ಬಟ್ಟು ಸತ್ಯ ನಾರಾಯಣ ಅಧ್ಯಕ್ಷತೆ ವಹಿಸಿ ಮಾತನಾಡಿ, ವೈವಾಹಿಕ ಪ್ರಕರಣಗಳು ಇತರ ಹಲವು ಬಗೆಯ ಮೊಕದ್ದಮೆಗಳಿಗಿಂತ ಭಿನ್ನವಾಗಿವೆ. ಆಳವಾದ ವೈಯಕ್ತಿಕ ಸಂಬಂಧ, ಭಾವನೆ ಹಾಗೂ ಕುಟುಂಬದ ಭವಿಷ್ಯ ಒಳಗೊಂಡಿರುತ್ತದೆ. ಪಾಲಕರು ಬೇರ್ಪಡುವಿಕೆಯಲ್ಲಿ ಯಾವುದೇ ತಪ್ಪಿಲ್ಲದಿದ್ದರೂ ಮಕ್ಕಳು ಅದರ ಪರಿಣಾಮ ಎದುರಿಸಬೇಕಾಗುತ್ತದೆ. ವೈವಾಹಿಕ ವಿವಾದಗಳಿಗೆ ಸಂಬಂಧಿಸಿದ ನಿರ್ಧಾರಗಳಲ್ಲಿ ಮಕ್ಕಳ ಕಲ್ಯಾಣ, ಘನತೆ ಮತ್ತು ಭಾವನಾತ್ಮಕ ಯೋಗೇಮಕ್ಕೆ ಆದ್ಯತೆ ನೀಡಬೇಕು ಎಂದರು.

ಕಾನೂನು ಅಧ್ಯಯನ ನಿಕಾಯದ ಡೀನ್ ಪ್ರೊ.ಬಸವರಾಜ ಕುಬಕಡ್ಡಿ, ಕಾನೂನು ವಿಭಾಗದ ಮುಖ್ಯಸ್ಥ ಡಾ.ಅನಂತ ಚಿಂಚೂರೆ, ವಿಜ್ಞಾನೇಶ್ವರ ಪ್ರತಿಷ್ಠಾನ ಟ್ರಸ್ಟ್‌ನ ಟ್ರಸ್ಟಿ ಮಹಾದೇವಯ್ಯ ಕರದಳ್ಳಿ, ಸಂಚಾಲಕಿ ಡಾ.ರೇಣುಕಾ ಗುಬ್ಬೇವಾಡ್ ಇತರರಿದ್ದರು.

**ಮಾನಸಿಕ ಸಲಹೆಗಾರರ ವೃತ್ತಿಪರ ನೆರವಿನೊಂದಿಗೆ ಕುಟುಂಬದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹಾಗೂ ಸಂಬಂಧ ಮರು ಸ್ಥಾಪಿಸಲು ಬೆಂಗಳೂರಿನ ಮಧ್ಯಸ್ಥಿಕೆ ಕೇಂದ್ರ ಸಹಾಯವಾಗುತ್ತಿದೆ. ವೈವಾಹಿಕ ವಿಷಯಗಳಲ್ಲಿ ವಕೀಲರು ಮಹತ್ವದ ಜವಾಬ್ದಾರಿ ಹೊಂದಿದ್ದು, ಕೇವಲ ತೀರ್ಪು ಪಡೆಯುವುದಕ್ಕೆ ಸೀಮಿತವಾಗಬಾರದು. ಸಮನ್ವಯ, ಸಂಬಂಧಗಳ ಮರುಸ್ಥಾಪನೆ ಮತ್ತು ಕುಟುಂಬಗಳ ಯೋಗೇಮಕ್ಕೆ ಆದ್ಯತೆ ನೀಡಿ ಕಾರ್ಯನಿರ್ವಹಿಸಬೇಕು.**

**– ಕೆ.ವಿ.ಅರವಿಂದ, ನ್ಯಾಯಾಧೀಶ, ಹೈಕೋರ್ಟ್.**



ಸಮಾಜಕಲ್ಯಾಣ ಇಲಾಖೆಯ ಹಣವನ್ನು ಖಾತ್ರಿ ಯೋಜನೆಗಳಿಗೆ ಬಳಸುವುದನ್ನು ವಿರೋಧಿಸಿ ದಲಿತ ಸಂಘಟನೆಗಳ ಒಕ್ಕೂಟದ ಸದಸ್ಯರು ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# 'ಮಳೆ ಬಂದುರಷ್ಟೇ ಬೆಳಿ ಉಳಿತಾವ್ರೀ... ಇಲ್ಲಾಂದ್ರೆ ಎಲ್ಲಾ ಮಣ್ಣುಪಾಲು....'

**ಬೀದರ್, ಆ. 25:** 'ಈ ಸಲ ಮಳಿದ ಏನ್ ಹೇಳಕ್ ಆಗ್ತಿಲ್ರಿ. ಆಗಸ್ಟ್ ತಿಂಗಳ್ ಕೊನ್ಯಾಗ್ ಛಲೋ ಮಳಿ ಆದ್ರೆ ಬೆಳಿ ಉಳಿದಾವ್. ಈಗ ಮಳಿ ಬರಲಿಲ್ಲಾಂದ್ರೆ ಎಲ್ಲಾ ಹಾಳಾಗ್ತಾದ ನೋಡ್ರಿ...' ಇದು ತಾಲ್ಲೂಕಿನ ಚಿಮಕೋಡ್ ಗ್ರಾಮದ ಕಾಶಿನಾಥ ಅವರ ಮಾತುಗಳು.

ಇದು ಕಾಶಿನಾಥ ಒಬ್ಬರ ಮಾತುಗಳಲ್ಲ. ಬೀದರ್ ತಾಲ್ಲೂಕಿನ ಬಹುತೇಕ ರೈತರ ಅಭಿಪ್ರಾಯ ಇದೇ ಆಗಿದೆ. ಎಲ್ಲರೂ ಮಳೆಯ ನಿರೀಕ್ಷೆಯಲ್ಲಿ ಆಕಾಶ ನೋಡುತ್ತಿದ್ದಾರೆ. ಆದರೆ, ಸಮರ್ಪಕವಾಗಿ ಮಳೆ ಸುರಿಯುತ್ತಿಲ್ಲ. ದಿನವಿಡೀ ದಟ್ಟ ಕಾರ್ಮೋಡ ಕವಿದಿರುತ್ತದೆ. ಇನ್ನೇನು ಮಳೆ ಬರುತ್ತದೆ ಎನ್ನುವಷ್ಟರಲ್ಲಿ ಮೋಡಗಳು ಚದುರಿ ಆಕಾಶ ಶುಭ್ರವಾಗುತ್ತಿದೆ. ಮಳೆ ಬಂದರೂ ಐದ್ಹತ್ತು ನಿಮಿಷಗಳಿಗೆ ಸೀಮಿತವಾಗಿದೆ. ಮಳೆ ಸಮರ್ಪಕವಾಗಿ ಸುರಿಯದ ಕಾರಣ ರೈತರು ಆತಂಕದಲ್ಲಿ ದಿನ ಕಳೆಯುತ್ತಿದ್ದಾರೆ.

ಬೀದರ್ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 54,407 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹಾಕಿಕೊಳ್ಳಲಾಗಿತ್ತು. ಈ ಪೈಕಿ 21,200 ಹೆಕ್ಟೇರ್ ಪ್ರದೇಶದಲ್ಲಿ ಸೋಯಾ ಅವರೆ, 17,055 ಹೆಕ್ಟೇರ್‌ನಲ್ಲಿ ತೊಗರಿ ಬಿತ್ತನೆಯಾಗಿದೆ. ಇನ್ನುಳಿದ ಪ್ರದೇಶದಲ್ಲಿ ಉದ್ದು, ಹೆಸರು, ಹತ್ತಿ ಸೇರಿದಂತೆ ಇತರೆ ಬೆಳೆಗಳಿವೆ. ಸಕಾಲಕ್ಕೆ ಮಳೆಯಾಗದ ಕಾರಣ ಉದ್ದು, ಹೆಸರು ಬಹುತೇಕ ಈಗಾಗಲೇ ಹಾಳಾಗಿದೆ.

ಜುಲೈ ಕೊನೆಯ ವಾರದಲ್ಲಿ ಸತತ ಒಂದು ವಾರ ಉತ್ತಮ ಮಳೆ ಬಿದ್ದಿರುವ ಕಾರಣ ಸೋಯಾ ಅವರೆ, ತೊಗರಿ, ಹತ್ತಿ ಸಸಿಗಳು ಎಲ್ಲೆಡೆ ನಳನಳಿಸುತ್ತಿವೆ. ಆದರೆ, ಇದಾದ ನಂತರದಲ್ಲಿ ಹೇಳಿಕೊಳ್ಳುವಂತಹ ಮಳೆಯಾಗಿಲ್ಲ. ಆದಕಾರಣ ಬೆಳೆಗಳಲ್ಲಿ ಬಾಡಿ ಹೋಗುತ್ತಿವೆ. ಇದೇ ರೈತರ ಚಿಂತೆಗೆ ಪ್ರಮುಖ ಕಾರಣವಾಗಿದೆ. ಹಾಕಿದ ಬಂಡವಾಳವೂ ಕೈಸೇರುವ ನಿರೀಕ್ಷೆ ಅವರಿಗಿಲ್ಲ.

**ನೀರು, ಮೇವಿಗಿಲ್ಲ ಸಮಸ್ಯೆ:** ಆಗಸ್ಟ್ ತಿಂಗಳು ಮುಗಿಯುವುದರೊಳಗೆ ಒಂದೆರಡು ಸಲ ಉತ್ತಮ ಮಳೆಯಾಗಬೇಕು. ಮಳೆಯಾದರಷ್ಟೇ ಬೆಳೆಗಳು ಉಳಿಯಲು ಸಾಧ್ಯ. ಆದರೆ, ಆಗಾಗ ಸಾಧಾರಣ ಮಳೆ ಆಗುತ್ತಿರುವುದರಿಂದ ಎಲ್ಲೆಡೆ ಪರಿಸರ ಹಚ್ಚ ಹಸಿರಾಗಿದೆ. ಸದ್ಯ ಮೇವಿನ ಚಿಂತೆಯಿಲ್ಲ. ಬಾವಿ, ಕೊಳವೆಬಾವಿಗಳಲ್ಲಿ ನೀರಿದ್ದು, ಸದ್ಯಕ್ಕೆ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಇಲ್ಲ. ಆದರೆ, ಕೆರೆ ಕಟ್ಟೆಗಳು ತುಂಬಿಲ್ಲ. ಇದು ಕೂಡ ಚಿಂತೆ ಹೆಚ್ಚಿಸಿದೆ. ಇದೇ ಪರಿಸ್ಥಿತಿ ಇದ್ದರೆ ಮುಂದಿನ ದಿನಗಳಲ್ಲಿ ನೀರಿಗಾಗಿ ದೊಡ್ಡ ಸಮಸ್ಯೆ ಸೃಷ್ಟಿಯಾಗ ಬಹುದು. ಇನ್ನು, ತಾಲ್ಲೂಕು ವ್ಯಾಪ್ತಿಯಲ್ಲಿ ಹೇಳಿಕೊಳ್ಳುವಂತಹ ಗುಳೆ ಸಮಸ್ಯೆ ಇನ್ನೂ ಎದುರಾಗಿಲ್ಲ. ವಿಬಿ ಜಿ ರಾಮ್ ಜಿ ಅಡಿ ಎಷ್ಟೇ ಜನ ಕೆಲಸ ಕೇಳಿದರೂ ಕೊಡಲಾಗುತ್ತಿದೆ. ಕೂಲಿ ಕಾರ್ಮಿಕರು ಜಿಲ್ಲಾ ಕೇಂದ್ರಕ್ಕೆ ಬಂದು ಕೆಲಸ ನಿರ್ವಹಿಸುತ್ತಿದ್ದಾರೆ.

**ಸತತ ಮಳೆ ಕೊರತೆ:** ಬೀದರ್ ತಾಲ್ಲೂಕು ವ್ಯಾಪ್ತಿಯಲ್ಲಿ ಶೇ 48ರಷ್ಟು ಕೊರತೆ ಮಳೆ ದಾಖಲಾಗಿದೆ. ಜೂನ್‌ನಿಂದ ಇದುವರೆಗೆ ಬೀದರ್ ತಾಲ್ಲೂಕಿನಲ್ಲಿ 458.9 ಮಿ.ಮೀ ಮಳೆಯಾಗಬೇಕಿತ್ತು. ಆದರೆ, 237.8 ಮಿ.ಮೀ ಮಳೆಯಾಗಿದೆ. ಆಗಸ್ಟ್ ತಿಂಗಳಲ್ಲಿ 125.5 ಮಳೆಯಾಗಬೇಕಿತ್ತು. ಆದರೆ, 26.4 ಮಿ.ಮೀ ಮಳೆ ಬಿದ್ದಿದೆ. ಶೇ 79ರಷ್ಟು ಕೊರತೆ ಮಳೆಯಾಗಿದೆ. ಜುಲೈನಲ್ಲಿ 195.1 ಮಿ.ಮೀ ಮಳೆಯಾಗಬೇಕಿತ್ತು. ಆದರೆ, 156.5 ಮಿ.ಮೀ ಮಳೆ ಸುರಿದಿದೆ. ಶೇ 20ರಷ್ಟು ಕೊರತೆ ಮಳೆಯಾಗಿದೆ.

ಸಮರ್ಪಕವಾಗಿ ಮಳೆಯಾಗದ ಕಾರಣ ಬೀದರ್ ಜಿಲ್ಲೆಯಾದ್ಯಂತ ಬರದ ಛಾಯೆ ಆವರಿಸಿದೆ. ಮಳೆ ಕೊರತೆಯಿಂದ ಜಿಲ್ಲೆಯ ಯಾವ ತಾಲ್ಲೂಕಿನಲ್ಲಿ ಪರಿಸ್ಥಿತಿ ಹೇಗಿದೆ ಎನ್ನುವ ಚಿತ್ರಣ ಕಟ್ಟಿಕೊಡುವ ಪ್ರಯತ್ನ 'ಬರ ಬರ' ಸರಣಿ ಮೂಲಕ ಮಾಡಲಾಗುತ್ತಿದೆ.



**ಬೀದರ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಸುತ್ತಾಡಿ ಸಂಸದ ಸಾಗರ ಖಂಡ್ರೆ ಅವರು ಬರಗಾಲ ಸ್ಥಿತಿಯನ್ನು ವೀಕ್ಷಿಸಿದರು. ಅವರೊಂದಿಗೆ ಮಾಜಿ ಶಾಸಕ ಅಶೋಕ ಖೇಣಿ ಮತ್ತಿತರರಿದ್ದರು.**

# ರಾಯಚೂರು ಜಿಲ್ಲೆ: 3,21,396 ಮತದಾರರನ್ನು ಕೈಬಿಟ್ಟ ಜಿಲ್ಲಾಡಳಿತ



**ರಾಯಚೂರು, ಆ. 25:** ಜಿಲ್ಲೆಯ ಎಲ್ಲ ಮತಕ್ಷೇತ್ರಗಳಿಗೆ ಸಂಬಂಧಿಸಿದಂತೆ 2026ನೇ ಸಾಲಿನ ಕರಡು ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 13,93,163 ಮತದಾರರು ಕರಡು ಪಟ್ಟಿಯಲ್ಲಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪೂವಿತಾ ಹೇಳಿದ್ದಾರೆ.

ಹಿಂದಿನ ಮತದಾರರ ಪಟ್ಟಿಯಿಂದ ಒಟ್ಟು 3,21,396 ಮತದಾರರನ್ನು ಕೈಬಿಡಲಾಗಿದೆ. ಅದರಲ್ಲಿ ಮರಣ ಹೊಂದಿದವರು 61,385, ಶಾಶ್ವತವಾಗಿ ಸ್ಥಳಾಂತರಗೊಂಡವರು 1,87,941, ಗೈರು ಮತದಾರರು 30,733 ಹಾಗೂ ಇತರರು 365 ಇದ್ದಾರೆ ಎಂದು ನಗರದ ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

2025ರ ಮತದಾರರ ಪಟ್ಟಿಗೆ ಹೋಲಿಸಿದರೆ ಈ ಬಾರಿಯ ಕರಡು ಪಟ್ಟಿಯಲ್ಲಿ 3,21,396 (ಶೇ 18.75) ಮತದಾರರ ವ್ಯತ್ಯಾಸವಿದೆ. ಯುವ ಮತದಾರರು (18–19 ವಯಸ್ಸು): 11,56,627 ಜನರು ಕರಡು ಪಟ್ಟಿಯಲ್ಲಿದ್ದಾರೆ. ಅಲ್ಲದೆ 17,048 ಅಂಗವಿಕಲರು ಮತದಾರರು ಪಟ್ಟಿಯಲ್ಲಿದ್ದಾರೆ ಎಂದರು.

ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಹಕ್ಕುಆಕ್ಷೇಪಣೆ ಸಲ್ಲಿಸಲು ಆಗಸ್ಟ್ 27 ರಿಂದ ಅಕ್ಟೋಬರ್ 22 ರ ವರೆಗೆ ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

**ಹೊಸ ಮತದಾರರ ನೋಂದಣಿ:** ಅಕ್ಟೋಬರ್ 1, 2026ಕ್ಕೆ 18 ವಯಸ್ಸು ಪೂರ್ಣಗೊಳ್ಳುವ ಹೊಸ ಮತದಾರರು ಫಾರ್ಮ್–6 ಅನ್ನು ಆನ್‌ಲೈನ್ ಮೂಲಕ ಅಥವಾ ಬೂತ್‌ಮಟ್ಟದ ಅಧಿಕಾರಿಗಳ ಮೂಲಕ ಸಲ್ಲಿಸಿ ತಮ್ಮ ಹೆಸರನ್ನು ಸೇರಿಸಿಕೊಳ್ಳಬಹುದು. ಎಲ್ಲ ಪರಿಷ್ಕರಣೆ ಹಾಗೂ ಆಕ್ಷೇಪಣೆಗಳ ವಿಲೇವಾರಿಯ ನಂತರ ಅಂತಿಮ ಮತದಾರರ ಪಟ್ಟಿಯು ಅಕ್ಟೋಬರ್ 27 ರಂದು ಬಿಡುಗಡೆಯಾಗಲಿದೆ ಎಂದು ಹೇಳಿದರು.

# ಎಸ್‌ಐಆರ್ ಕರಡು ಪಟ್ಟಿಯಲ್ಲಿ 18.49 ಲಕ್ಷ ಮತದಾರರು, ಹೆಸರು ಸೇರಿಸಲು ಸೆ.23 ರವರೆಗೆ ಅವಕಾಶ: ಕಲಬುರಗಿ ಜಿಲ್ಲಾಧಿಕಾರಿ

**ಕಲಬುರಗಿ, ಆ. 25 :** ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಜಿಲ್ಲೆಯ ಒಂಬತ್ತು ವಿಧಾನಸಭಾ ಮತಕ್ಷೇತ್ರಗಳಲ್ಲಿ ಒಟ್ಟು 18.49 ಲಕ್ಷ ಮತದಾರರ ಹೆಸರುಗಳು ಕರಡು ಪಟ್ಟಿಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಇಕ್ರಂ ಶರೀಫ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲೆಯ ಪ್ರತಿಯೊಂದು ತಾಲೂಕುವಾರು ಹಾಗೂ ಒಂಬತ್ತು ವಿಧಾನಸಭಾ ಮತಕ್ಷೇತ್ರಗಳ ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದೆ. 14 ಸಾವಿರ ಯುವ ಮತದಾರರು ಸೇರ್ಪಡೆ: ಜಿಲ್ಲೆಯಲ್ಲಿ 18 ರಿಂದ 19 ವರ್ಷದೊಳಗಿನ ಯುವ ಮತದಾರರು ಜಿಲ್ಲೆಯಲ್ಲಿ 14,125 ಮತದಾರರು ಕರಡು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಾರೆ. ಇದರಲ್ಲಿ ಪುರುಷ ಯುವ ಮತದಾರರು 8325 ಇದ್ದರೆ, ಮಹಿಳಾ ಯುವ ಮತದಾರರು 5800 ಜನರಿದ್ದಾರೆ. 24,817 ಮತದಾರರು ಪಿಡಬ್ಲುಡಿ ಎಂದು ಗುರುತಿಸಲಾಗಿದೆ. ಇದರಲ್ಲಿ ಪುರುಷ 14,370 ಹಾಗೂ ಮಹಿಳೆಯರು 10,445 ರಿದ್ದಾರೆ ಎಂದು ಮಾಹಿತಿ ನೀಡಿದರು.

ಇಪಿ ಪ್ರಮಾಣ ಶೇ.56.14: ಜನಸಂಖ್ಯೆ ಆಧಾರಿತವಾಗಿ ಮತದಾರರ ಇ.ಪಿ ರೇಶೋ ಶೇ.56.14 ಇದೆ. ಇದು ಎಸ್‌ಐಆರ್‌ಗೂ ಮುಂಚೆ ಶೇ.70ರಷ್ಟಿತ್ತು. ಜಿಲ್ಲೆಯಲ್ಲಿ ಕರಡು ಮತದಾರರ ಪಟ್ಟಿಯಂತೆ ಜಿಲ್ಲೆಯ ಲಿಂಗಾನುಪಾತ 1000 ಪುರುಷರಿಗೆ 967 ಮಹಿಳೆಯರಿದ್ದಾರೆ ಎಂದರು. ಎಡಿಸಿ ರಾಯಪ್ಪ ಹುಣಸಗಿ, ಪ್ರೊಬೇಷನರ್ ಐ.ಎ.ಎಸ್. ಅಧಿಕಾರಿ ಶಿಖರ್ ಮೋಘಾ ಇದ್ದರು.

ಅರ್ಹ ಮತದಾರರಿಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು 60 ದಿನಗಳ ಕಾಲಾವಕಾಶ ನೀಡಲಾಗಿದೆ. ಪಟ್ಟಿಯಿಂದ ಹೆಸರು ಬಿಟ್ಟು ಹೋಗಿದ್ದರೆ ಸೇರ್ಪಡೆಗೆ ಫಾರ್ಮ್ 6, ತಿದ್ದುಪಡಿಗೆ ಫಾರ್ಮ್ 8 ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಸಾರ್ವಜನಿಕರು ಈ ಅವಕಾಶವನ್ನು ಸರಿಯಾಗಿ ಬಳಸಿಕೊಂಡು ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಪೂರ್ಣ ಸಹಕಾರ ನೀಡಬೇಕೆಂದರು.

**ಕಲಬುರಗಿ ಉತ್ತರ, ದಕ್ಷಿಣ ಕರಡು ಪಟ್ಟಿ:** ಕಲಬುರಗಿ ಉತ್ತರ ಹಾಗೂ ದಕ್ಷಿಣ ವಿಧಾನಸಭಾ ಕ್ಷೇತ್ರದ ಎಸ್‌ಐಆರ್ ಪ್ರಕ್ರಿಯೆ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಮತದಾರರ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿದ್ದರೆ, ಹೆಸರು ಸೇರ್ಪಡೆ, ತಿದ್ದುಪಡಿ ಅಥವಾ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸೆ.23ರ ವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ ಎಂದು ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಹೇಳಿದರು.



ನಗರದ ಮಹಾನಗರ ಪಾಲಿಕೆಯ ಟೌನ್‌ಹಾಲ್‌ನಲ್ಲಿ ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರದ ಮತ್ತು ದಕ್ಷಿಣ ವಿಧಾನಸಭಾ ಕ್ಷೇತ್ರದ ಎಸ್‌ಐಆರ್ ಕರಡುಪಟ್ಟಿ ಪ್ರಕಟ ಕುರಿತಂತೆ ಕರೆಯಲಾದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಉತ್ತರ ಕ್ಷೇತ್ರದಲ್ಲಿ 1,14,271 ಪುರುಷ, 1,15,685 ಮಹಿಳೆ, ಇತರ 41 ಸೇರಿ ಒಟ್ಟು 2,29,997 ಮತದಾರರಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಗೆ ಮುನ್ನ ಇದ್ದ ಒಟ್ಟು 3,35,254 ಮತದಾರರಲ್ಲಿ 8,048 ಮೃತರು, 17,833 ಗೈರು ಹಾಜರಾದವರು, 64,866 ಶಾಶ್ವತವಾಗಿ ಸ್ಥಳಾಂತರಗೊಂಡವರು, 5,179 ಈಗಾಗಲೇ ನೋಂದಾಯಿಸಿದವರು ಹಾಗೂ 9,331 ಇತರ ವ್ಯತ್ಯಾಸಗಳು ಸೇರಿ ಒಟ್ಟು 1,05,257 ಮತದಾರರ ಪಟ್ಟಿಯೊಂದ ಹೊರಗುಳಿದಿದ್ದಾರೆ. ಕರಡು ಪಟ್ಟಿಯಲ್ಲಿ9,597 ಅನೋಮಲೀಸ್ ಹಾಗೂ 16,261 ನೋ ಮ್ಯಾಪಿಂಗ್ ಪ್ರಕರಣಗಳು ಪತ್ತೆಯಾಗಿದ್ದು, ಇಂತಹ ಮತದಾರರಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಲಾಗುವುದು ಎಂದರು.

ದಕ್ಷಿಣದಲ್ಲಿ 1.96 ಲಕ್ಷ ಮತದಾರರು: ಮಹಾನಗರ ಪಾಲಿಕೆ ಉಪ ಆಯುಕ್ತೆ ಪ್ರಮೀಳಾ ಮಾತನಾಡಿ, ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಐಆರ್ ಕರಡು ಮತದಾರರ ಪಟ್ಟಿ ಪ್ರಕಟಿಸಿದ್ದು, 96,481 ಪುರುಷ, 1,00,008 ಮಹಿಳೆ, ಇತರೆ 33 ಸೇರಿ ಒಟ್ಟು 1,96,522 ಮತದಾರರಿದ್ದಾರೆ. ಇವರಲ್ಲಿ1,312 ಯುವ ಮತದಾರರು ಹಾಗೂ 1,702 ವಿಕಲಾಂಗ ಮತದಾರರಿದ್ದಾರೆ. ಕ್ಷೇತ್ರದಲ್ಲಿ ಲಿಂಗಾನುಪಾತ 1,037 ಇದೆ ಎಂದರು.

ಪಟ್ಟಿಯಲ್ಲಿ 12,648 ಅಸಂಗತ ಮತ್ತು 18,429 ಮ್ಯಾಪಿಂಗ್ ಆಗದ ಮತದಾರರು ಸೇರಿ ಒಟ್ಟು ಸುಮಾರು 31,000 ಮತದಾರರಿಗೆ ನೋಟಿಸ್ ನೀಡುವ ಪ್ರಕ್ರಿಯೆ ನಡೆಯಲಿದೆ. ವಿಚಾರಣೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು 16 ಹೆಚ್ಚುವರಿ ಎಇಆರ್‌ಒಗಳನ್ನು ನೇಮಿಸಲಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಮತಗಟ್ಟೆ ಹಂತದಲ್ಲಿ 5 ರಿಂದ 6 ಕೇಂದ್ರಗಳನ್ನು ವಿಲೀನಗೊಳಿಸಿ ವಿಚಾರಣೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

# ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಒತ್ತಾಯಿಸಿ ಹೋರಾಟ



**ರಾಯಚೂರು, ಆ. 25:** ರಾಜ್ಯದಲ್ಲಿ ರಜಪೂತ ಸಮಾಜವು ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿದ್ದು, ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ ಪ್ರತ್ಯೇಕ ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕು ಎಂದು ಆಗ್ರಹಿಸಿ ರಜಪೂತ ಸಮಾಜದ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದ ಜಿಲ್ಲಾಡಳಿತ ಕಚೇರಿ ಎದುರು ಧರಣಿ ನಡೆಸಿದರು.

ರಾಜ್ಯದಲ್ಲಿ ರಜಪೂತ ಸಮುದಾಯವು ಗಮನಾರ್ಹ ಜನಸಂಖ್ಯೆ ಹೊಂದಿದ್ದರೂ ರಾಜಕೀಯ ಹಾಗೂ ಆರ್ಥಿಕ ಪ್ರಾತಿನಿಧ್ಯದಿಂದ ವಂಚಿತವಾಗಿದೆ. ಸಮಾಜದ ಬಡ ಕುಟುಂಬಗಳು, ಕೂಲಿ ಕಾರ್ಮಿಕರು ಹಾಗೂ ವಿದ್ಯಾರ್ಥಿಗಳಿಗೆ ಸರ್ಕಾರದ ಸೌಲಭ್ಯಗಳು ತಲುಪುತ್ತಿಲ್ಲ. ಯುವಕರಿಗೆ ಉದ್ಯೋಗಾವಕಾಶ ಹಾಗೂ ಉನ್ನತ ಶಿಕ್ಷಣಕ್ಕೆ ನೆರವು ನೀಡಲು ಪ್ರತ್ಯೇಕ ನಿಗಮ ಅಥವಾ ಅಭಿವೃದ್ಧಿ ಮಂಡಳಿಯ ಅಗತ್ಯವಿದೆ ಎಂದರು.

ಸಮಾಜದ ಯುವ ಪೀಳಿಗೆಗೆ ಮಾರ್ಗದರ್ಶನದ ಕೊರತೆಯಿಂದಾಗಿ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತದ ಉಸ್ತುವಾರಿಯಲ್ಲಿ ರಜಪೂತ ಸಮಾಜದ ಕೌಟುಂಬಿಕ ಸಮೀಕ್ಷೆ ಹಾಗೂ ಡಿಜಿಟಲ್ ನೋಂದಣಿ ಪ್ರಕ್ರಿಯೆ ನಡೆಸಿ, ಸಮಗ್ರ ದತ್ತಾಂಶವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗಕ್ಕೆ ಸಲ್ಲಿಸಬೇಕು. ಆ ಮೂಲಕ ರಜಪೂತ ಸಮಾಜದ ಸಮಗ್ರ ಅಭಿವೃದ್ಧಿಗಾಗಿ ಪ್ರತ್ಯೇಕ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕು ಎಂದು ಪ್ರತಿಭಟನಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಮಾಜದ ಅಧ್ಯಕ್ಷ ಮನೋಹರ್ ಸಿಂಗ್, ಜಿಲ್ಲಾ ಉಪಾಧ್ಯಕ್ಷ ದತ್ತುಸಿಂಗ್, ಪ್ರಧಾನ ಕಾರ್ಯದರ್ಶಿ ಗೌತಮ ಪ್ರಸಾದ ಶುಕ್ಲಾ, ಪ್ರೇಮ ಪ್ರಸಾದ, ತುಳಜಾ ರಾಮಸಿಂಗ್, ಶಿವರಾಮ ಸಿಂಗ್, ಮಾನ್‌ಸಿಂಗ್, ಲಕ್ಷ್ಮೀಕಾಂತಸಿಂಗ್, ರಾಮಸಿಂಗ್, ಮಹೇಂದ್ರಸಿಂಗ್, ಮೋಹನಸಿಂಗ್ ಆರ್.ಕೆ., ಲಕ್ಷ್ಮಣ ಸಿಂಗ್, ರವಿಸಿಂಗ್, ಕಿಶನ್‌ಸಿಂಗ್, ಜಗದೀಶಸಿಂಗ್, ಅನಿಲಸಿಂಗ್, ಅಜಿತ್‌ಸಿಂಗ್, ಸಂದೀಪ್‌ಸಿಂಗ್, ಗಂಗೂಬಾಯಿ, ಮಧುಬಾಯಿ, ರೂಪಾಬಾಯಿ, ಅರ್ಚನಾಬಾಯಿ, ನೀತೂಬಾಯಿ, ಅಂಕಿತಾ, ಶಾಂತಬಾಯಿ, ಶಶಿಕಲಾ ಇತರರುಪಾಲ್ಗೊಂಡಿದ್ದರು.

# ಅಮರಾವತಿ ಎಕ್ಸ್‌ಪ್ರೆಸ್‌ನ ರೈಲನ್ನು ಕಾಕಿನಾಡವರೆಗೆ ವಿಸ್ತರಿಸಲು ನಾರಾ ಲೋಕೇಶ್ ಅವರಲ್ಲಿ ಮನವಿ



**ಬಳ್ಳಾರಿ, ಆ.25:** ಬಳ್ಳಾರಿ ಭಾಗದ ರೈಲು ಪ್ರಯಾಣಿಕರ ಬಹುದಿನಗಳ ಬೇಡಿಕೆಯಾಗಿರುವ ಅಮರಾವತಿ ಎಕ್ಸ್‌ಪ್ರೆಸ್ ರೈಲನ್ನು ಕಾಕಿನಾಡ ವರೆಗೆ ವಿಸ್ತರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಕೋರಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಆಂಧ್ರಪ್ರದೇಶದ ಸಚಿವ ನಾರಾ ಲೋಕೇಶ್ ಅವರಲ್ಲಿ ಮನವಿ ಮಾಡಿದೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯ ಬಿ. ಸತ್ಯಬಾಬು ಅವರು ಸಚಿವರಿಗೆ ಕುಡತಿನಿಯಲ್ಲಿ ಮಂಗಳವಾರ ಮನವಿ ಸಲ್ಲಿಸಿ, ಅಮರಾವತಿ ಎಕ್ಸ್‌ಪ್ರೆಸ್ ರೈಲು ಸಂಖ್ಯೆ 17226 ಮತ್ತು 17225 ಪ್ರಸ್ತುತ ನರಸಾಪುರಕ್ಕೆ ನಿಲ್ಲುತ್ತವೆ. ಈ ಮಾರ್ಗವನ್ನು ಕಾಕಿನಾಡಕ್ಕೆ ವಿಸ್ತರಿಸುವುದರಿಂದ ಆಗುವ ಅನುಕೂಲಗಳ ಕುರಿತು ಸಚಿವ ನಾರಾ ಲೋಕೇಶ್ ಅವರಿಗೆ ಮನವರಿಕೆ ಮಾಡಿಕೊಟ್ಟರು.

ಬಳ್ಳಾರಿ ಜಿಲ್ಲೆ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಪ್ರಯಾಣಿಕರು ಆಂಧ್ರ ಪ್ರದೇಶದ ವಿವಿಧ ನಗರಗಳಿಗೆ, ವಿಶೇಷವಾಗಿ ಕಾಕಿನಾಡು ಪ್ರದೇಶಕ್ಕೆ ಸಂಚರಿಸಲು ಅನುಕೂಲವಾಗಲಿದೆ.

ಈ ಭಾಗದ ಪ್ರವಾಸೋದ್ಯಮ, ವ್ಯಾಪಾರ, ಕೈಗಾರಿಕೆ, ಶಿಕ್ಷಣ, ಉದ್ಯೋಗ ಹಾಗೂ ಕೈಗಾರಿಕಾ ಕ್ಷೇತ್ರಗಳಿಗೂ ಪ್ರೋತ್ಸಾಹ ಸಿಗಲಿದೆ. ಪ್ರಯಾಣಿಕರು ಮತ್ತು ವ್ಯಾಪಾರ ವಲಯದ ಹಿತದೃಷ್ಟಿಯಿಂದ ಈ ಮನವಿಯನ್ನು ಪರಿಗಣಿಸಿ, ರೈಲ್ವೆ ಸಚಿವಾಲಯದ ಮೇಲೆ ಒತ್ತಡ ಹೇರುವ ಮೂಲಕ ರೈಲ್ವೆ ಮಾರ್ಗವನ್ನು ವಿಸ್ತರಣೆ ಮಾಡಸಬೇಕು ಎಂದು ಮನವಿ ಮಾಡಿದರು.

# ಡಾ.ಚನ್ನಬಸವರು ಕನ್ನಡದ ಪಟ್ಟದ್ದೇವರು ಎಂದೇ ಖ್ಯಾತಿ: ಡಾ.ಮಂಜುನಾಥ್

**ಬೀದರ, ಆ. 25:** ಅಂದಿನ ಹೈದರಾಬಾದಿನ ನಿಜಾಮನ ಆಳ್ವಿಕೆಯಲ್ಲಿ ಆ ಭಾಗದಲ್ಲಿ ಕನ್ನಡ ಕಲಿಸುವುದೇ ಅಪರಾಧವಾಗಿದ್ದರೂ, ಪಟ್ಟದ್ದೇವರು ಕನ್ನಡದ ಉಳಿವಿಗಾಗಿ ಧೈರ್ಯದಿಂದ ಹೋರಾಡಿದರು. ಶಾಲೆಯ ಹೊರಗೆ ಉರ್ದು ನಾಮಫಲಕ ಅಳವಡಿಸಿ, ಒಳಗೆ ಕನ್ನಡ ಕಲಿಸುವ ಮೂಲಕ ಕನ್ನಡದ ಬಗೆಗಿನ ಅವರಲ್ಲಿದ್ದ ಅಭಿಮಾನದ ಜ್ಯೋತಿ ಬೆಳಗಿಸಿದರು. ಹೀಗಾಗಿ ಅವರು "ಕನ್ನಡದ ಪಟ್ಟದ್ದೇವರು" ಎಂದೇ ಖ್ಯಾತರಾದರು. ಕನ್ನಡ ಭಾಷೆಯ ಮೇಲಿನ ಅವರ ಪ್ರೀತಿ ಕೇವಲ ಅಭಿಮಾನವಾಗಿರದೆ, ಕನ್ನಡಿಗರ ಅಸ್ಮಿತೆಯ ರಕ್ಷಣೆಯ ಹೋರಾಟವಾಗಿತ್ತು ಎಂದು ಹೊಳಲ್ಕೆ ಕೊಟ್ಟೆ ನಂಜಪ್ಪ ಗುರು ಕಾಲೇಜಿನ ಉಪನ್ಯಾಸಕ ಡಾ. ಜಿ.ವಿ. ಮಂಜುನಾಥ್ ಹೇಳಿದರು.

ಜಿಲ್ಲೆಯ ಭಾಲ್ಕಿ ಹಿರೇಮಠದ ಲಿಂಗೈಕ್ಯ ಡಾ. ಚೆನ್ನಬಸವ ಪಟ್ಟದ್ದೇವರು 1936ರಲ್ಲಿಯೇ ನಿಜಾಮನ ಆಳ್ವಿಕೆಗೆ ಒಳಪಟ್ಟಿದ್ದ ನಾರಾಯಣಖೇಡ ತಾಲೂಕಿನ ಮೊರ್ಗಿ ಗ್ರಾಮದಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸುವ ಮೂಲಕ ಶೈಕ್ಷಣಿಕ ಕ್ರಾಂತಿಗೆ ನಾಂದಿ ಹಾಡಿದರು. ಶಿಕ್ಷಣ ಸಂಸ್ಥೆಯನ್ನು ನಡೆಸಲು ಪ್ರಸಾದ ನಿಲಯವನ್ನೂ ಆರಂಭಿಸಿ, ಮುಷ್ಠಿ ಫಂಡ್‌ನ ನೆರವಿನಿಂದ ಶಾಲೆ ಮತ್ತು ಪ್ರಸಾದ ನಿಲಯವನ್ನು ಸುಸೂತ್ರವಾಗಿ ನಡೆಸಿದರು. ಬಳಿಕ ಭಾಲ್ಕಿ ಹಾಗೂ ಬೀದರ್‌ನಲ್ಲಿಯೂ ಶಾಲಾ–ಕಾಲೇಜುಗಳನ್ನು ಆರಂಭಿಸಿ, ಅವುಗಳಿಗೆ ಸಿದ್ಧರಾಮೇಶ್ವರ, ಅಕ್ಕಮಹಾದೇವಿಯಂತಹ ಶಿವಶರಣರ ಹೆಸರುಗಳನ್ನು ಇಟ್ಟಿದ್ದು ಅವರ ಶರಣತತ್ವದ ಬದ್ಧತೆಗೆ ಸಾಕ್ಷಿಯಾಗಿದೆ.




**ಬೀದರ ನಗರದಲ್ಲಿ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಶ್ರಾವಣ ಮಾಸದ ಪ್ರಯುಕ್ತ ಆಯೋಜಿಸಿರುವ ಅನುಭಾವ ಶ್ರಾವಣ : ಶರಣ ಚಿಂತನ ಮಾಲಿಕೆಯ ಒಂಬತ್ತನೇ ದಿನದ ಚಿಂತನಗೋಷ್ಠಿ ಶ್ರೀಮಠದ ಬಸವೇಶ್ವರ ಸಭಾಂಗಣದಲ್ಲಿ ನಡೆದ ಭಾಲ್ಕಿ ಹಿರೇಮಠದ ಲಿಂಗೈಕ ಡಾ. ಚೆನ್ನಬಸವ ಪಟ್ಟದೇವರ ವಿಷಯ ಕುರಿತು ಡಾ.ಜಿ.ವಿ.ಮಂಜುನಾಥ ಅವರು ಮಾತನಾಡಿದರು.**

ಪಟ್ಟದ್ದೇವರು ಬಿತ್ತಿದ ಈ ಶಿಕ್ಷಣದ ಬೀಜ ಹೆಮ್ಮರವಾಗಿ ಬೆಳೆದು, ಅನೇಕ ಶಿಕ್ಷಣ ಸಂಸ್ಥೆಗಳ ಮೂಲಕ ಜ್ಞಾನಪ್ರಸಾರ ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ನಗರದಲ್ಲಿ ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ವತಿಯಿಂದ ಶ್ರಾವಣ ಮಾಸದ ಪ್ರಯುಕ್ತ ಆಯೋಜಿಸಿರುವ ಅನುಭಾವ ಶ್ರಾವಣ : ಶರಣ ಚಿಂತನ ಮಾಲಿಕೆಯ ಒಂಬತ್ತನೇ ದಿನದ ಚಿಂತನಗೋಷ್ಠಿ ಶ್ರೀಮಠದ ಬಸವೇಶ್ವರ ಸಭಾಂಗಣದಲ್ಲಿ ನಡೆದ ಭಾಲ್ಕಿ ಹಿರೇಮಠದ ಲಿಂಗೈಕ ಡಾ. ಚೆನ್ನಬಸವ ಪಟ್ಟದೇವರ ವಿಷಯ ಕುರಿತು ಮಾತನಾಡಿದರು.

ಸಮಾರಂಭದ ಸಮ್ಮುಖ ವಹಿಸಿದ್ದ ಮುರುಘಾಮಠದ ಖಾಸಾಮಠವಾದ ಗುರುಮಠಕಲ್‌ನ ಶಾಂತವೀರಗುರು ಮುರುಘ ರಾಜೇಂದ್ರ ಸ್ವಾಮಿಗಳವರು ಮಾತನಾಡಿ, ಶ್ರೀಮಠದಲ್ಲಿ ಇಂತಹ ಅರ್ಥಪೂರ್ಣ ಕಾರ್ಯಕ್ರಮ ಗಳು ನಡೆಯುತ್ತಿರುವುದು ಐಕ್ಯತೆಯ ಪ್ರತಿಬಿಂಬ ಎಂದು ಹೇಳಿದರು. ಬೇರೆ ಬೇರೆ ಮಠಗಳ ಸ್ವಾಮೀಜಿಗಳವರ ಸ್ಮರಣೆ ಹಾಗೂ ಅವರ ವಿಚಾರಧಾರೆಗಳನ್ನು ಇಲ್ಲಿ ಸ್ಮರಿಸುತ್ತಿರುವುದು ಮುರುಘಾಮಠದ ಔದಾರ್ಯ ಹಾಗೂ ವೈಶಿಷ್ಟ್ಯವಾಗಿದೆ ಎಂದವರು ಅಭಿಪ್ರಾಯಪಟ್ಟರು.

ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿ ಸಾನಿಧ್ಯ ವಹಿಸಿ ಈ ನಾಡಿಗೆ ಕೊಡುಗೆ ನೀಡಿದ ಮಹನೀಯರನ್ನು ಸ್ಮರಿಸಲೇಬೇಕಾಗುತ್ತದೆ. ಅದು ಮುಂದಿನವರಿಗೆ ದಾರಿದೀಪವಾಗುತ್ತದೆ. ಅಂತಹ ಬಾಲ್ಕಿ ಚೆನ್ನಬಸವ ಪಟ್ಟದ್ದೇವರ ವಿಷಯವನ್ನು ಬಾಲ್ಯದಿಂದ ಲಿಂಗೈಕ್ಯದವರೆಗೂ ಅವರು ಮಾಡಿದ ಸಾಧನೆಯನ್ನು ಕೂಲಂಕುಶವಾಗಿ ಎಲ್ಲೂ ಎಡರು– ತೊಡರು ಇಲ್ಲದೆ ನಿರರ್ಗಳವಾಗಿ ಟಿಪ್ಪಣಿ ಇಲ್ಲದೆ ಉಪನ್ಯಾಸ ನೀಡಿದ ಮಂಜುನಾಥ್ ಅವರ ಪ್ರತಿಭೆ ಮೆಚ್ಚತ್ತಕ್ಕಂತದ್ದು. ಈ ನಾಡಿನಲ್ಲಿ ಬಸವ ತತ್ವವನ್ನು ತನ್ನ ಸ್ವಂತ ಕಾಯಕ ಎಂದು ತಪಸ್ಸಿನಂತೆ ನಿರ್ವಹಿಸಿದವರು ಶ್ರೀಗಳವರಲ್ಲಿ ಅನುಷ್ಠಾನ, ಕನ್ನಡದ ಪ್ರತಿಷ್ಠಾನ ಇವೆರಡೂ ಚೆನ್ನಬಸವ ಪಟ್ಟದ್ದೇವರ ಮೂಲ ಧ್ಯೇಯಗಳಾಗಿದವು. ಸಮರ್ಪಣಾ ಭಾವಕ್ಕೆ ಅವರಿಗೆ ಅವರೇ ಸಾಟಿ ಎಂದು ಉದಾಹರಿಸಿದರು.

ಶ್ರೀ ಜಗದ್ಗುರು ಮುರುಘರಾಜೇಂದ್ರ ಗುರುಕುಲದ ಸಾಧಕರಾದ ಗಂಗಾಧರ ದೇವರು ಅವರು ಮುರುಘಾ ಪರಂಪರೆಯ ಮುರಿಗೆ ಶಾಂತಿವೀರ ಮಹಾಸ್ವಾಮಿಗಳ ಹಾಗೂ ಇತರ ಸ್ವಾಮಿಗಳವರ ಜೀವನ ಸಾಧನೆ ಕುರಿತಾಗಿ ಮಾತನಾಡಿದರು.

# ಆರ್ಥಿಕವಾಗಿ ಇರಾನ್ ಪ್ರತ್ಯೇಕಿಸಲು ಅಮೆರಿಕದ ವ್ಯಾಪಕ ಅಭಿಯಾನ: ಆಪರೇಷನ್ ಎಕನಾಮಿಕ್ ಔಟ್‌ಕಾಸ್ಟ್

**ವಾಷಿಂಗ್ಟನ್, ಆಗಸ್ಟ್ 25 :** ಖಜಾನೆ ಕಾರ್ಯದರ್ಶಿ ಸ್ಕೋಟ್ ಬೆಸೆಂಟ್ ಇರಾನ್ ಅನ್ನು ಆರ್ಥಿಕವಾಗಿ ಪ್ರತ್ಯೇಕಿಸಲು ಅಭೂತಪೂರ್ವ ಅಭಿಯಾನವನ್ನು ಪ್ರಾರಂಭಿಸುವುದಾಗಿ ಘೋಷಿಸಿದ್ದಾರೆ ಮತ್ತು ಟೆಹ್ರಾನ್‌ನೊಂದಿಗೆ ವ್ಯಾಪಾರ ಮಾಡುವ ದೇಶಗಳು ಮತ್ತು ಕಂಪನಿಗಳು ಟ್ರಂಪ್ ಆಡಳಿತದ ಕೋಪವನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೆಸೆಂಟ್, "ಆಪರೇಷನ್ ಎಕನಾಮಿಕ್ ಔಟ್‌ಕಾಸ್ಟ್" (Operation Economic Outcast) ಎಂದು ಕರೆಯಲ್ಪಡುವ ಈ ಅಭಿಯಾನವು ವಿಶ್ವಾದ್ಯಂತ ಇರಾನ್ನ ಹಣಕಾಸಿನ ಸಂಪರ್ಕಗಳನ್ನು ಕಡಿತಗೊಳಿಸಲು ಮತ್ತು ಅದರ ಸರ್ಕಾರ ಹಾಗೂ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್‌ಗೆ ಬೆಂಬಲ ನೀಡುವ ಆದಾಯದ ಮೂಲಗಳನ್ನು ನಿರ್ಮೂಲನೆ ಮಾಡಲು ವಿನ್ಯಾಸಗೊಳಿಸಲಾಗಿದೆ ಎಂದು ಹೇಳಿದರು. ಈ ಹೊಸ ಅಭಿಯಾನವು ಟೆಹ್ರಾನ್ಗೆ ಆದಾಯವನ್ನು ತಂದುಕೊಡುವ ಜಾಲಗಳನ್ನು ಗುರಿಯಾಗಿಸುತ್ತದೆ ಮತ್ತು ಆಡಳಿತದೊಂದಿಗೆ ನಿರಂತರ ವ್ಯವಹಾರವನ್ನು ಮುಂದುವರಿಸಿದರೆ ಅಮೆರಿಕದ ನಿರ್ಬಂಧಗಳನ್ನು ಎದುರಿಸಬೇಕಾಗುತ್ತದೆ ಎಂದು ದೇಶಗಳು ಮತ್ತು ಕಂಪನಿಗಳಿಗೆ ಎಚ್ಚರಿಕೆ ನೀಡುತ್ತದೆ. ಈ ಅಭಿಯಾನವು ಡಿಜಿಟಲ್ ಸ್ವತ್ತುಗಳು, ತಂತ್ರಜ್ಞಾನ, ಚಿನ್ನ, ವಿಮಾನಯಾನ ಮತ್ತು ಹಡಗು ಸಾರಿಗೆಯಾದ್ಯಂತ ನಿರ್ಬಂಧಗಳ ಒತ್ತಡವನ್ನು ವಿಸ್ತರಿಸುತ್ತದೆ ಎಂದು ಖಜಾನೆ ಇಲಾಖೆ ತಿಳಿಸಿದೆ. ಇರಾನ್ ಪರಮಾಣು ಮತ್ತು ಕ್ಷಿಪಣಿ ತಂತ್ರಜ್ಞಾನವನ್ನು ಪಡೆಯಲು, ಸೈಬರ್ ಕಾರ್ಯಾಚರಣೆ ನಡೆಸಲು ಮತ್ತು ತೈಲ ಆದಾಯವನ್ನು ಗಳಿಸಲು ಸಹಾಯ ಮಾಡುತ್ತಿದ್ದ 60 ಕ್ಕೂ ಹೆಚ್ಚು ಸಂಸ್ಥೆಗಳು, ವ್ಯಕ್ತಿಗಳು ಮತ್ತು ಹಡಗುಗಳ ಮೇಲೆಯೂ ಇಲಾಖೆ ನಿರ್ಬಂಧ ಹೇರುತ್ತಿದೆ. ಇರಾನಿನ ಸಂಸ್ಥೆಗಳು ಅಥವಾ ಅವರ ಅಂತರರಾಷ್ಟ್ರೀಯ ಪಾಲುದಾರರು ನಿಯಮಗಳನ್ನು ಉಲ್ಲಂಘಿಸಿ ತಪ್ಪಿಸಿಕೊಳ್ಳಲು ಹೆಚ್ಚಿನ ಅವಕಾಶ ನೀಡದೆ ಅಮೆರಿಕವು "ಶೂನ್ಯ ಸೋರಿಕೆ ವಿಧಾನ" (zero leakage approach) ವನ್ನು ಅನುಸರಿಸಲಿದೆ ಎಂದು ಬೆಸೆಂಟ್ ಹೇಳಿದರು. "ಅಮೆರಿಕ ಮತ್ತು ಪ್ರಪಂಚದ ವಿರುದ್ಧ ಭಯೋತ್ಪಾದನೆಯನ್ನು ಎಸಗುವ ತಮ್ಮ ಸಾಮರ್ಥ್ಯವನ್ನು ಪುನರ್ನಿರ್ಮಿಸಿಕೊಳ್ಳಲು ಆಡಳಿತಕ್ಕೆ ಯಾವುದೇ ರೀತಿಯ ಸಣ್ಣ ಅವಕಾಶವನ್ನೂ ನೀಡಲಾಗುವುದಿಲ್ಲ." ಇರಾನ್‌ನ ವ್ಯವಹಾರಗಳಿಗೆ ಅನುಕೂಲ ಮಾಡಿಕೊಡುವ ಹಣಕಾಸು ಸಂಸ್ಥೆಗಳು ಮತ್ತು ಇತರ ವ್ಯಾಪಾರಗಳು ಅಮೆರಿಕದ ಹಣಕಾಸು ವ್ಯವಸ್ಥೆಯ ಪ್ರವೇಶವನ್ನು ಕಳೆದುಕೊಳ್ಳಬಹುದು ಎಂದು ಖಜಾನೆ ಕಾರ್ಯದರ್ಶಿ ಎಚ್ಚರಿಸಿದ್ದಾರೆ. "ಇರಾನ್ ಪರವಾಗಿ ಅಕ್ರಮ ಹಣ ವರ್ಗಾವಣೆಗೆ (money laundering) ಸಹಾಯ ಮಾಡುವ ಯಾವುದೇ ಸಂಸ್ಥೆಯನ್ನು ಅಮೆರಿಕನ್ ಡಾಲರ್ ವ್ಯವಸ್ಥೆಯಿಂದ ತೆಗೆದುಹಾಕಲಾಗುತ್ತದೆ." ವಾಷಿಂಗ್ಟನ್ ಮತ್ತು ಬೀಜಿಂಗ್ ಸೂಕ್ಷ್ಮ ವ್ಯಾಪಾರ ಸಂಬಂಧಗಳನ್ನು ನಿರ್ವಹಿಸುತ್ತಿರುವ ಈ ಸಮಯದಲ್ಲಿ, ಚೀನಾದ ಬ್ಯಾಂಕ್‌ಗಳನ್ನು ಗುರಿಯಾಗಿಸಬಹುದೇ ಎಂದು ವರದಿಗಾರರು ಪ್ರಶ್ನಿಸಿದಾಗ, ಬೆಸೆಂಟ್ ನಿರ್ದಿಷ್ಟ ಸಂಸ್ಥೆಗಳನ್ನು ಹೆಸರಿಸಲು ನಿರಾಕರಿಸಿದರು, ಆದರೆ ಯಾವುದೇ ದೇಶ ಅಥವಾ ಹಣಕಾಸು ಸಂಸ್ಥೆಗೆ ಈ ಅಭಿಯಾನದಿಂದ ವಿನಾಯಿತಿ ಇಲ್ಲ ಎಂದು ಹೇಳಿದರು.

### "ಯಾರೂ ಅಮೆರಿಕದ ನಿರ್ಬಂಧಗಳ ವ್ಯಾಪ್ತಿಯಿಂದ ಹೊರಗಿಲ್ಲ.":

ಇರಾನ್ ತೈಲವನ್ನು ಆದಾಯವಾಗಿ ಪರಿವರ್ತಿಸಿ ಆಡಳಿತಕ್ಕೆ ಬೆಂಬಲ ನೀಡುವ ಸಂಸ್ಥೆಗಳು ಸಹ ಸಂಭಾವ್ಯ ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ಅವರು ಹೇಳಿದರು. "ಅಮೆರಿಕದ ಖಜಾನೆ ಕ್ರಮಗಳ ಪೆಟ್ಟು ಅವರ ಮೇಲೆ ಬಿದ್ದಾಗ, ಅವರು ತಮ್ಮನ್ನೇ ಹೊರತುಪಡಿಸಿ ಬೇರಾರನ್ನೂ ಹೊಣೆ ಮಾಡಲಾಗುವುದಿಲ್ಲ." "ನಮ್ಮಲ್ಲಿ ಅಪರಿಮಿತ ತಾಳ್ಮೆಯಿಲ್ಲ." ವಾಷಿಂಗ್ಟನ್ ಜೊತೆ ಸಹಕರಿಸುವ ದೇಶಗಳು ಅಮೆರಿಕದ ಪಾಲುದಾರಿಕೆಯಿಂದ ಪ್ರಯೋಜನ ಪಡೆಯುತ್ತವೆ,



> "ಈ ದಬ್ಬಾಳಿಕೆಯ ಆಡಳಿತವನ್ನು ಬೆಂಬಲಿಸುವ ಪ್ರತಿಯೊಂದು ಆರ್ಥಿಕ ಜೀವನಾಡಿಯನ್ನೂ ಟೆಹ್ರಾನ್ ಒಂಟಿಯಾಗುವವರೆಗೆ ಕಡಿತಗೊಳಿಸುವುದೇ ನಮ್ಮ ಉದ್ದೇಶವಾಗಿದೆ."– **ಖಜಾನೆ ಕಾರ್ಯದರ್ಶಿ ಸ್ಕೋಟ್ ಬೆಸೆಂಟ್**

ಆದರೆ ಇರಾನ್ ವ್ಯಾಪಾರಕ್ಕೆ ಸಹಾಯ ಮಾಡುವುದನ್ನು ಮುಂದುವರಿಸುವ ದೇಶಗಳು ಹೆಚ್ಚುತ್ತಿರುವ ಪ್ರತ್ಯೇಕತೆಯನ್ನು ಎದುರಿಸಬೇಕಾಗುತ್ತದೆ ಎಂದು ಬೆಸೆಂಟ್ ಹೇಳಿದರು. "ಇರಾನ್ ಈಗ ತನ್ನ ಮುಂದೆ ಕೇವಲ ಎರಡು ಮಾರ್ಗಗಳನ್ನು ಹೊಂದಿರುವ ಸ್ಪಷ್ಟ ಆಯ್ಕೆಯನ್ನು ಎದುರಿಸುತ್ತಿದೆ: ಸಂಪೂರ್ಣ ಜಾಗತಿಕ ಪ್ರತ್ಯೇಕತೆ ಮತ್ತು ಜೀವನೋಪಾಯದ ಸಣ್ಣ ಆರ್ಥಿಕತೆ, ಅಥವಾ ಜಾಗತಿಕ ಆರ್ಥಿಕತೆಗೆ ಮರಳಿ ಸೇರಲು ಅವಕಾಶವಿರುವ ಸಾಮಾನ್ಯ ಸ್ಥಿತಿಯ ಮಾರ್ಗ." ಇರಾನ್ ಆಡಳಿತವು ಸಂಪೂರ್ಣವಾಗಿ ಪ್ರತ್ಯೇಕಗೊಳ್ಳುವವರೆಗೆ ಅಮೆರಿಕದ ಈ ಅಭಿಯಾನ ಮುಂದುವರಿಯುತ್ತದೆ ಎಂದು ಅವರು ಹೇಳಿದರು.

# ಯುವಜನರ ನಿರುದ್ಯೋಗ ಬಿಕ್ಕಟ್ಟಿನಿಂದ ಮೋದಿ ಸರ್ಕಾರದ ವೈಫಲ್ಯ ಬಹಿರಂಗ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಆರೋಪ

**ನವದೆಹಲಿ, ಆ.25:** ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ ಸಿ ವೇಣುಗೋಪಾಲ್ ಮಂಗಳವಾರ ನಿರುದ್ಯೋಗ ಮತ್ತು ಕೌಶಲ್ಯ ಅಭಿವೃದ್ಧಿ ಕುರಿತು ನರೇಂದ್ರ ಮೋದಿ ಸರ್ಕಾರದ ಮೇಲೆ ಪಕ್ಷದ ದಾಳಿಯನ್ನು ಹೆಚ್ಚಿಸಿದ್ದಾರೆ, 8.7 ಕೋಟಿ ಯುವಕರು ನಿರುದ್ಯೋಗಿಗಳಾಗಿದ್ದು, ಅವರಲ್ಲಿ ಕೇವಲ 8.25 ಪ್ರತಿಶತದಷ್ಟು ಜನರು ಮಾತ್ರ ಉದ್ಯೋಗವನ್ನು ಪಡೆಯಲು ಅಗತ್ಯವಾದ ಕೌಶಲ್ಯಗಳನ್ನು ಹೊಂದಿದ್ದಾರೆ ಎಂದು ಹೇಳಿದ್ದಾರೆ. ಸರ್ಕಾರದ "ಅಮೃತ್‌ಕಾಲ್" ನಿರೂಪಣೆಯ ಹಿಂದಿನ "ಕೊಳಕು ವಾಸ್ತವ" ಎಂದು ಅವರು ಕರೆದಿದ್ದನ್ನು ಅಂಕಿಅಂಶಗಳು ಬಹಿರಂಗಪಡಿಸಿವೆ ಎಂದು ವೇಣುಗೋಪಾಲ್ ಹೇಳಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಛಾತ್ರೋನ್ ಕಿ ಗೂಂಜ್ ಅಭಿಯಾನವು ಯುವಜನರ ಕಳವಳ ಮತ್ತು ಹತಾಶೆಗಳನ್ನು ಮುನ್ನೆಲೆಗೆ ತರುತ್ತಿದೆ ಎಂದು ಅವರು ಹೇಳಿದರು. "8.7 ಕೋಟಿ ಯುವಕರು ನಿರುದ್ಯೋಗಿಗಳಾಗಿದ್ದಾರೆ! ಇವರಲ್ಲಿ ಕೇವಲ 8.25% ಜನರು ಮಾತ್ರ ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯಗಳನ್ನು ಹೊಂದಿದ್ದಾರೆ!" ವೇಣುಗೋಪಾಲ್ ಹೇಳಿದರು. "ರಾಹುಲ್ ಗಾಂಧಿಯವರ ಛಾತ್ರೋನ್ ಕಿ ಗೂಂಜ್ ಬಯಲು ಮಾಡುತ್ತಿರುವ 'ಅಮೃತ್ ಕಾಲ'ದ ಕೊಳಕು ವಾಸ್ತವ ಇದು. ಅದಕ್ಕಾಗಿಯೇ ನಮ್ಮ ಪ್ರಯತ್ನಗಳಿಗೆ ಭಾರಿ ಬೆಂಬಲ ವ್ಯಕ್ತವಾಗುತ್ತಿದೆ, ಇದು ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ಮೂಡಿಸುತ್ತಿದೆ" ಎಂದು ಅವರು ಹೇಳಿದರು. 2014 ರಲ್ಲಿ ಅಧಿಕಾರಕ್ಕೆ ಬಂದ ನಂತರ ಬಿಜೆಪಿ ನೇತೃತ್ವದ ಸರ್ಕಾರ ಯುವಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸುವಲ್ಲಿ ವಿಫಲವಾಗಿದೆ ಎಂದು ವೇಣುಗೋಪಾಲ್ ಆರೋಪಿಸಿದರು. ಕಾಂಗ್ರೆಸ್ ಪ್ರಕಾರ, ಸುಧಾರಿತ ಉದ್ಯೋಗಾವಕಾಶಗಳಾಗಿ ರೂಪಾಂತರಗೊಳ್ಳದ ಭರವಸೆಗಳ ಮೇಲೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರದ "ಅಚ್ಛೇ ದಿನ್" ನಿರೂಪಣೆಯನ್ನು ನಿರ್ಮಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು. "ಮೋದಿಯವರ 'ಅಚ್ಛೇ ದಿನ್' ನ ಸಂಪೂರ್ಣ ಪ್ರಚಾರವು ಸುಳ್ಳುಗಳ ಮೇಲೆ ಮತ್ತು ಯುವಕರನ್ನು ವಂಚಿಸುವ ಮೇಲೆ ಹೇಗೆ ನಿರ್ಮಿಸಲ್ಪಟ್ಟಿದೆ ಎಂಬುದು ಸಾರ್ವಜನಿಕರಿಗೆ ಚೆನ್ನಾಗಿ ತಿಳಿದಿದೆ" ಎಂದು ವೇಣುಗೋಪಾಲ್ ಹೇಳಿದರು, ಸರ್ಕಾರವು ಐತಿಹಾಸಿಕ ಮಟ್ಟದ ನಿರುದ್ಯೋಗವನ್ನು ಮುನ್ನಡೆಸಿದೆ ಎಂದು ಆರೋಪಿಸಿದರು. ಸಾಕಷ್ಟು ಉದ್ಯೋಗಗಳನ್ನು ಸೃಷ್ಟಿಸುವ ಮೂಲಕ ಮತ್ತು ಕಾರ್ಮಿಕ ಮಾರುಕಟ್ಟೆಯಲ್ಲಿ ಅಗತ್ಯವಿರುವ ಕೌಶಲ್ಯಗಳೊಂದಿಗೆ ಯುವಜನರನ್ನು ಸಜ್ಜುಗೊಳಿಸಲಾಗಿದೆ ಎಂದು ಖಚಿತಪಡಿಸಿಕೊಳ್ಳುವ ಮೂಲಕ ಭಾರತದ ಜನಸಂಖ್ಯಾ ಲಾಭಾಂಶವನ್ನು ಬಳಸಿಕೊಳ್ಳುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಕಾಂಗ್ರೆಸ್ ನಾಯಕರು ಮತ್ತಷ್ಟು ಹೇಳಿದ್ದಾರೆ. "2014 ರ ನಂತರ ಭಾರತವನ್ನು ಪರಿವರ್ತಿಸುವುದಾಗಿ ಪ್ರತಿಜ್ಞೆ ಮಾಡಿದವರು ಐತಿಹಾಸಿಕ ನಿರುದ್ಯೋಗವನ್ನು ನೀಡಿದ್ದಾರೆ ಮತ್ತು ಭಾರತದ ಜನಸಂಖ್ಯಾ ಲಾಭಾಂಶವನ್ನು ಜನಸಂಖ್ಯಾ ವಿಪತ್ತಾಗಿ ನಾಶಪಡಿಸಿದ್ದಾರೆ" ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ಮತ್ತು ಯುವಜನರ ಮೇಲೆ ಪರಿಣಾಮ ಬೀರುವ ಸಮಸ್ಯೆಗಳ ಮೇಲೆ ಕಾಂಗ್ರೆಸ್ ತನ್ನ



ಗಮನವನ್ನು ತೀವ್ರಗೊಳಿಸುತ್ತಿರುವಾಗ ಈ ಹೇಳಿಕೆಗಳು ಬಂದಿವೆ. ರಾಹುಲ್ ಗಾಂಧಿಯವರ ಛಾತ್ರೋನ್ ಕಿ ಗೂಂಜ್ ಉಪಕ್ರಮವನ್ನು ಪಕ್ಷವು ಶಿಕ್ಷಣ, ಉದ್ಯೋಗ ಮತ್ತು ಅವಕಾಶಗಳ ಬಗ್ಗೆ ಕಳವಳಗಳನ್ನು ಎತ್ತಿ ತೋರಿಸುವ ಒಂದು ಜನಸಂಪರ್ಕ ಅಭಿಯಾನವಾಗಿ ಬಿಂಬಿಸುತ್ತಿದೆ, ಆದರೆ ವಿರೋಧ ಪಕ್ಷಗಳು ಭಾರತದ ಯುವಜನರು ಎದುರಿಸುತ್ತಿರುವ ಸವಾಲುಗಳನ್ನು ಸಮರ್ಪಕವಾಗಿ ಪರಿಹರಿಸಲು ಕೇಂದ್ರವು ವಿಫಲವಾಗಿದೆ ಎಂದು ಆರೋಪಿಸುತ್ತಲೇ ಇವೆ.

# ಸೆ.5ಕ್ಕೆ ದೆಹಲಿಯಲ್ಲಿ ಸಿಜೆಪಿ ಪಾದಯಾತ್ರೆ

**ನವದೆಹಲಿ, ಆ. 25:** ಜುಲೈ 25ರಂದು ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳು ನಡೆಸುತ್ತಿದ್ದ ಪ್ರತಿಭಟನೆಯನ್ನು ಹಿಂಪಡೆಯುವಾಗ ನೀಡಿದ್ದ ಭರವಸೆಗಳನ್ನು ಈಡೇರಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿರುವ "ಕಾಕ್ರೋಚ್ ಜನತಾ ಪಾರ್ಟಿ" (ಸಿಜೆಪಿ), ಸೆಪ್ಟೆಂಬರ್ 5ರಂದು ದೆಹಲಿಯಲ್ಲಿ ಬೃಹತ್ ಯುವ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಂಡಿರುವುದಾಗಿ ಘೋಷಿಸಿದೆ. ಪ್ರತಿಭಟನಾ ನಿರತ ವಿದ್ಯಾರ್ಥಿಗಳು ಮತ್ತು ಯುವಜನರ ವಿರುದ್ಧ ದಾಖಲಾಗಿರುವ ಎಫ್‌ಐಆರ್‌ಗಳನ್ನು ಹಿಂಪಡೆಯುವ ಭರವಸೆಯನ್ನು ಸರ್ಕಾರ ಈಡೇರಿಸಿಲ್ಲ. ಕೇವಲ ವಿಳಂಬ ನೀತಿಯನ್ನು ಅನುಸರಿಸುವ ಮೂಲಕ ಸರ್ಕಾರ ಯುವಜನತೆಗೆ ನೀಡಿದ್ದ ಮಾತನ್ನು ತಪ್ಪಿದೆ ಎಂದು ಸಿಜೆಪಿ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ತೀವ್ರವಾಗಿ ಖಂಡಿಸಿದೆ. ಮೆರವಣಿಗೆಯು ಇಂಡಿಯಾ ಗೇಟ್‌ನಿಂದ ಆರಂಭವಾಗಿ ನವದೆಹಲಿ ಪೊಲೀಸ್ ಪ್ರಧಾನ ಕಚೇರಿವರೆಗೆ ಸಾಗಲಿದೆ. ನೀಟ್ ಪರೀಕ್ಷೆಯ ಅಕ್ರಮಗಳಿಂದಾಗಿ ಪ್ರಾಣ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಸ್ಥರು ಹಾಗೂ




ಪೊಲೀಸ್ ದೌರ್ಜನ್ಯಕ್ಕೆ ತುತ್ತಾದ ಸಂತ್ರಸ್ತರು ಈ ಪ್ರತಿಭಟನೆಯ ನೇತೃತ್ವ ವಹಿಸಲಿದ್ದಾರೆ.

# 69ನೇ ವಾರ್ಷಿಕ ಮಹಾಸಭೆ ಪೂರೈಸಿದ ಕನ್ನಡ ಸಂಘ ಸಾಂತಕ್ರೂಜ್ ಮುಂಬಯಿಯಲ್ಲಿ ಕನ್ನಡದ ಕೈಂಕರ್ಯ ಸ್ತುತ್ಯರ್ಹ: ಸುಜತಾ ಆರ್.ಶೆಟ್ಟಿ

(ಚಿತ್ರ / ವರದಿ : ರೋನ್ಸ್ ಬಂಟ್ವಾಳ್)

**ಮುಂಬಯಿ, ಆ.22:** ಸುಮಾರು ಏಳು ದಶಕಗಳಿಂದ ಸಂಘವು ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿರುವ ಅಪಾರ ಕೊಡುಗೆ ಎಂದೂ ವ್ಯರ್ಥವಾದದು. ಶೈಕ್ಷಣಿಕ, ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಿರಂತರ ಶಿಕ್ಷಣವೇತನ, ಉಚಿತ ಶೈಕ್ಷಣಿಕ ಪರಿಕರ ವಿತರಣೆಗೈದು ನೂರಾರು ವಿದ್ಯಾರ್ಥಿಗಳ ಭವಿಷ್ಯಕ್ಕೆ ಸ್ಪಂದಿಸಿದೆ. ಸಾಂತಾಕ್ರೂಜ್ ಪರಿಸರದ ಹಿರಿಯರೆಲ್ಲರ ಪರಿಶ್ರಮದಿಂದ ಸುಮಾರು ಏಳು ದಶಕಗಳಿಂದ ಸಾಮಾಜಿಕ, ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿರುವ ಅಪಾರ ಕೊಡುಗೆ ವ್ಯರ್ಥವಾಗದು. ಗೌರವಾಧ್ಯಕ್ಷ ಎಲ್.ವಿ ಅಮೀನ್ ಅವರ ಕೊಡುಗೆಯ ನಿರಂತರ ಶಿಕ್ಷಣ ವೇತನವು ಪ್ರತಿಭಾವಂತ ನೂರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದೆ. ನಮ್ಮ ಎಲ್ಲಾ ದಾನಿಗಳ ಸಹಾಯದ ಮೂಲಕ ಸಂಬಂಧವನ್ನು ಬೆಸೆದು ಸಾಮರಸ್ಯವಾಗಿ ಮುನ್ನಡೆಯುವ ಕನ್ನಡ ಸಂಘದ ಸೇವೆ ನಮ್ಮೆಲ್ಲರ ಹಿರಿಮೆಯಾಗಿದೆ. ಶಿಕ್ಷಣಕ್ಕೆ ನಾವೂ ಹೇಗೆ ಒತ್ತು ಕೊಡುತ್ತಿದೆಯೋ ಹಾಗೆಯೇ ನಾವೂ ಆರೋಗ್ಯ ನಿಧಿಯನ್ನೂ ಸ್ಥಾಪಿಸಿ ಪರಿಸರದ ಅನಾರೋಗ್ಯ ಪೀಡಿತರಿಗೆ ಧನಸಹಾಯವನ್ನು ನೀಡುತ್ತಾ ಬಂದಿದ್ದೇವೆ. ಇದೀಗ ನಮ್ಮ ಪರಿಸರದ ಆರ್ಥಿಕ ಸಂಕಷ್ಟದಲ್ಲಿರುವ ವಿಧವೆಯರ ಕ್ಷೇಮಾಭಿವೃದ್ಧಿಯ ವಿಧವಾ ವೇತನ ಯೋಜನೆಯನ್ನು ಆರಂಭಿಸಿದ್ದು ಇದು ಮಾನವೀಯತಾ ಸೇವೆಗೆ ಪೂರಕವಾಗಲಿದೆ ಎಂದು ಕನ್ನಡ ಸಂಘ ಸಾಂತಾಕ್ರೂಜ್ ಅಧ್ಯಕ್ಷೆ ಸುಜತಾ ಆರ್.ಶೆಟ್ಟಿ ತಿಳಿಸಿದರು.



69ನೇ ವಾರ್ಷಿಕ ಮಹಾಸಭೆಯನ್ನು ಕನ್ನಡ ಸಂಘ ಸಾಂತಾಕ್ರೂಜ್ ಇಂದಿಲ್ಲಿ ಶನಿವಾರ ಸಂಜೆ ಸಾಂತಾಕ್ರೂಜ್ ಪೂರ್ವದಲ್ಲಿನ ಬಿಲ್ಲವ ಭವನದ ಕಿರು ಸಭಾಗೃಹದಲ್ಲಿ ನಡೆಸಿದ್ದು ಸಭಾಧ್ಯಕ್ಷತೆ ವಹಿಸಿ ಅಧ್ಯಕ್ಷೀಯ ಭಾಷಣವನ್ನುದ್ದೇಶಿಸಿ ಸುಜತಾ ಶೆಟ್ಟಿ ಮಾತನಾಡಿದರು.

ಸಂಘದ ಗೌರವಾಧ್ಯಕ್ಷ ಎಲ್.ವಿ ಅಮೀನ್ ಮಾತನಾಡಿ ನಾಡು, ನುಡಿ, ಕಲೆ ಹಾಗೂ ಸಾಹಿತ್ಯಿಕ ಮೌಲ್ಯಗಳನ್ನು ಎತ್ತಿಹಿಡಿಯುವಲ್ಲಿ ನಿರಂತರವಾಗಿ ಶ್ರಮಿಸಿದ ಕನ್ನಡ ಸಂಘವು ಆ ಮೂಲಕ ಹೊರನಾಡ ಮುಂಬಯಿಯಲ್ಲಿನ ಮಕ್ಕಳು, ಯುವ ಪೀಳಿಗೆಯಲ್ಲಿ ಕನ್ನಡ ಸಂಸ್ಕೃತಿಯ ಅರಿವು ಮತ್ತು ಅಭಿಮಾನವನ್ನು ಮೂಡಿಸಿದ ಹರ್ಷ ಸಂಘಕ್ಕಿದೆ. ಆದ್ದರಿಂದ ಮಾಯಾನಗರಿಯಲ್ಲಿ ಕನ್ನಡದ ಮೂಲಕ ಸಂಬಂಧಗಳನ್ನು ಬೆಸೆದು ಸಾಮರಸ್ಯಯುತವಾಗಿ ಮುನ್ನಡೆಯುವ ಕನ್ನಡ ಸಂಘ ಸಾಂತಕ್ರೂಜ್ ಇದರ ಸೇವಾ ಕೈಂಕರ್ಯ ಸ್ತುತ್ಯಾರ್ಹ. ನಾವೂ ಕೂಡಾ ಕಷ್ಟಪಟ್ಟು ಕಲಿತು ಭವಿಷ್ಯ ರೂಪಿಸಿ ಇಂದು ನಿಮಗೆಲ್ಲ ವಿದ್ಯಾರ್ಥಿವೇತನ ನೀಡುವಂತ ವರಾಗಿದ್ದೇವೆ. ಹಾಗೆಯೇ ನೀವೂ ಕೂಡಾ ಕಲಿತು ರಾಷ್ಟ್ರದ ಭವ್ಯ ಪ್ರಜೆಗಳಾಗಿ ಕೊಡುಗೈ ದಾನಿಗಳಾಗಬೇಕು. ಸಂಘದತ್ತ ಆಸಕ್ತಿ ತೋರಿ ಹಿರಿಯರು ಕಟ್ಟಿದ್ದನ್ನು ಈ ಸಂಘವನ್ನು ಮುಂದುವರಿಸುವಲ್ಲಿ ಕೈಜೋಡಿಸಬೇಕು ಎಂದರು.

ಕನ್ನಡ ಸಂಘದ ಉಪಾಧ್ಯಕ್ಷ ದೊಡ್ಡಗುತ್ತು ಭುಜಂಗ ಆರ್.ಶೆಟ್ಟಿ, ಗೌ। ಪ್ರ। ಕಾರ್ಯದರ್ಶಿ ಜಯ ವಿ.ಪೂಜಾರಿ ಗೌರವ ಕೋಶಾಧಿಕಾರಿ ಸುಧಾಕರ್ ಉಚ್ಚಿಲ್, ಜತೆ ಕಾರ್ಯದರ್ಶಿ ಚಂದ್ರಹಾಸ ಜೆ.ಕೋಟ್ಯಾನ್, ಶಿಕ್ಷಣ ಸಮಿತಿ ಕಾರ್ಯಾಧ್ಯಕ್ಷ ವಿಜಯಕುಮಾರ್ ಕೆ.ಕೋಟ್ಯಾನ್ ವೇದಿಕೆಯಲ್ಲಿ ಆಸೀನರಾಗಿದ್ದು ದೀಪ ಪ್ರಜ್ವಲಿಸಿ ಸಭೆಗೆ ಚಾಲನೆಯನ್ನಿತ್ತರು.

ಸಭೆಯಲ್ಲಿ ಜತೆ ಕೋಶಾಧಿಕಾರಿ ಬನ್ನಂಜೆ ರವೀಂದ್ರ ಅಮೀನ್, ಕಾರ್ಯದರ್ಶಿ ಶಕೀಲಾ ಪಿ.ಶೆಟ್ಟಿ, ಸಾಮಾಜಿಕ ಮತ್ತು ಸಾಂಸ್ಕೃತಿಕ ಸಮಿತಿ ಕಾರ್ಯಾಧ್ಯಕ್ಷೆ ವನಿತಾ ವೈ.ನೋಂದಾ, ಸದಸ್ಯರುಗಳಾದ ಸುಮಾ ಎಂ.ಪೂಜಾರಿ, ಶಾಲಿನಿ ಜಿ.ಶೆಟ್ಟಿ, ಲಿಂಗಪ್ಪ ಅಮೀನ್, ವಾಸುದೇವ ರಾವ್, ಆರ್.ಪಿ ಹೆಗಡೆ, ಪ್ರಸನ್ನ ಶೆಟ್ಟಿ, ಸುಮಿತ್ರಾ ದೇವಾಡಿಗ, ಸಂಪ ಲಕ್ಷ್ಮಣ ಬಿಲ್ಲವ, ಬಬಿತಾ ಪೂಜಾರಿ, ವೀಣಾ ಗೌಡ, ಗಿರೀಶ್ ಶೆಟ್ಟಿ, ಸಲಹಾ ಸದಸ್ಯ ಭೋಜಾ ಎನ್.ಶೆಟ್ಟಿ, ವಿಶೇಷ ಆಮಂತ್ರಿತರಾದ ವಿದ್ಯಾದಾನಿಗಳಾದ ಪ್ರೇಮನಾಥ ಶೆಟ್ಟಿ, ಅರವಿಂದ ಶೆಟ್ಟಿ, ಸುಜಾತ ಉಚ್ಚಿಲ್ ಹಾಗೂ ಸದಸ್ಯರನೇಕರು ಉಪಸ್ಥಿತರಿದ್ದು, ತಮ್ಮತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿ ಸಲಹಿ ಸಂಘದ ಶ್ರೇಯೋಭಿವೃದ್ಧಿಗಾಗಿ ಹಾರೈಸಿದರು.

ಬಳಿಕ ನಡೆಸಲ್ಪಟ್ಟ ಸರಳ ಕಾರ್ಯಕ್ರಮದಲ್ಲಿ ಸಂಘವು ದಾನಿಗಳ ಪ್ರಾಯೋಜಕತ್ವದಲ್ಲಿ ವಾರ್ಷಿಕವಾಗಿ ಕೊಡಮಾಡುವ 2026ನೇ ಸಾಲಿನ ವಿದ್ಯಾರ್ಥಿಗಳ ವಾರ್ಷಿಕ ದತ್ತು ಸ್ವೀಕಾರ ಮತ್ತು ವಿದ್ಯಾರ್ಥಿ ವೇತನ (ಆರ್ಥಿಕ ಸಹಾಯನಿಧಿ) ವಿತರಣಾ ಕಾರ್ಯಕ್ರಮ ನಡೆಸಿತು. ಉಪಸ್ಥಿತ ಪ್ರಾಯೋಜಕರುಗಳಾದ ಜಯಶಂಕರ್ ಶೆಟ್ಟಿ, ಮಲ್ಲಿಕಾ ಸದಾನಂದ ಸಫಲಿಗ, ಮೋಹನ್‌ದಾಸ್ ಶೆಟ್ಟಿ, ಪ್ರಕಾಶ್ ಸಿ.ಶೆಟ್ಟಿ, ಭೋಜಾ ಎನ್.ಶೆಟ್ಟಿ, ವಿಜಯಕುಮಾರ್ ಕೆ.ಕೋಟ್ಯಾನ್, ಶಕಿಲಾ ಪಿ.ಶೆಟ್ಟಿ ಅವರು ಮಕ್ಕಳ ದತ್ತು ಸ್ವೀಕಾರಗೈದು ಆಯ್ದ ಮಕ್ಕಳಿಗೆ ಶೈಕ್ಷಣಿಕ ಸಹಾಯನಿಧಿ ವಿತರಿಸಿ ಶುಭಾರೈಸಿದರು. ವಿದ್ಯಾರ್ಥಿಗಳ ಪರವಾಗಿ ಚಿತೇಶ್ ಪೂಜಾರಿ ಮಾತನಾಡಿದರು. ಸುಮಾರು 60 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಯಿತು.

ವನಿತಾ ವೈ.ನೋಂದಾ ಪ್ರಾರ್ಥನೆಯನ್ನಾಡಿದರು. ವಿಜಯಕುಮಾರ್ ಕೆ.ಕೋಟ್ಯಾನ್ ಸ್ವಾಗತಿಸಿದರು. ಗತ ಸಾಲಿನಲ್ಲಿ ಸಂಘದ ನಿಧನರಾದ ಸದಸ್ಯರು, ಹಿತೈಷಿಗಳಿಗೆ ಸದ್ಗತಿ ಕೋರಿ ಶ್ರದ್ಧಾಂಜಲಿ ಅರ್ಪಿಸಲಾಯಿತು. ಸುಧಾಕರ್ ಉಚ್ಚಿಲ್ ವಾರ್ಷಿಕ ಲೆಕ್ಕಪತ್ರಗಳ ಮಾಹಿತಿ ನೀಡಿದರು. ಜಯ ವಿ.ಪೂಜಾರಿ ಗತ ವಾರ್ಷಿಕ ಮಹಾಸಭೆ ವರದಿ ವಾಚಿಸಿ, ಕಾರ್ಯಕ್ರಮ ನಿರೂಪಿಸಿ ಕೃತಜ್ಞತೆ ಸಲ್ಲಿಸಿದರು.

### 26ನೇ ವಾರ್ಷಿಕ ಮಹಾಸಭೆ ಪೂರೈಸಿದ ಜಯಲಕ್ಷ್ಮೀ ಕೋ.ಆಪ್ ಕ್ರೆಡಿಟ್ ಸೊಸೈಟಿ

# ಗ್ರಾಹಕರ ವಿಶ್ವಸನೀಯ ಕಾಳಜಿ ಆರ್ಥಿಕ ವ್ಯವಹಾರಕ್ಕೆ ಕಾರಣ: ಡಾ.ಕೆ.ಸಿ.ನಾರಾಯಣಗೌಡ ಬಣ್ಣನೆ




(ಚಿತ್ರ / ವರದಿ : ರೋನ್ಸ್ ಬಂಟ್ವಾಳ್)

**ಮುಂಬಯಿ, ಆ.23:** ಮಹಾಗುರು ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಅವರ ದೂರದೃಷ್ಟಿತ್ವ, ಆಶೀರ್ವಾದಗ–ಳಿಂದ ಜಯಲಕ್ಷ್ಮೀ ಸೊಸೈಟಿಯು 26ನೇ ವಾರ್ಷಿಕ ಮಹಾಸಭೆ ಪೂರೈಸುತ್ತಿರುವುದು ಪ್ರಶಂಸನೀಯ. ಈ ಪಥಸಂಸ್ಥೆಯು ಬೃಹನ್ಮುಂಬಯಿಯಲ್ಲಿನ ಆರ್ಥಿಕ ಕ್ಷೇತ್ರದಲ್ಲಿ ಮತ್ತೊಂದು ಮೈಲಿಗಲ್ಲನ್ನು ಸಾಧಿಸಿದೆ. ಗತ ಹಣಕಾಸು ವರ್ಷದಲ್ಲಿ ಅತ್ಯುತ್ತಮ ವ್ಯವಹಾರ ವೃದ್ಧಿಯನ್ನು ದಾಖಲಿಸಿದ್ದು, ಎಲ್ಲ ವರ್ಗದ ಜನರಿಗೆ ಆರ್ಥಿಕ ಭದ್ರತೆಯನ್ನು ತಲುಪಿಸಲು ಸೇವಾನಿರತವಾಗಿದೆ. ಮುಂದೆಯೂ ಸೊಸೈಟಿ ಜನಪರ ಕಾಳಜಿ ವಹಿಸಿ ಹಣಕಾಸು ವ್ಯವಹಾರಕ್ಕೆ ವಿಶ್ವಾಸನೀಯವಾಗಿ ಶ್ರಮಿಸಲಿದೆ. ಇನ್ನೂ ನಾಲ್ಕೈದು ಶಾಖೆಗಳನ್ನು ಆರಂಭಿಸುವ ಯೋಜನೆಯನ್ನು ಹೊಂದಿದ್ದು, ಸೊಸೈಟಿ ಸದಸ್ಯರ ಪ್ರೋತ್ಸಾಹ ಅತ್ಯವಶ್ಯವಾಗಿದೆ. ಸೇವೆಯೊಂದಿಗೆ ಗ್ರಾಹಕರ ವಿತ್ತ ಸೇವೆಗೆ ನಾವು ಬದ್ಧರಾಗಿದ್ದೇವೆ. ಎಂದು ಕರ್ನಾಟಕ ಸರ್ಕಾರದ ಮಾಜಿ ಸಚಿವ, ಒಕ್ಕಲಿಗ ಸಂಘ ಮಹಾರಾಷ್ಟ್ರ ಇದರ ಸಂಸ್ಥಾಪಕಾಧ್ಯಕ್ಷ, ಜಯಲಕ್ಷ್ಮೀ ಕೋ.ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿಮಿಟೆಡ್ ಮುಂಬಯಿ ಇದರ ಸ್ಥಾಪಕ ಕಾರ್ಯಾಧ್ಯಕ್ಷ ಡಾ। ಕೆ.ಸಿ ನಾರಾಯಣ ಗೌಡ ತಿಳಿಸಿದರು. ಭಾನುವಾರ ಅಂಧೇರಿ ಪೂರ್ವದ ಜೆ.ಬಿ ನಗರದಲ್ಲಿ ಸತ್ಯನಾರಾಯಣ ಗೋಯೆಂಕಾ ಭವನದ ಸಭಾಗೃಹದಲ್ಲಿ ಜಯಲಕ್ಷ್ಮೀ ಕೋ.ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿಮಿಟೆಡ್ ಮುಂಬಯಿ ನಡೆಸಿದ ತನ್ನ 26ನೇ ವಾರ್ಷಿಕ ಮಹಾಸಭೆಗೆ ಚಾಲನೆಯನ್ನೀಡಿ ಡಾ। ನಾರಾಯಣ ಗೌಡ ಮಾತನಾಡಿದರು.

ಬೃಹನ್ಮುಂಬಯಿಯಲ್ಲಿ ಸೇವಾನಿರತ ಒಕ್ಕಲಿಗ ಸಮುದಾಯದ ಸಂಚಾಲಕತ್ವದ ಜಯಲಕ್ಷ್ಮೀ ಸೊಸೈಟಿ ಕಾರ್ಯಾಧ್ಯಕ್ಷ ರಂಗಪ್ಪ ಸಿ.ಗೌಡ ಅಧ್ಯಕ್ಷತೆಯಲ್ಲಿ ಜರುಗಿದ ವಾರ್ಷಿಕ ಮಹಾಸಭೆಯಲ್ಲಿ ಸೊಸೈಟಿ ಉಪ ಕಾರ್ಯಾಧ್ಯಕ್ಷ ಎ.ಕೆಂಪೇಗೌಡ (ರಾಮಣ್ಣ), ಕಾರ್ಯದರ್ಶಿ ಕೆ.ರಾಜೇಗೌಡ (ಅಧ್ಯಕ್ಷರು, ಒಕ್ಕಲಿಗರ ಸಂಘ ಮಹಾರಾಷ್ಟ್ರ), ಕೋಶಾಧಿಕಾರಿ ಮುತ್ತೇ ಎಸ್.ಗೌಡ, ನಿರ್ದೇಶಕರುಗಳಾದ ಸುನಂದಾ ಆರ್.ಗೌಡ, ರಾಹುಲ್ ಯು. ಲಗಾಡೆ ಉಪಸ್ಥಿತರಿದ್ದು ಸಭೆಗೆ ಚಾಲನೆಯನ್ನಿತ್ತರು.

ಅತಿಥಿಗಳಾಗಿ ಮಲ್ಲಿಕಾರ್ಜುನ ಸ್ವಾಮೀಜಿ, ಗಂಗಾಧರ್ ಎನ್.ಗೌಡ, ಹೃದಯ ನಾರಾಯಣ ಮಿಶ್ರಾ ವೇದಿಕೆಯಲ್ಲಿದ್ದು ಶುಭಾರೈಸಿದರು. ಕಾರ್ಯಾಧ್ಯಕ್ಷ ರಂಗಪ್ಪ ಗೌಡ ಅಧ್ಯಕ್ಷೀಯ ಭಾಷಣವನ್ನುದ್ದೇಶಿಸಿ ಜಯಲಕ್ಷ್ಮೀ ಸೊಸೈಟಿಯು 26 ವರ್ಷಗಳ ಸಾರ್ಥಕ ಸೇವೆಯನ್ನು ಪೂರೈಸಿ ತನ್ನ ಸಾಧನೆಯ ಪಯಣವನ್ನು ಮುನ್ನಡೆಸುತ್ತಿದೆ. ಗತ ಸಾಲಿನಲ್ಲಿ ನಡೆದ ವ್ಯವಹಾರಗಳು ಬೆಳವಣಿಗೆಯಲ್ಲಿದ್ದು, ಕ್ಯಾಲೆಂಡರ್ ಸಾಲಿನಲ್ಲಿ ಅತ್ಯುನ್ನತ ಹಂತವನ್ನು ತಲುಪಿದ್ದೇವೆ. ನಮ್ಮ ಸೊಸೈಟಿಯಲ್ಲಿ ಸುಮಾರು 90 ಲಕ್ಷ ರೂ.ಗಳ ವ್ಯವಹಾರ ದಾಖಲಾಗಿದೆ. ಮಹಾರಾಷ್ಟ್ರ ಸೇರಿದಂತೆ ಒಳನಾಡು, ಭಾರತದೆಲ್ಲೆಡೆ ವಹಿವಾಟು ಪಸರಿಸುವ ಗುರಿ ನಮ್ಮದು. ಇಂದು ನಮ್ಮಲ್ಲಿ ಒಟ್ಟು 321 ಹೊಸ ಸದಸ್ಯರಿದ್ದು, 112 ಸದಸ್ಯತ್ವಗಳನ್ನು ಈಗಾಗಲೇ ನೀಡಲಾಗಿದೆ. ಸೊಸೈಟಿಯ ಹಣಕಾಸು ವ್ಯವಹಾರ ಗಮನಾರ್ಹ ಪ್ರಗತಿ ಸಾಧಿಸಿದೆ. ಗ್ರಾಹಕರ ಹಾಗೂ ಶೇರುದಾರರ ಹಿತರಕ್ಷಣೆಗೆ ಆದ್ಯತೆ ನೀಡುತ್ತಾ, ವಿಸ್ತರಿತ ಹಣಕಾಸು ಸೇವೆಗಳ ಮೂಲಕ ತಂತ್ರಜ್ಞಾನ ಆಧಾರಿತ ಆಧುನಿಕ ಬ್ಯಾಂಕಿಂಗ್ ಸೇವೆಗಳನ್ನು ಅಳವಡಿಸಿಕೊಂಡು ಸೊಸೈಟಿಯ ಕಾರ್ಯಕ್ಷಮತೆಯನ್ನು ಮತ್ತಷ್ಟು ಬಲಪಡಿಸಲಾಗಿದೆ ಎಂದರು.

ಕೆ.ರಾಜೇಗೌಡ ಮಾತನಾಡಿ ನಮ್ಮಲ್ಲಿ ಗ್ರಾಹಕರು ನಿರಂತರ ನಂಬಿಕೆ ಇಟ್ಟು ಸಹಕರಿಸಿದ ಎಲ್ಲಾ ಷೇರುದಾರ ಸದಸ್ಯರು, ಗ್ರಾಹಕರು ಮತ್ತು ಸಿಬ್ಬಂದಿ ವರ್ಗದವರಿಗೆ ಈ ಸಂದರ್ಭದಲ್ಲಿ ಕೃತಜ್ಞತೆ ಸಲ್ಲಿಸುತ್ತೇವೆ.

ಮುಂಬರುವ ದಿನಗಳಲ್ಲಿ ಇನ್ನಷ್ಟು ಹೊಸ ಆರ್ಥಿಕ ಯೋಜನೆಗಳೊಂದಿಗೆ ಸೊಸೈಟಿಯನ್ನು ಮತ್ತಷ್ಟು ಎತ್ತರಕ್ಕೆ ಒಯ್ಯುವ ಭರವಸೆ ನಮ್ಮದಾಗಿದೆ ಸೊಸೈಟಿಯ ಹಣಕಾಸು ಬಗ್ಗೆ ಸೂಚಿಸಿ ಸೊಸೈಟಿಯ ಉನ್ನತಿಗಾಗಿ ಸಲಹಿದರು.

ಈ ಸಂದರ್ಭದಲ್ಲಿ ಚಂದ್ರಶೇಖರ್ ಶೆಟ್ಟಿ, ಸದಾನಂದ ಗಾಯಕ್ವಾಡ್. ಸುಂದರ ಪೂಜಾರಿ, ಸಂಜಯ ಗೌಡ, ಹನುಮಂತ ಗುಜರ್, ಕಿರ್ತನ್ ಕೋಟ್ಯಾರಿ ಸೊಸೈಟಿಯ ಮಾಜಿ ನಿರ್ದೇಶಕರು, ಷೇರುದಾರರು, ಗ್ರಾಹಕರು, ಹಿತೈಷಿಗಳು, ಉನ್ನತಾಧಿಕಾರಿಗಳು ಹಾಜರಿದ್ದು, ಮತ್ತಿತರರು ಮಾತನಾಡಿ ಸೊಸೈಟಿಯ ಮುನ್ನಡೆಗೆ ಸಲಹಿದರು.


ಧನಲಕ್ಷ್ಮೀ, ಜಯಲಕ್ಷ್ಮೀ, ಮಹಾಗಣಪತಿ, ಶ್ರೀ ಗಂಗಾಧರೇಶ್ವರಸ್ವಾಮಿ, ಒಕ್ಕಲಿಗರ ಧೀಶಕ್ತಿ ದೈವೈಕ್ಯ ಜಗದ್ಗುರು ಬಾಲಗಂಗಾಧರನಾಥ ಸ್ವಾಮೀಜಿ ಮಹಾಗುರುಗಳಿಗೆ ಆದಿಯಲ್ಲಿ ಆರತಿ ಬೆಳಗಿಸಿ ಮಹಾಸಭೆಗೆ ಚಾಲನೆ ನೀಡಲಾಯಿತು. ಮಲ್ಲಿಕಾರ್ಜುನ ಸ್ವಾಮೀಜಿ ಕಾಂಜೂರ್‌ಮಾರ್ಗ್ ಪೂಜೆ ನೆರವೇರಿಸಿ ಹರಸಿದರು. ಸೊಸೈಟಿಯ ಪ್ರದೀಪ್‌ಕುಮಾರ್ ರಾಮೇ ಗೌಡ, ವಸೂಲಾತಿ ಅಧಿಕಾರಿ ಸುನೀಲ್ ಆರ್. ಮೋಕಾಶಿ ಇನ್ನಿತರ ಸಿಬ್ಬಂದಿಗಳು, ದೈನಂದಿನ ಹಣಸಂಗ್ರಹಾ ಪ್ರತಿನಿಧಿಗಳು ಉಪಸ್ಥಿತರಿದ್ದು, ಶ್ರೀಕಾಂತ್ ಡಿ.ರಾವ್ ವಾರ್ಷಿಕ ವರದಿ ವಾಚಿಸಿದರು.

ಸೊಸೈಟಿಯ ಶಾಖಾ ಉಸ್ತುವಾರಿ ಲತಾ ಧನ್‌ರಾಜ್ ಗೌಡ ಲೆಕ್ಕಪತ್ರಗಳ ಮಾಹಿತಿಯನ್ನಿತ್ತರು. ಉನ್ನತಾಧಿಕಾರಿಗಳಾದ ಶಿಲ್ಪಾ ಸಂತೋಷ್ ಮಾಂಡವ್ಕರ್ ವಾರ್ಷಿಕ ಲೆಕ್ಕಪತ್ರಗಳನ್ನು ಮಂಡಿಸಿದರು.ಬಜೆಟ್ ವರದಿ ಬಗ್ಗೆ ಆಶಾರಾಣಿ ಗೌಡ ಮಾಹಿತಿ ನೀಡಿದರು.

ಸೊಸೈಟಿಯ ಹಿರಿಯ ಪ್ರಬಂಧಕ ಪರ್ಶುರಾಮ್ ಕಿಶನ್ ದೌಂಡ್ ಸ್ವಾಗತಿಸಿ, ಸಭಾಕಲಾಪ ನಿರ್ವಹಿಸಿ ಗತ ಸಾಲಿನ ವಾರ್ಷಿಕ ಕಾರ್ಯಚಟುವಟಿಕೆಗಳ ಮಾಹಿತಿಯನ್ನಿತ್ತು ಧನ್ಯವದಿಸಿದರು.

### ಮಾಜಿ ಪ್ರಧಾನಿ, ಕ್ರಿಕೆಟಿಗ ಇಮ್ರಾನ್‌ಖಾನ್ ಪರ ಧ್ವನಿಎತ್ತಿದ ಕಪಿಲ್‌ದೇವ್

# ಜೈಲಿನಲ್ಲಿ ಅತ್ಯುತ್ತಮ ವೈದ್ಯಕೀಯ ನೆರವು ಮೂಲಸೌಕರ್ಯ ಒದಗಿಸಲು ಒತ್ತಾಯ



**ನವದೆಹಲಿ, ಆ.25:** ಭಾರತ ಕ್ರಿಕೆಟ್ ತಂಡದ ದಿಗ್ಗಜ ಹಾಗೂ ವಿಶ್ವಕಪ್ ವಿಜೇತ ಮಾಜಿ ನಾಯಕ ಕಪಿಲ್ ದೇವ್ ಅವರು ಪಾಕಿಸ್ತಾನದ ಮಾಜಿ ಪ್ರಧಾನಿ, ಮಾಜಿ ಕ್ರಿಕೆಟಿಗ ಇಮ್ರಾನ್ ಖಾನ್ ಪರ ಧ್ವನಿ ಎತ್ತಿದ್ದಾರೆ. ಪ್ರಸ್ತುತ ಜೈಲುವಾಸ ಅನುಭವಿಸುತ್ತಿರುವ ಇಮ್ರಾನ್ ಖಾನ್ ಅವರಿಗೆ ಅತ್ಯುತ್ತಮ ವೈದ್ಯಕೀಯ ನೆರವು ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ. ಇಮ್ರಾನ್ ಖಾನ್ ಅವರನ್ನು ಮಾನವೀಯತೆಯ ಆಧಾರದ ಮೇಲೆ ಮತ್ತು ಘನತೆಯಿಂದ ನಡೆಸಿಕೊಳ್ಳಬೇಕು ಎನ್ನುವುದು ಕಪಿಲ್ ದೇವ್ ಅವರ ಕಾಳಜಿಯಾಗಿದೆ. ದೆಹಲಿಯಲ್ಲಿ ನಡೆದ ಡಿಪಿ ವರ್ಲ್ಡ್ ಇಂಡಿಯಾ ಚಾಂಪಿಯನ್‌ಶಿಪ್ ಉದ್ಘಾಟನಾ ಸಮಾರಂಭದ ನೇಪಥ್ಯದಲ್ಲಿ ಮಾತನಾಡಿದ ಅವರು, ಪಾಕಿಸ್ತಾನದ ಕಾನೂನು ಮತ್ತು ನಿಯಮಗಳು ಹೇಗಿವೆ ಎಂಬುದು ತಿಳಿದಿಲ್ಲ, ಆದರೆ ಭ್ರಷ್ಟಾಚಾರ ಮತ್ತಿತರ ಆರೋಪಗಳ ಮೇಲೆ ಜೈಲಿನಲ್ಲಿರುವ ಕೈದಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಕನಿಷ್ಠ ಮಾನವೀಯತೆಯಾಗಿದೆ. ಇಮ್ರಾನ್ ಖಾನ್ ಕೇವಲ ಒಬ್ಬ ಸಾಮಾನ್ಯ ಕೈದಿಯಲ್ಲ, ಅವರು ದೇಶದ ಪ್ರಧಾನಿಯಾಗಿ ಹಾಗೂ ವಿಶ್ವದ ಶ್ರೇಷ್ಠ ಕ್ರಿಕೆಟಿಗನಾಗಿ ಸೇವೆ ಸಲ್ಲಿಸಿದವರು. ಹೀಗಾಗಿ ಅವರಿಗೆ ಗೌರವಯುತವಾದ ಅತ್ಯುತ್ತಮ ವೈದ್ಯಕೀಯ ಚಿಕಿತ್ಸೆ ಸಿಗಲೇಬೇಕು. ಇದು ಕೇವಲ ಕಳಕಳಿಯ ವಿನಂತಿ ಎಂದಿದ್ದಾರೆ.'ಳೆಯ ಸ್ನೇಹಿತನಿಗೆ ನನ್ನ ಬೆಂಬಲ ಇಮ್ರಾನ್ ಖಾನ್ ಬಂಧನದ ನಂತರ ಪಾಕಿಸ್ತಾನದ ವಾಸಿಂ ಅಕ್ರಮ್ ಹಾಗೂ ವಕಾರ್ ಯೂನಿಸ್ ಹೊರತುಪಡಿಸಿ ಬೇರೆ ಯಾವುದೇ ಪ್ರಮುಖ ಕ್ರಿಕೆಟಿಗರು ಬಹಿರಂಗವಾಗಿ ಬೆಂಬಲ ವ್ಯಕ್ತಪಡಿಸಿಲ್ಲ. ಈ ಬಗ್ಗೆ ಮಾತನಾಡಿದ ಕಪಿಲ್ ದೇವ್, ಪಾಕಿಸ್ತಾನದ ಆಟಗಾರರನ್ನು ದೂರುವುದರಲ್ಲಿ ಅರ್ಥವಿಲ್ಲ. ಏಕೆಂದರೆ ಅವರು ಅದೇ ದೇಶದಲ್ಲಿ ವಾಸಿಸುತ್ತಿದ್ದಾರೆ ಮತ್ತು ಅಲ್ಲಿನ ಪರಿಸ್ಥಿತಿಗಳಿಗೆ ಅನುಗುಣವಾಗಿರಬೇಕಾಗುತ್ತದೆ ಎಂದರು. ಆದರೆ ಹೊರಗಿನಿಂದ ನಾವು ನಮ್ಮ ಹಳೆಯ ಸ್ನೇಹಿತನನ್ನು ಬೆಂಬಲಿಸುತ್ತೇವೆ. ನಾವು ಒಟ್ಟಿಗೆ ಆಡಿದ್ದೇವೆ ಹಾಗೂ ಅವರ ಕ್ರಿಕೆಟ್ ಕೌಶಲ್ಯವನ್ನು ಸದಾ ಗೌರವಿಸುತ್ತೇವೆ. ಹೀಗಾಗಿ ಅವರ ಕಷ್ಟದ ಸಮಯದಲ್ಲಿ ಬೆಂಬಲವಾಗಿ ನಿಲ್ಲುವುದು ನಮ್ಮ ಕರ್ತವ್ಯ ಎಂದು ಅಭಿಮಾನದಿಂದ ನುಡಿದಿದ್ದಾರೆ. ಶ್ರೀಲಂಕಾ ವಿರುದ್ಧದ ಕೊಲಂಬೊ ಟೆಸ್ಟ್‌ನ ಮೊದಲ ದಿನದಾಟದಲ್ಲಿ ಭಾರತದ ಯಶಸ್ವಿ ಜೈಸ್ವಾಲ್ ಹಾಗೂ ಲಂಕಾದ ವೇಗಿ ಅಸಿತಾ ಫರ್ನಾಂಡೊ ನಡುವೆ ನಡೆದ ವಾಗ್ವಾದದ ಬಗ್ಗೆಯೂ ಕಪಿಲ್ ದೇವ್ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಆಟದ ಭರದಲ್ಲಿ ಇಂತಹ ಘಟನೆಗಳು ಸಾಮಾನ್ಯ, ಅದನ್ನು ಅಲ್ಲೇ ಬಿಟ್ಟು ಮುಂದೆ ಸಾಗಬೇಕು. ಪ್ರತಿಯೊಬ್ಬ ಆಟಗಾರನಿಗೂ ತನ್ನದೇ ಆದ ವ್ಯಕ್ತಿತ್ವ ಹಾಗೂ ಆಟದ ಶೈಲಿ ಇರುತ್ತದೆ. ಆದರೆ ಆಟಗಾರರು ಎಲ್ಲೇ ಮೀರದಂತೆ ನೋಡಿಕೊಳ್ಳುವ ಜವಾಬ್ದಾರಿ ಆಯಾ ಕ್ರಿಕೆಟ್ ಮಂಡಳಿಗಳ ಮೇಲಿದೆ ಎಂದು ಕಿವಿಮಾತು ಹೇಳಿದರು.

### ವಿಶ್ವ ಕ್ರಿಕೆಟ್‌ನ 22 ಮಾಜಿ ನಾಯಕರಿಂದ ಪತ್ರ

ಇಮ್ರಾನ್ ಖಾನ್ ಆರೋಗ್ಯದ ಕುರಿತು ಕಳವಳ ವ್ಯಕ್ತಪಡಿಸಿದವರ ಪೈಕಿ ಕಪಿಲ್ ದೇವ್ ಒಬ್ಬರೇ ಅಲ್ಲ. ಭಾರತದ ಸುನೀಲ್ ಗವಾಸ್ಕರ್ ಅವರನ್ನೊಳಗೊಂಡಂತೆ ವಿಶ್ವ ಕ್ರಿಕೆಟ್‌ನ 22 ಮಂದಿ ಮಾಜಿ ನಾಯಕರು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಕಳೆದ ಆರು ತಿಂಗಳಲ್ಲಿ ಎರಡನೇ ಬಾರಿ ಪತ್ರ ಬರೆದಿದ್ದಾರೆ. ಗ್ರೇಗ್ ಚಾಪೆಲ್, ಇಯಾನ್ ಚಾಪೆಲ್, ಅಲನ್ ಬಾರ್ಡರ್, ಕ್ಲೈವ್ ಲಾಯ್ಡ್, ಅರ್ಜುನ ರಣತುಂಗ, ಸ್ಟೀವ್ ವಾ ಅವರಂತಹ ಘಟಾನುಘಟಿಗಳು ಈ ಪತ್ರಕ್ಕೆ ಸಹಿಹಾಕಿದ್ದು, ಅಡಿಯಾಲಾ ಜೈಲಿನಲ್ಲಿರುವ ಇಮ್ರಾನ್ ಖಾನ್‌ಗೆ ಸೂಕ್ತ ವೈದ್ಯಕೀಯ ಸೌಲಭ್ಯ ಒದಗಿಸುವಂತೆ ಪಾಕಿಸ್ತಾನದ ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಪಾಲಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.